
ಸಂಪುಟ: 04 ಸಂಚಿಕೆ: 95 ಪುಟಗಳು: 08 ಮಂಗಳವಾರ 18 ಜೂನ್ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಒಬ್ಬ ಒಳ್ಳೆಯ ವ್ಯಕ್ತಿಗೆ ಮೋಸ ಮಾಡುವುದು ಎಂದರೆ ಕೈಯಲ್ಲಿರುವ ವಜ್ರವನ್ನು ಎಸೆದು ಕಲ್ಲನ್ನು ಎತ್ತಿಕೊಂಡಂತೆ



## ಯಡಿಯೂರಪ್ಪಗೆ ಸತತ 3 ಗಂಟೆ ವಿಚಾರಣೆ

• ಉದಯವಾಹಿನಿ ಬೆಂಗಳೂರು

ಪೋಕ್ಸೋ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಿಎಂ ಬಿ.ಎಸ್ ಯಡಿಯೂರಪ್ಪ ಸತತ 3 ಗಂಟೆ ಸಿಐಡಿ ವಿಚಾರಣೆಗೆ ಹಾಜರಾಗಿದ್ದಾರೆ.ಬೆಂಗಳೂರಿನ ಸಿಐಡಿ ಕಚೇರಿಗೆ ಹಾಜರಾದ ಮಾಜಿ ಸಿಎಂ ಬಿ.ಎಸ್ ಯಡಿಯೂರಪ್ಪ ಸತತ 3 ಗಂಟೆ ಸಿಐಡಿ ಅಧಿಕಾರಿಗಳ ಎದುರು ವಿಚಾರಣೆಗೆ ಹಾಜರಾದರು.

ಬಾಲಕಿಗೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದಲ್ಲಿ ಯಡಿಯೂರಪ್ಪ ವಿರುದ್ಧ ಬೆಂಗಳೂರಿನ ಸದಾಶಿವನಗರ ಠಾಣೆಯಲ್ಲಿ ಪೋಕ್ಸೋ ಕೇಸ್ ದಾಖಲಾಗಿತ್ತು.

ಈ ವಿಚಾರವಾಗಿ ಬಿ.ಎಸ್.ಯಡಿಯೂರಪ್ಪಗೆ ಪೊಲೀಸರು ನೋಟಿಸ್ ನೀಡಿ ತನಿಖೆಗೆ ಹಾಜರಾಗುವಂತೆ ಸೂಚಿಸಿದ್ದರು. ಆದರೆ ಯಡಿಯೂರಪ್ಪ ವಿಚಾರಣೆಗೆ ಹಾಜರಾಗಿರಲಿಲ್ಲ.

ನಂತರ ತಮ್ಮ ವಿರುದ್ಧದ ಕೇಸ್ ರದ್ದು ಮಾಡುವಂತೆ ಹೈಕೋರ್ಟ್ ನಲ್ಲಿ ಅರ್ಜಿ ಸಲ್ಲಿಸಿದ್ದರು. ಹಾಗೂ ಬಂಧನ ಭೀತಿಯಿಂದ ನಿರೀಕ್ಷಣಾ ಜಾಮೀನಿಗೆ ಕೂಡ ಅವರು ಅರ್ಜಿ ಸಲ್ಲಿಸಿದ್ದರು.

## 1,419 ಶಾಲೆಗಳಲ್ಲಿ ಆಂಗ್ಲಮಾಧ್ಯಮ ತರಗತಿ ಪ್ರಾರಂಭಿಸಲು ಒಪ್ಪಿಗೆ



• ಉದಯವಾಹಿನಿ, ಬೆಂಗಳೂರು

1,419 ಸರ್ಕಾರಿ ಶಾಲೆಗಳಲ್ಲಿ ಆಂಗ್ಲ ಮಾಧ್ಯಮದಲ್ಲಿ ತರಗತಿ ಪ್ರಾರಂಭಿಸಲು ರಾಜ್ಯ ಸರ್ಕಾರ ಒಪ್ಪಿಗೆ ನೀಡಿದೆ. ರಾಜ್ಯ ಸರ್ಕಾರ 2024-25ನೇ ಸಾಲಿನಿಂದ ರಾಜ್ಯಾದ್ಯಂತ 75ಕ್ಕೂ ಹೆಚ್ಚು ಮಕ್ಕಳ ದಾಖಲಾತಿ ಇರುವ 1,419 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಹಾಲಿ ಇರುವ ಕನ್ನಡ ಮಾಧ್ಯಮದ ಜೊತೆಗೆ 1ನೇ ತರಗತಿಯಿಂದ ಆಂಗ್ಲ ಮಾಧ್ಯಮದಲ್ಲಿ (ದ್ವಿ ಭಾಷಾ ಮಾಧ್ಯಮ) ತರಗತಿಗಳನ್ನು ಪ್ರಾರಂಭಿಸಲು ಒಪ್ಪಿಗೆ ನೀಡಿ ಆದೇಶಿಸಿದೆ. ಆಯ್ಕೆಯಾಗಿರುವ ಶಾಲೆಗಳ ಪೈಕಿ ಕಲಬುರಗಿ ಪ್ರಾದೇಶಿಕ ವಿಭಾಗದ 872, ಬೆಂಗಳೂರು ವಿಭಾಗದ 297, ಮೈಸೂರು ವಿಭಾಗದ 140 ಮತ್ತು ಧಾರವಾಡ ವಿಭಾಗದ 110 ಶಾಲೆಗಳು ಸೇರಿವೆ ಎಂದು ಸರ್ಕಾರ ಪ್ರಕಟಣೆ ಹೊರಡಿಸಿದೆ.

## ದರ್ಶನ್ ಲೈಟ್‌ಬಾಯ್ ಆಗಿರಲಿಲ್ಲ, ಮೋದಿ ಎಂದಿಗೂ ಚಹಾ ಮಾರಿಲ್ಲ

• ಉದಯವಾಹಿನಿ, ಬೆಂಗಳೂರು

ಕನ್ನಡ ಚಲನಚಿತ್ರೋದ್ಯಮದ ಮೂಲಗಳು ನಟ ದರ್ಶನ್ ಅವರು ಹೇಳಿಕೊಂಡಂತೆ 'ಲೈಟ್ ಬಾಯ್' ಆಗಿರಲಿಲ್ಲ ಎಂದು ನಟ ಚೇತನ್ ಅಹಿಂಸಾ ಹೇಳಿದ್ದಾರೆ. ಈ ಬಗ್ಗೆ ಸೋಶಿಯಲ್ ಮೀಡಿಯಾದಲ್ಲಿ ಪೋಸ್ಟ್ ಹಂಚಿಕೊಂಡಿರುವ ನಟ ಚೇತನ್ ಅಹಿಂಸಾ ಕನ್ನಡ ಚಲನಚಿತ್ರೋದ್ಯಮದ ಮೂಲಗಳು ನಟ ದರ್ಶನ್ ಅವರು ಹೇಳಿಕೊಂಡಂತೆ 'ಲೈಟ್ ಬಾಯ್' ಆಗಿರಲಿಲ್ಲ, ಆದರೆ ಛಾಯಾಗ್ರಾಹಕನ ಸಹಾಯಕರಾಗಿದ್ದರು- ಇದು ಚಲನಚಿತ್ರದ ಪರಿಭಾಷೆಯಲ್ಲಿ ದೊಡ್ಡ ವ್ಯತ್ಯಾಸವಾಗಿದೆ. ಉನ್ನತ ಮಟ್ಟಕ್ಕೆ ಬೆಳದಿರೋ ವ್ಯಕ್ತಿಗಳಿಗೆ ಇಂತಹ ದೋಷಪೂರಿತ ಉತ್ಪ್ರೇಕ್ಷೆಗಳು ಹೊಸದೇನಲ್ಲ. ಪ್ರಧಾನಿ ಮೋದಿ ಎಂದಿಗೂ ಚಹಾವನ್ನು ಮಾರಾಟ ಮಾಡಿಲ್ಲ ಮತ್ತು ಸಿಎಂ ಸಿದ್ದು ಎಂದಿಗೂ ಅಹಿಂದಾದ ನಾಯಕರಾಗಿಲ್ಲ, ಇಂತಹ ಆಧಾರರಹಿತ ಬಿಲ್ಡ್-ಅಪ್ ತಗ್ಗಿಸಬೇಕು.

## ಸಿದ್ದರಾಮಯ್ಯ ತಂತ್ರ-ಕುತಂತ್ರ ರಾಜಕಾರಣಿ : ನಟ ಚೇತನ್ ವ್ಯಂಗ್ಯ

• ಉದಯವಾಹಿನಿ, ಬೆಂಗಳೂರು

ತಂತ್ರ-ಕುತಂತ್ರ ರಾಜಕಾರಣಿ, ಸಿಎಂ ಸಿದ್ದರಾಮಯ್ಯ ಹೇಳುವುದು ಒಂದು, ಮಾಡುವುದ ಮತ್ತೊಂದು ಅಂತ ನಟ ಚೇತನ್ ಅಹಿಂಸ ಹೇಳಿದ್ದಾರೆ. ಈ ಬಗ್ಗೆ ತಮ್ಮ ಫೇಸ್‌ಬುಕ್ ಖಾತೆಯಲ್ಲಿ ಬರೆದುಕೊಂಡಿರುವ ಅವರು ಪೆಟ್ರೋಲ್-ಡೀಸೆಲ್ ದರ ಹೆಚ್ಚಳ ಮಾಡುವುದಿಲ್ಲ ಎಂದು ಮತದಾರರಿಗೆ ಭರವಸೆ ನೀಡಿದ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪೆಟ್ರೋಲ್ ತೆರಿಗೆಯನ್ನು ಶೇಕಡಾ 29.84 ರಷ್ಟು ಮತ್ತು ಡೀಸೆಲ್ ತೆರಿಗೆಯನ್ನು ಶೇಕಡಾ 18.44 ರಷ್ಟು ಹೆಚ್ಚಿಸಿದ್ದಾರೆ.ಇದು ರಾಜ್ಯ ಸರ್ಕಾರವು ತನ್ನ ಯೋಜಿತವಲ್ಲದ, ತ್ಯಾಪೆ ಹಚ್ಚೋ ಯೋಜನೆಗಳಿಗೆ ಹಣವನ್ನು ಸಂಗ್ರಹಿಸಲು ಮಾಡಿದ ಹಿಂಬಾಗಿಲ ಕಳ್ಳತನವಾಗಿದೆ ಅಂತ ಕಿಡಿಕಾರಿದ್ದಾರೆ.

## ಯಾರೂ ಕ್ಷಮಿಸಲಾರದ ಹೇಯ ಕೃತ್ಯ ; ತಪ್ಪಿತಸ್ಥರಿಗೆ ಶಿಕ್ಷೆಯಾಗಲಿ

• ಉದಯವಾಹಿನಿ, ಹಾವೇರಿ

ದರ್ಶನ್ ಹಾಗೂ ಗ್ಯಾಂಗ್‌ನಿಂದ ರೇಣುಕಾಸ್ವಾಮಿ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿರುವ ನಟ, ಮಾಜಿ ಸಚಿವ ಬಿ.ಸಿ.ಪಾಟೀಲ್, ರೇಣುಕಾಸ್ವಾಮಿ ಹತ್ಯೆ ದುರದೃಷ್ಟಕರ. ಕ್ಷಮಿಸಲಾರದ ಕೃತ್ಯ ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ಹಾವೇರಿಯಲ್ಲಿ ಮಾತನಾಡಿದ ಬಿ.ಸಿ.ಪಾಟೀಲ್, ರೇಣುಕಾಸ್ವಾಮಿ ಜೀವ ಮತ್ತೆ ವಾಪಾಸ್ ಬರಲ್ಲ. ಆದರೆ ಅವರ ಕುಟುಂಬಕ್ಕೆ ನ್ಯಾಯ ಸಿಗುವ ಕೆಲಸವಾಗಬೇಕು. ರೇಣುಕಾಸ್ವಾಮಿ ಹತ್ಯೆ ಯಾರೂ ಕ್ಷಮಿಸಲಾರದ ಕೃತ್ಯವಿದು. ಕೇಸ್‌ನಲ್ಲಿ ಯಾರೇ ತಪ್ಪಿತಸ್ಥರಾಗಿರಲಿ ಅವರಿಗೆ ಕಠಿಣ ಶಿಕ್ಷೆಯಾಗಬೇಕು ಎಂದು ಆಗ್ರಹಿಸಿದ್ದಾರೆ. ಕಾನೂನಿಗಿಂತ ದೊಡ್ಡವರು ಯಾರೂ ಇಲ್ಲ. ಕಾನೂನು ಎಲ್ಲಾವನ್ನೂ ಮೀರಿದ್ದು, ತಪ್ಪಿತಸ್ಥರಿಗೆ ಶಿಕ್ಷೆಯಾಗಬೇಕು ಎಂದು ಹೇಳಿದರು.

## ಬೆಲೆ ಹೆಚ್ಚಳ: ಪ್ರತಿಭಟನೆಗೆ ಎತ್ತಿನ ಗಾಡಿಯಲ್ಲಿ ಬಂದ ನಾಯಕರು

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರ ಪೆಟ್ರೋಲ್ ಬೆಲೆಯನ್ನ 3 ರೂ ಡೀಸೆಲ್ ಬೆಲೆಯನ್ನು 3.50 ಪೈಸಾ ಹೆಚ್ಚಿಸಿ ವಾಹನ ಸವಾರರ ಜೇಬಿಗೆ ಕತ್ತರಿ ಹಾಕಿದೆ. ಇದೇ ವಿಚಾರ ಇದೀಗ ರಾಜಕೀಯ ಸ್ವರೂಪ ಪಡೆದಿದ್ದು ಬಿಜೆಪಿ, ಜೆಡಿಎಸ್, ಕಾಂಗ್ರೆಸ್ ಮಧ್ಯೆ ವಾಕ್ಸಮರಕ್ಕೆ ವೇದಿಕೆಯಾಗಿದೆ. ಬಿಜೆಪಿ ನಾಯಕರು ಬೆಲೆ ಏರಿಕೆಯ ವಿರುದ್ಧ ಸಮರ ಸಾರಿದ್ದು, ಎತ್ತಿನ ಗಾಡಿಯಲ್ಲಿ ವಿಪಕ್ಷ ನಾಯಕ ಅಶೋಕ, ರಾಜ್ಯಾಧ್ಯಕ್ಷ ವಿಜಯೇಂದ್ರ ಹಾಗೂ ಬಿಜೆಪಿ ನಾಯಕರು ಪ್ರತಿಭಟನೆಗೆ ಬಂದಿದ್ದಾರೆ. ಕಾಂಗ್ರೆಸ್ ಸರ್ಕಾರದ ವಿರುದ್ಧ ಘೋಷಣೆ ಕೂಗುತ್ತಾ, ಪ್ಲೇ ಕಾರ್ಡ್ ಹಿಡಿದು ಬಿಜೆಪಿ ನಾಯಕರು ಆಗಮಿಸಿದರು. ಮಾರಾಟ ಮಾರಾಟ ಕರ್ನಾಟಕ ಮಾರಾಟ, ವಿಧಾನಸೌಧ ಮಾರಾಟ ಎಂದು ಬಿಜೆಪಿ ನಾಯಕರು ಕಾಂಗ್ರೆಸ್ ಸರ್ಕಾರದ ವಿರುದ್ಧ ಘೋಷನೆ ಕೂಗಿದರು. ಅಯ್ಯಯ್ಯೋ ಅನ್ಯಾಯ ಎಂದು ಬಾಯಿ ಬಡಿದುಕೊಳ್ಳುತ್ತಿದ್ದು, ಬಿಜೆಪಿ ಪ್ರತಿಭಟನೆಯಲ್ಲಿ ಸಾವಿರಾರು ಕಾರ್ಯಕರ್ತರು ಭಾಗಿಯಾಗಿದ್ದಾರೆ.




## ಸರ್ಕಾರದ ಪೆಟ್ರೋಲ್ ಬಾಂಬ್

### ತೈಲ ದರ ಏರಿಸಿದ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ಭಾರೀ ಪ್ರತಿಭಟನೆ

ಸಿಎಂ ಸಿದ್ದರಾಮಯ್ಯನವರಿಗೆ ಬಿ.ವೈ.ವಿಜಯೇಂದ್ರ ಬಹಿರಂಗ ಸವಾಲ್

ಜಿಎಸ್‌ಟಿ ಹಣ ಕೊಟ್ಟಿದ್ದರೆ ಪೆಟ್ರೋಲ್, ಡೀಸೆಲ್ ದರ ಏರಿಕೆ ಅಗತ್ಯವಿಲ್ಲ

# ಪೆಟ್ರೋಲ್, ಡೀಸೆಲ್ ದರ ಬಿಜೆಪಿಗೆ ಭಾರ

**ತೈಲ ಹೊರೆ ಗ್ರಾಹಕರಿಗೆ ಬರೆ**

• ಉದಯವಾಹಿನಿ, ಬೆಂಗಳೂರು

ಡೀಸೆಲ್ ಮತ್ತು ಪೆಟ್ರೋಲ್ ಮೇಲಿನ ಮಾರಾಟ ತೆರಿಗೆಯನ್ನು ಹೆಚ್ಚಳ ಮಾಡಿರುವ ರಾಜ್ಯ ಸರ್ಕಾರದ ಕ್ರಮವನ್ನು ಖಂಡಿಸಿ ಪ್ರತಿಪಕ್ಷ ಬಿಜೆಪಿ ರಾಜ್ಯಾದ್ಯಂತ ಬೃಹತ್ ಪ್ರತಿಭಟನೆ ನಡೆಸಿತು. ರಾಜಧಾನಿ ಬೆಂಗಳೂರು, ಮಂಡ್ಯ, ದಕ್ಷಿಣ ಕನ್ನಡ, ಬೆಳಗಾವಿ, ಶಿವಮೊಗ್ಗ, ದಾವಣಗೆರೆ, ರಾಯಚೂರು, ಕೊಪ್ಪಳ, ಹುಬ್ಬಳ್ಳಿ-ಧಾರವಾಡ, ಹಾವೇರಿ ಸೇರಿದಂತೆ ರಾಜ್ಯದ ಜಿಲ್ಲಾ ಕೇಂದ್ರಗಳಲ್ಲಿ ವಿವಿಧ ಮೋರ್ಚಾಗಳ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ ಸರ್ಕಾರದ ಕ್ರಮವನ್ನು ತೀವ್ರವಾಗಿ ಖಂಡಿಸಲಾಯಿತು.


ಕೆಲವು ಕಡೆ ಕಾರಿಗೆ ಹಗ್ಗ ಕಟ್ಟಿ ಎಳೆದರೆ ಇನ್ನು ಕೆಲವು ಕಡೆ ಎತ್ತಿನ ಗಾಡಿ ಮೆರವಣಿಗೆ, ಶವಯಾತ್ರೆ, ತೆಂಗಿನಕಾಯಿ ಚಿಪ್ಪು, ಕರಪತ್ರ ಹಿಡಿದುಕೊಂಡು ವಿನೂತನವಾಗಿ ಪ್ರತಿಭಟನೆ ನಡೆಸಿ ಸರ್ಕಾರ ಜನವಿರೋಧಿ, ರೈತ ವಿರೋಧಿ ಎಂದು ಪ್ರತಿಭಟನೆ ನಿರತರು ಕಿಡಿಕಾರಿದರು. ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ನಡೆದ ಪ್ರತಿಭಟನೆಯಲ್ಲಿ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಅಶೋಕ್, ಉಪನಾಯಕ ಅರವಿಂದ್ ಬೆಲ್ಲದ್, ವಿಧಾನಪರಿಷತ್‌ನ ಮುಖ್ಯ ಸಚೇತಕ ಎನ್.ರವಿಕುಮಾರ್, ಮುಖಂಡರಾದ ಸಿ.ಟಿ.ರವಿ, ಭೈರತಿ ಬಸವರಾಜ್ ಸೇರಿದಂತೆ ಅನೇಕರು ಭಾಗವಹಿಸಿದ್ದರು. ಪ್ರತಿಭಟನೆಗೂ ಮುನ್ನ ಅಶೋಕ್ ನೇತೃತ್ವದಲ್ಲಿ ಫ್ರೀಡಂಪಾರ್ಕ್‌ಗೆ ಎತ್ತಿನಗಾಡಿಯಲ್ಲಿ ಆಗಮಿಸಿದರು. ದಾರಿಯುದ್ದಕ್ಕೂ ಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗಿದ ಪ್ರತಿಭಟನೆ ನಿರತರು ಈ ಸರ್ಕಾರ ಆದಷ್ಟು ಬೇಗ ತೊಲಗಲಿ ಎಂದು ಕಿಡಿಕಾರಿದರು.

ಮಂಡ್ಯದ ಸಂಜಯ ವೃತ್ತದಲ್ಲಿ ನಡೆದ ಪ್ರತಿಭಟನೆಯಲ್ಲಿ ನೂರಾರು ಸಂಖ್ಯೆಯ ಕಾರ್ಯಕರ್ತರು ಪಾಲ್ಗೊಂಡಿದ್ದರು. ಮೊದಲು ಬಾಯಿ ಬಾಯಿ ಬಡಿದುಕೊಂಡು ಪ್ರತಿಭಟನೆ ನಡೆಸಿದ ಕಾರ್ಯಕರ್ತರು ಸರ್ಕಾರದ ಬೊಕ್ಕಸವನ್ನು ದಿವಾಳಿ ಮಾಡಿರುವ ಕಾಂಗ್ರೆಸ್ ಸರ್ಕಾರ ಆದಷ್ಟು ಬೇಗ ಮನೆಗೆ ಹೋಗಲಿ ಎಂದು ವಾಗ್ದಾಳಿ ನಡೆಸಿದರು. ಇದೇ ರೀತಿ ದಕ್ಷಿಣಕನ್ನಡದಲ್ಲಿ ಅಣುಕು ಶವಯಾತ್ರೆ ನಡೆಸಿ ಸರ್ಕಾರಕ್ಕೆ ಬಿಸಿ ಮುಟ್ಟಿಸಿದರು. ಗ್ಯಾರಂಟಿಗಳಿಗೆ ಹಣ ಹೊಂದಿಸಲು ಸಾಧ್ಯವಾಗದ ಸರ್ಕಾರ ಜನರ ಜೇಬಿಗೆ ದರದ ಬರೆಯನ್ನು ಎಳೆದಿದೆ. ಬೇರೆ ರಾಜ್ಯಗಳಲ್ಲಿ ಅಷ್ಟಿತ್ತು, ಇಷ್ಟಿತ್ತು ಎನ್ನುವ ಬದಲು ಮೊದಲು ನೀವು ಕಡಿಮೆ ಮಾಡಿ ಎಂದು ಸವಾಲು ಹಾಕಿದರು. ಬೆಳಗಾವಿಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿವರೆಗೂ ಪ್ರತಿಭಟನೆ ನಡೆಸಿದ ಬಿಜೆಪಿಯವರು ದ್ವಿಚಕ್ರ ವಾಹನಗಳನ್ನು ತಳ್ಳಿಕೊಂಡೇ ಬಂದಿದ್ದರು. ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ಮಾಜಿ ಶಾಸಕ ಅನಿಲ್ ಬೆನಕೆ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು. ತುಮಕೂರಿನಲ್ಲಿ ಭದ್ರಾ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಶಾಸಕ ಜ್ಯೋತಿ ಗಣೇಶ್ ನೇತೃತ್ವದಲ್ಲಿ ಭದ್ರಮ್ಮ ವೃತ್ತದಿಂದ ಕನಕ ವೃತ್ತದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು. ಶಾಸಕ ಜ್ಯೋತಿ ಗಣೇಶ್ ಪ್ರತಿಭಟನೆಗೆ ಸೈಕಲ್ ಏರಿ ಬಂದಿದ್ದು ವಿಶೇಷವಾಗಿತ್ತು. ಹೀಗೆ ರಾಜ್ಯ ಸರ್ಕಾರದ ಜನವಿರೋಧಿ ನೀತಿ ಖಂಡಿಸಿ ಸಿಡಿದೆದ್ದಿರುವ ಬಿಜೆಪಿ ಮೊದಲ ಬಾರಿಗೆ ಬೃಹತ್ ಪ್ರತಿಭಟನೆಯನ್ನು ನಡೆಸಿದೆ.



ಪೆಟ್ರೋಲ್ ಡೀಸೆಲ್ ದರ ಏರಿಕೆಗೆ ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆ ನಡೆಸುತ್ತಿದೆ. ಪೆಟ್ರೋಲ್-ಡೀಸೆಲ್ ಮೇಲಿನ ತೆರಿಗೆ ಹೆಚ್ಚಳದ ಬಳಿಕವೂ ಬಿಜೆಪಿ ಆಡಳಿತದ ರಾಜ್ಯಗಳಿಗಿಂತ, ದಕ್ಷಿಣ ಭಾರತದ ರಾಜ್ಯಗಳಿಗಿಂತ ನಮ್ಮ ರಾಜ್ಯದಲ್ಲಿ ಇಂಧನ ಬೆಲೆ ಕಡಿಮೆ ಇದೆ. ತೆರಿಗೆ ಹೆಚ್ಚಳದ ಅನಿವಾರ್ಯತೆಯನ್ನು ಕೇಂದ್ರದ ಮೋದಿ ಸರ್ಕಾರ ಹೇಗೆ ಸೃಷ್ಟಿಸಿತು, ರಾಜ್ಯದ ಪಾಲಿನ ಹಣವನ್ನು ಕೊಡದೇ ಇರುವುದರಿಂದ ಈ ಪರಿಸ್ಥಿತಿಸೃಷ್ಟಿ ಆಗಿದೆ.

– ಸಿದ್ದರಾಮಯ್ಯ ಸಿಎಂ



ನಾವು ಅಂದು ಆಡಳಿತದಲ್ಲಿದ್ದಾಗ ಒಂದು ರೂ. ಬೆಲೆ ಹೆಚ್ಚಳ ಮಾಡಿದ್ದಕ್ಕೆ ಸರ್ಕಾರಕ್ಕೆ ಮಾನ ಮರ್ಯಾದೆ ಇದೆಯೇ ಎಂದು ಪ್ರಶ್ನಿಸಿದ್ದರು. ಈಗ ಪೆಟ್ರೋಲ್ ದರವನ್ನು 3 ರೂ. 50 ಪೈಸೆ ಹಾಗೂ ಡೀಸೆಲ್ ದರವನ್ನು 3 ರೂ.ಗೆ ಏರಿಕೆ ಮಾಡಿದ್ದಾರೆ. ಹಾಗಾದರೆ ನಿಮ್ಮ ಸರ್ಕಾರಕ್ಕೆ ಮಾನ ಮರ್ಯಾದೆ ಇದೆಯೇ.

–ಆರ್.ಅಶೋಕ್ ಪ್ರತಿಪಕ್ಷದ ನಾಯಕ

1. ಬೈಕ್ ಹೊತ್ತು ಪ್ರತಿಭಟಿಸಿದ ಬಿಜೆಪಿ ಕಾರ್ಯಕರ್ತರು.
2. ಚಕ್ಕಡಿ ಮೇಲೆ ಬೈಕ್ ಇಟ್ಟು ಪ್ರತಿಭಟನೆ!
3. ಇಂಧನ ದರ ಏರಿಕೆ ಖಂಡಿಸಲು ಹಲವು ರೀತಿಯ ಪ್ರತಿಭಟನೆ
4. ಬಿಜೆಪಿ ಆಡಳಿತದ ರಾಜ್ಯಗಳಿಗಿಂತ ನಮ್ಮ ರಾಜ್ಯದಲ್ಲಿ ಇಂಧನ ಬೆಲೆ ಕಡಿಮೆ ಇದೆ
5. ಕೇಂದ್ರ ಸರ್ಕಾರ ನಮ್ಮ ಜಿಎಸ್‌ಟಿ ಪಾಲು ಕೊಟ್ಟಿದ್ದರೆ ನಮಗೆ ತೆರಿಗೆ ಹೆಚ್ಚಿಸುವ ಅಗತ್ಯವೇ ಬೀಳುತ್ತಿರಲಿಲ್ಲ

**ಬಿಜೆಪಿಗರ ವಿರುದ್ಧ ಜಮೀರ್ ಆಕ್ರೋಶ**

ಪೆಟ್ರೋಲ್ ಹಾಗೂ ಡೀಸೆಲ್ ಬೆಲೆ ಹೆಚ್ಚು ಮಾಡಲಾಗಿದೆ ಎಂದು ಬೊಬ್ಬೆ ಹಾಕುತ್ತಿರುವ ಬಿಜೆಪಿ ನಾಯಕರು ಅವರ ಆಡಳಿತದಲ್ಲಿ ಶತಕದ ಗಡಿ ದಾಟಿದಾಗ ಯಾಕೆ ಧ್ವನಿ ಎತ್ತಲಿಲ್ಲ ಎಂದು ಸಚಿವ ಜಮೀರ್ ಅಹಮದ್ ಖಾನ್ ಆಕ್ರೋಶ ವ್ಯಕ್ತಪಡಿಸಿದ್ದಾರೆ. 2013 ರಲ್ಲಿ ಯುಪಿಎ ಸರ್ಕಾರ ಇದ್ದಾಗ ಪೆಟ್ರೋಲ್ -ಡೀಸೆಲ್, ಅಡುಗೆ ಅನಿಲ ಬೆಲೆ ಎಷ್ಟು ಇತ್ತು..? ಬಿಜೆಪಿ ಸರ್ಕಾರ ಹತ್ತು ವರ್ಷಗಳಲ್ಲಿ ಎಷ್ಟು ಹೆಚ್ಚು ಮಾಡಿ ಜನರ ಮೇಲೆ ಭಾರ ಹಾಕಿತು ಎಂಬುದು ಗೊತ್ತಿದೆ. ಈಗಲೂ ಪೆಟ್ರೋಲ್ ಮತ್ತು ಡಿಸೇಲ್ ಮೇಲೆ ಕೇಂದ್ರ ಅಬಕಾರಿ ಸುಂಕ ಕರ್ನಾಟಕದಲ್ಲಿ ಹೆಚ್ಚು ಸಂಗ್ರಹ ಮಾಡಲಾಗುತ್ತಿದೆ ಎಂದು ದೂರಿದ್ದಾರೆ. ಕರ್ನಾಟಕದಲ್ಲಿ ತೆರಿಗೆ ಹೆಚ್ಚಳ ನಂತರ ಪೆಟ್ರೋಲ್ 102.85 ರೂ., ಡಿಸೇಲ್ 88.91 ರೂ. ಇದೆ. ಆದರೆ ದಕ್ಷಿಣ ರಾಜ್ಯಗಳಿಗೆ ಹೋಲಿಕೆ ಮಾಡಿದರೆ ಈಗಲೂ ನಮದೇ ಕಡಿಮೆ ಎಂದರು.

**ಇಂಧನ ಬೆಲೆ ಏರಿಕೆ ನಾಚಿಕೆಗೇಡಿನ ಸರ್ಕಾರ**

ಜನರಿಗೆ ಗ್ಯಾರಂಟಿ ನೀಡಲು ಈ ರೀತಿಯಾದ ದರ ಏರಿಕೆ ಅನಿವಾರ್ಯ ಎಂದು ರಾಜ್ಯ ಸರ್ಕಾರದ ಕ್ರಮವನ್ನು ಸಮರ್ಥಿಸಿಕೊಂಡಿರುವುದು ನಾಚಿಕೆಗೇಡಿನ ಸಂಗತಿ ಎಂದು ಕಿಡಿಕಾರಿದ್ದಾರೆ. ಬೇರೆ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ ಪೆಟ್ರೋಲ್ / ಡೀಸೆಲ್ ದರ ಕಡಿಮೆ ಎಂದು ತಪ್ಪು ಮಾಹಿತಿ ನೀಡಿದ್ದಾರೆ ಅಂಡಮಾನ್ ದ್ವೀಪದಲ್ಲಿ ಪೆಟ್ರೋಲ್ ದರ ಅತ್ಯಂತ ಕಡಿಮೆ ಇದೆ ಹಾಗೂ ಆಂಧ್ರ ಮತ್ತು ತೆಲಂಗಾಣದಲ್ಲಿ ಅತ್ಯಂತ ಹೆಚ್ಚಾಗಿದೆ. ಪೆಟ್ರೋಲ್ ಹಾಗೂ ಡೀಸೆಲ್ ಮೇಲೆ ಕೇಂದ್ರ ಸರ್ಕಾರ ವಿಧಿಸುವ ಅಬಕಾರಿ ಸುಂಕ ರೂ.19.90 (ಪ್ರತಿ ಲೀಟರ್ ಮೇಲೆ) ಆಗಿದೆ, ಅದೇ ಕಾಂಗ್ರೆಸ್ ಸರ್ಕಾರದ 24.17 (ಪ್ರತಿ ಲೀಟರ್) ಆಗಿದೆ. ಪೆಟ್ರೋಲ್ ಮೇಲೆ ರಾಜ್ಯ ಸರ್ಕಾರ ಹಾಕುವ ಕೇಂದ್ರ ಸರ್ಕಾರದ ಎಕ್ಸೈಸ್ ಡ್ಯೂಟಿಗಿಂತ ಹೆಚ್ಚಾಗಿದೆ.

## ರಾಜ್ಯದ ಜನತೆಗೆ ಮಾಡುವ ದ್ರೋಹ: ಮಾಜಿ ಸಿಎಂ ಬೊಮ್ಮಾಯಿ

### ಗ್ಯಾರೆಂಟಿ ಹೆಸರಿನಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯದೇ ಪ್ರಗತಿ ಶೂನ್ಯ


• ಉದಯವಾಹಿನಿ, ಬೆಂಗಳೂರು

ರಾಜ್ಯದ ಕಾಂಗ್ರೆಸ್ ಸರ್ಕಾರ ಗ್ಯಾರೆಂಟಿ ಕೊಡುವ ನೆಪದಲ್ಲಿ ರಾಜ್ಯದ ಬಡವರ ಮೇಲೆ ತೆರಿಗೆ ಹಾಕಿ, ಬೇರೆ ರಾಜ್ಯಗಳಿಗೆ ಹೋಲಿಕೆ ಮಾಡುವ ಮೂಲಕ ರಾಜ್ಯದ ಸಾಮಾನ್ಯ ಜನತೆಗೆ ದ್ರೋಹ ಮಾಡುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ.

ಈ ಕುರಿತು ಎಕ್ಸ್ ಮೂಲಕ ಸರಣಿ ಟ್ವೀಟ್ ಮಾಡಿರುವ ಅವರು, ಗ್ಯಾರೆಂಟಿಗಳ ಹೆಸರಿನಲ್ಲಿ ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯದೇ ರಾಜ್ಯದ ಪ್ರಗತಿ ಶೂನ್ಯವಾಗಿದೆ. ರಾಜ್ಯ ಆರ್ಥಿಕವಾಗಿ ದಿವಾಳಿಯಾಗಿದ್ದು ಇದನ್ನು ಸರಿಪಡಿಸಲು ಹಲವಾರು ವರ್ಷ ಬೇಕು. ಇದಕ್ಕೆ ರಾಜ್ಯ ಕಾಂಗ್ರೆಸ್ ಸರ್ಕಾರವೇ ನೇರ ಹೊಣೆಯಾಗಿದೆ ಎಂದು ಹೇಳಿದ್ದಾರೆ.

ಸಾಮಾನ್ಯರ ಮೇಲೆ ಹೊರೆ ಹಾಕಿ ಬೇರೆ ರಾಜ್ಯಗಳಿಗೆ ವ್ಯಾಪಾರ ತೊಂದರೆಯಾಗುತ್ತದೆ ಎಂದು ಹೇಳಿ ಪಕ್ಕದ ರಾಜ್ಯಗಳ ಮಿತ್ರ ಪಕ್ಷಗಳ ಹಿತ ಕಾಯುವ ಮೂಲಕ ರಾಜ್ಯದ ಜನತೆಗೆ ದ್ರೋಹ ಮಾಡುತ್ತಿರುವುದು ರಾಜದ್ರೋಹ ಮಾಡಿದಂತೆ. ಬೇರೆ ರಾಜ್ಯಗಳಿಗೆ ಹೋಲಿಕೆ ಮಾಡಿದರೆ ರಾಜ್ಯದಲ್ಲಿ ಪೆಟ್ರೋಲ್, ಡಿಸೇಲ್ ದರ ಕಡಿಮೆ ಇದೆ ಎಂದು ಬಡವರ ಮೇಲೆ ಭಾರ ಹಾಕುವುದು ಯಾವ ನ್ಯಾಯ?


ದರ ಏರಿಕೆ ಮಾಡಿ ಸಮರ್ಥನೆ ಮಾಡಿಕೊಳ್ಳುತ್ತಿರುವ ಮುಖ್ಯಮಂತ್ರಿಯವರ ಹೇಳಿಕೆ ಜನ ವಿರೋಧಿಯಾಗಿದೆ ಎಂದು ಹೇಳಿದ್ದಾರೆ. ಉಚಿತ ಗ್ಯಾರೆಂಟಿ ಕೊಡುತ್ತಿರುವುದಾಗಿ ಹೇಳಿ ಬಡವರ ಮೇಲೆ ತೆರಿಗೆ ಹಾಕಿ ಅವರಿಂದಲೇ ಹಣ ಸುಲಿದು ಕಾಂಗ್ರೆಸ್ ತನ್ನ ರೊಟ್ಟಿ ಸುಟ್ಟುಕೊಂಡು ರಾಜಕೀಯ ಲಾಭ ಮಾಡಿಕೊಳ್ಳುವುದು ಯಾವ ನ್ಯಾಯ ಎಂದು ಪ್ರಶ್ನಿಸಿದ್ದಾರೆ



**ಜನರು ಕಾಂಗ್ರೆಸ್‌ಗೆ ತಕ್ಕ ಉತ್ತರ**

## ವಿಚಾರಣೆಯಲ್ಲಿ ಪಾರದರ್ಶಕತೆ ಬೇಕು

• ಉದಯವಾಹಿನಿ, ಬೆಂಗಳೂರು



ದರ್ಶನ್ ಇದೀಗ ರೇಣುಕಾಸ್ವಾಮಿ ಕೊಲೆ ಪ್ರಕರಣವಾಗಿ ಅರೆಸ್ಟ್ ಆಗಿದ್ದಾರೆ. ಸುದೀಪ್ ಬೆನ್ನಲ್ಲೇ ದರ್ಶನ್ ಪ್ರಕರಣದ ಬಗ್ಗೆ ಉಪೇಂದ್ರ ಫಸ್ಟ್ ರಿಯಾಕ್ಷನ್ ಕೊಟ್ಟಿದ್ದಾರೆ. ಸಾರ್ವಜನಿಕ ವ್ಯಕ್ತಿಯ ವಿಚಾರ, ಸಾರ್ವಜನಿಕವಾಗಿಯೇ ನಡೆಯಲಿ ಎಂದು ಸೋಷಿಯಲ್ ಮೀಡಿಯಾದಲ್ಲಿ ಪ್ರತಿಕ್ರಿಯೆ ನೀಡಿದ್ದಾರೆ. ಕಳೆದ ಕೆಲವು ದಿನಗಳಿಂದ ನಡೆಯುತ್ತಿರುವ ದರ್ಶನ್ ಬಂಧನ ರೇಣುಕಾ ಸ್ವಾಮಿ ಕೊಲೆ ಪ್ರಕರಣ ಮತ್ತು ಅದರ ವಿಚಾರಣೆ ಇಡೀ ಕರ್ನಾಟಕ ಮಾತ್ರವಲ್ಲ ಇಡೀ ಭಾರತವೇ ಬೆರಗಾಗಿ ನೋಡುತ್ತಿದೆ. ಈ ಹೈ ಪ್ರೊಫೈಲ್ ಕೇಸ್ ವಿಚಾರಣೆಯಲ್ಲಿ ನಿಷ್ಪಕ್ಷಪಾತವಾದ ನಿರ್ಣಯ ಮತ್ತು ನ್ಯಾಯಕ್ಕಾಗಿ ಕಾಯುತ್ತಿದ್ದಾರೆ. ರೇಣುಕಾ ಸ್ವಾಮಿ ಕುಟುಂಬದಲ್ಲಿ, ಜನರಲ್ಲಿ, ಟಿವಿ ಮಾಧ್ಯಮಗಳಲ್ಲಿ ಮತ್ತು ದರ್ಶನ್ ಅಭಿಮಾನಿಗಳಲ್ಲಿ ಏನೇನೋ ಆತಂಕ, ಅನುಮಾನಗಳು ಕಾಡುತ್ತಿದೆ. ಊಹಾಪೋಹಗಳು ಹುಟ್ಟಿಕೊಳ್ಳುತ್ತಿದೆ. ಏಕೆಂದರೆ, ಯಾವುದೇ ಕೇಸ್ ಆದರೂ ಆ ಕೇಸ್‌ನ ವಿಚಾರಣೆಯ ವೀಡಿಯೋ ದಾಖಲೆಗಳನ್ನು ಮತ್ತು ಸಾಕ್ಷಿಗಳ ಎಲ್ಲಾ ವಿವರಗಳನ್ನು ಆಗಾಗ ಪೊಲೀಸರು ಸಂಬಂಧ ಪಟ್ಟ ವ್ಯಕ್ತಿಗಳ ಕುಟುಂಬದವರ ಜೊತೆ ಹಂಚಿಕೊಳ್ಳಬೇಕು ಮತ್ತು ಅದು ಕಾನೂನಾಗಬೇಕು ಎಂದು ಬರೆದುಕೊಂಡಿದ್ದಾರೆ.

## ಮೋದಿ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಲು ಬಿಜೆಪಿಗೆ ಸಿಎಂ ಸವಾಲು

● ಪೆಟ್ರೋಲ್, ಡೀಸೆಲ್ ಲೀಟರ್‌ಗೆ 3.5 ರೂ.ಗಳಷ್ಟು ಏರಿಕೆ ● ಪ್ರತಿಭಟನೆ ನಡೆಸುವ ಧೈರ್ಯವನ್ನು ಬಿಜೆಪಿ ಮಾಡಲಿ ಎಂದು ಸವಾಲು

• ಉದಯವಾಹಿನಿ, ಬೆಂಗಳೂರು

ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಮಾಡಿರುವ ರಾಜ್ಯ ಸರ್ಕಾರದ ನಡೆಯನ್ನು ವಿರೋಧಿಸಿ ರಾಜ್ಯಾದ್ಯಂತ ಪ್ರತಿಭಟನೆ ನಡೆಸಿರುವ ಬಿಜೆಪಿ ವಿರುದ್ಧ ಸಿಎಂ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದ್ದಾರೆ.


ರಾಜ್ಯ ಬಿಜೆಪಿಯವರು ಕರ್ನಾಟಕಕ್ಕೆ ಆಗಿರುವ ಅನ್ಯಾಯದ ವಿಚಾರವಾಗಿ ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಲಿ ಎಂದು ಸಿಎಂ ಸಿದ್ದರಾಮಯ್ಯ ಸವಾಲು ಹಾಕಿದ್ದಾರೆ.

ಕರ್ನಾಟಕ ಸರ್ಕಾರ ಶನಿವಾರದಂದು ಮಾರಾಟ ತೆರಿಗೆಯನ್ನು ಹೆಚ್ಚಿಸಲು ನಿರ್ಧರಿಸಿದ ನಂತರ ಪೆಟ್ರೋಲ್ ಬೆಲೆ ಲೀಟರ್‌ಗೆ ಮೂರು ಮತ್ತು ಡೀಸೆಲ್ ಲೀಟರ್‌ಗೆ 3.5 ರೂ.ಗಳಷ್ಟು ಏರಿಕೆಯಾಗಿದೆ.

ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರದಿಂದ ಕೇಂದ್ರದ ಹಣ ಮತ್ತು ಜಿಎಸ್‌ಟಿ ಹಂಚಿಕೆ ಮತ್ತು ರಾಜ್ಯ ಯೋಜನೆಗಳಿಗೆ ಹಣ ಬಿಡುಗಡೆಗೆ ಸಂಬಂಧಿಸಿದ ವಿಷಯಗಳಲ್ಲಿ ರಾಜ್ಯ ಅನ್ಯಾಯವನ್ನು ಎದುರಿಸುತ್ತಿದೆ ಎಂದು ಮುಖ್ಯಮಂತ್ರಿ ಆರೋಪಿಸಿದರು ಮತ್ತು ಈ ಬಗ್ಗೆ ಪ್ರತಿಭಟನೆ ನಡೆಸುವ ಧೈರ್ಯವನ್ನು ಬಿಜೆಪಿ ಮಾಡಲಿ ಎಂದು ಸವಾಲು ಹಾಕಿದ್ದಾರೆ.

ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಅವಧಿಯಲ್ಲಿ ಒಂದು ಹಂತದಲ್ಲಿ ಕಚ್ಚಾ ತೈಲ ಬೆಲೆಯು ಬ್ಯಾರೆಲ್‌ಗೆ USD 113 ರಷ್ಟಿತ್ತು ಆದರೆ ಪ್ರಸ್ತುತ ಅದು USD 82.35 ರಷ್ಟಿದೆ ಎಂದು ಸಿದ್ದರಾಮಯ್ಯ ಹೇಳಿದರು.

ಕಚ್ಚಾ ತೈಲ ಬೆಲೆ ಇಳಿಕೆಯ ಹೊರತಾಗಿಯೂ ರೀಫಿಲ್ ಗ್ಯಾಸ್ ಸಿಲಿಂಡರ್ ಅನ್ನು ರೂ 410 ರಿಂದ ರೂ 805.50 ಕ್ಕೆ ಹೆಚ್ಚಿಸಿದವರು ಯಾರು? ಅವರಿಗೆ ಬಡವರ ಬಗ್ಗೆ ಕಾಳಜಿ ಇದ್ದರೆ ಕೇಂದ್ರದ ವಿರುದ್ಧ ಪ್ರತಿಭಟನೆ ನಡೆಸಲಿ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.



**ರಾಜ್ಯದ ಜಿಎಸ್‌ಟಿ ಹಂಚಿಕೆಯಲ್ಲಿ ಇಳಿಕೆ**

**ಅವರಿಗೆ ಬಡತನದ ಅರ್ಥ ತಿಳಿದಿದೆಯೇ?**

ಬೆಂಗಳೂರಿನ ಪೆರಿಫೆರಲ್ ರಿಂಗ್ ರಸ್ತೆಗೆ 3,000 ಕೋಟಿ ರೂಪಾಯಿ ನೀಡುವುದಾಗಿ ಕೇಂದ್ರ ಘೋಷಿಸಿದೆ ಆದರೆ ಅದು ಏನನ್ನೂ ನೀಡಲಿಲ್ಲ ಎಂದು ಮುಖ್ಯಮಂತ್ರಿ ಹೇಳಿದರು. ಬೆಂಗಳೂರಿನ ಕೆರೆ ಅಭಿವೃದ್ಧಿಗೆ 3 ಸಾವಿರ ಕೋಟಿ ರೂಪಾಯಿ ನೀಡಿಲ್ಲ. ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರವು ಭದ್ರಾ ಮೇಲ್ದಂಡೆ ಯೋಜನೆಗೆ 5,300 ಕೋಟಿ ರೂಪಾಯಿಗಳನ್ನು ಘೋಷಿಸಿದೆ, ಅವರು ನೀಡಲಿಲ್ಲ ಎಂದು ಸಿದ್ದರಾಮಯ್ಯ ಹೇಳಿದರು. ಇಂದು ಬಿಜೆಪಿಯವರು ಕರ್ನಾಟಕದ ಕಾಂಗ್ರೆಸ್ ಸರ್ಕಾರವನ್ನು ಬಡಪಾಯಿ ಎಂದು ಕರೆಯುತ್ತಿದ್ದಾರೆ. ಅವರಿಗೆ ಬಡತನದ ಅರ್ಥ ತಿಳಿದಿದೆಯೇ? ನಾವು ಯಾರೊಬ್ಬರ ಸಂಬಳವನ್ನು ನಿಲ್ಲಿಸಿದ್ದೇವೆಯೇ? ಬಜೆಟ್ ನಲ್ಲಿ ಘೋಷಣೆ ಮಾಡಿದ ಯಾವುದಾದರೂ ಯೋಜನೆಗೆ ಅನುದಾನ ನಿಲ್ಲಿಸಿದ್ದೇವೆಯೇ?' ಎಂದು ಸಿಎಂ ಪ್ರಶ್ನಿಸಿದ್ದಾರೆ.

ಕೇಂದ್ರ ಸರ್ಕಾರ ಜಿಎಸ್‌ಟಿಯನ್ನು ಪರಿಚಯಿಸಿದ ನಂತರ, ರಾಜ್ಯ ಸರ್ಕಾರ ಪೆಟ್ರೋಲ್-ಡೀಸೆಲ್, ಮದ್ಯ, ಮುದ್ರಾಂಕ ಶುಲ್ಕ ಮತ್ತು ಮೋಟಾರು ತೆರಿಗೆಗಳನ್ನು ಹೊರತುಪಡಿಸಿ ತೆರಿಗೆಗಳನ್ನು ಹೆಚ್ಚಿಸುವ ಅಧಿಕಾರವನ್ನು ಕಳೆದುಕೊಂಡಿತು ಎಂದು ಮುಖ್ಯಮಂತ್ರಿ ಇದೇ ವೇಳೆ ತಿಳಿಸಿದ್ದಾರೆ.

ಕೇಂದ್ರ ಸರ್ಕಾರ ಜಿಎಸ್‌ಟಿ, ಆದಾಯ ತೆರಿಗೆ, ಕಾರ್ಪೊರೇಟ್ ತೆರಿಗೆ ಮತ್ತು ಅಬಕಾರಿ ಸುಂಕವನ್ನು ಸಂಗ್ರಹಿಸಿದೆ ಆದರೆ ರಾಜ್ಯ ಸರ್ಕಾರ ಮಾರಾಟ ತೆರಿಗೆಯನ್ನು ವಿಧಿಸಬಹುದು ಮತ್ತು ಮದ್ಯದ ಬೆಲೆಗಳನ್ನು ಮಾತ್ರ ನಿಗದಿಪಡಿಸಬಹುದು.

ಬಿಜೆಪಿ ಅಧಿಕಾರಕ್ಕೆ ಬಂದಾಗಿನಿಂದ ಕರ್ನಾಟಕ 14 ಮತ್ತು 15 ನೇ ಹಣಕಾಸು ಆಯೋಗದಲ್ಲಿ 1.87 ಲಕ್ಷ ಕೋಟಿ ರೂಪಾಯಿ ನಷ್ಟವನ್ನು ಅನುಭವಿಸಿದೆ. ನಮ್ಮ ಆದಾಯ ಮತ್ತು ರಾಜ್ಯಕ್ಕೆ ಕೇಂದ್ರದ ಕೊಡುಗೆ ಕಡಿಮೆಯಾಗಿದೆ. ಹಿಂದಿನ ಲೋಕಸಭೆಯಲ್ಲಿ 25 ಮಂದಿಯಿದ್ದರೂ ಬಿಜೆಪಿಯ ಯಾವ ಸಂಸದರೂ ಸಂಸತ್ತಿನಲ್ಲಿ ಮಾತನಾಡಲಿಲ್ಲ. ರಾಜ್ಯದ ಜಿಎಸ್‌ಟಿ ಹಂಚಿಕೆಯಲ್ಲಿ ಇಳಿಕೆಯಾಗಿದೆ ಎಂದು 15ನೇ ಹಣಕಾಸು ಆಯೋಗವು ಕರ್ನಾಟಕಕ್ಕೆ 5,495 ಕೋಟಿ ರೂ.ಗಳನ್ನು ನೀಡುವಂತೆ ಶಿಫಾರಸು ಮಾಡಿದ್ದರೂ ಕೇಂದ್ರ ನೀಡಿಲ್ಲ. ಆದರೆ, ರಾಜ್ಯ ಬಿಜೆಪಿ ಈ ಬಗ್ಗೆ ಚಕಾರ ಎತ್ತಲಿಲ್ಲ ಎಂದು ಸಿದ್ದರಾಮಯ್ಯ ಆರೋಪಿಸಿದ್ದಾರೆ.

| ಈ ದಿನದ ದರ | ಪೆಟ್ರೋಲ್: 99.84 ₹/L | ಡೀಸೆಲ್ : 85.93 ₹/L | ಬಂಗಾರ: ₹7,255/Gram(24ct) ₹6,650/Gram(22ct) | ಬೆಳ್ಳಿ: ₹91.00/Gram |
|---|---|---|---|---|



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ತಾವೇ ತಂದುಕೊಳ್ಳುವ ಸಂಕಟ

ಸುಖವಾಗಿರಬೇಕೆಂದರೆ ಸಾಲದು, ಅದಕ್ಕೆ ಬೇಕಾದ ಪರಿಜ್ಞಾನ ಬೇಕು. ಅದಿಲ್ಲದಿದ್ದರೆ ಅಧಃಪತನ. ಹಣ ಅಧಿಕಾರ ಮತ್ತಾವುದೂ ಕೈ ಹಿಡಿಯದು. ಕೊಪ್ಪಳ ಬಳಿಯ ಕಿನ್ನಾಳದ ಸಿದ್ಧಲಿಂಗಯ್ಯ, ಗುಟ್ಕಾ ತರಲೊಪ್ಪದ ಏಳು ವರ್ಷದ ಅನುಶ್ರೀಯನ್ನು ಕೊಂದ. ಜೈಲು ತಂದುಕೊಂಡ! ವ್ಯಕ್ತಿಯೊಬ್ಬ ಮಹಿಳೆಗೆ ಮರ್ಮಾಂಗದ ಚಿತ್ರ ಕಳಿಸಿದ. ನಡೆಯಿತು ಬರ್ಬರ ಹತ್ಯೆ! ಮಧ್ಯಪ್ರದೇಶದ ನಾಲ್ವರು ಜಾವರಾದ ದೇವಾಲಯದೊಳಗೆ ತುಂಡರಿಸಿದ್ದ ಗೋವಿನ ತಲೆ ಎಸೆದರು, ಜೈಲು ಸೇರಿದರು! ಆವೇಶದ ಭರದಲ್ಲಿ ಯಾರದ್ದೋ ಮಾತು ಕೇಳಿ ಯಾವುದೋ ಆಮಿಷಕ್ಕೆ ಒಳಗಾಗಿ ಸಂಬಂಧವಿದ್ದೋ ಸಂಬಂಧವಿಲ್ಲದೆಯೋ ದುಡುಕಿ ಕೊಲೆ ಮುಂತಾದ ದುಷ್ಕೃತ್ಯಗೈಯ್ಯುವುದುಂಟು. ಮುಂದೆ ಊಹಿಸಲಾಗದ ಸಂಕಟ ಸರಮಾಲೆ! ಕೃತ್ಯ ಎಸಗಿ ಶಿಕ್ಷೆ ಸಂಕಟ ಅನುಭವಿಸಿ ಪಶ್ಚಾತ್ತಾಪಪಟ್ಟು ಬದಲಾದುದುಂಟು. ಬದಲಾದರೂ ಬಲಿಯಾದುದುಂಟು! ಹದಿನೈದು ವರ್ಷಗಳ ಹಿಂದೆ ಕೊಲೆ ಪ್ರಕರಣದಲ್ಲಿ ಜೈಲು ಸೇರಿ ಶಿಕ್ಷೆ ಅನುಭವಿಸಿ ಬಿಡುಗಡೆಯಾದ ಎರಡು ವರ್ಷಗಳ ಬಳಿಕ ಚಡಚಣದಲ್ಲಿ ಅಶೋಕ ಗಂಟಗಲ್ಲಿ ಹತ್ಯೆಯಾದ! ಹಣ ಆಸ್ತಿ ಕೀರ್ತಿ ಅಧಿಕಾರ ವಿಲಾಸಗಳ ಬೆಂಬೀಳದೇ ಸಂಸ್ಕಾರಯುತ ಅರಿವುಮಯ ಜೀವನಶೈಲಿ ನಮ್ಮದಾಗಲಿ.

## ರೇಣುಕಾಸ್ವಾಮಿ ಕೊಲೆ ಪ್ರಕರಣ ವಿಚಾರಣೆಗೆ ಬರುವಂತೆ ಚಿಕ್ಕಣ್ಣಗೆ ನೋಟೀಸ್

• ಉದಯವಾಹಿನಿ, ಬೆಂಗಳೂರು

ಚಿತ್ರದುರ್ಗದ ರೇಣುಕಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ಚಿಕ್ಕಣ್ಣಗೆ ಪಶ್ಚಿಮ ವಿಭಾಗದ ಪೊಲೀಸರು ನೋಟಿಸ್ ಜಾರಿ ಮಾಡಿದ್ದಾರೆ. ತಕ್ಷಣವೇ ಕಾಮಾಕ್ಷಿಪಾಳ್ಯ ಠಾಣೆಗೆ ವಿಚಾರಣೆಗೆ ಬರುವಂತೆ ಸೂಚಿಸಿದ್ದಾರೆ. ರೇಣುಕಸ್ವಾಮಿ ಕೊಲೆ ನಡೆಯುವುದಕ್ಕೂ ಮೊದಲು ಬಂಧಿತ ಆರೋಪಿ ವಿನಯ್‌ಗೆ ಸೇರಿದ ಸ್ಟೋನಿ ಬ್ರುಕ್ ಹೋಟೆಲ್‌ನಲ್ಲಿ ಪಾರ್ಟಿ ನಡೆದಿತ್ತು. ಪಾರ್ಟಿಯಲ್ಲಿ ದರ್ಶನ್, ವಿನಯ್, ಚಿಕ್ಕಣ್ಣ ಹಾಗೂ ಪವನ್ ಇದ್ದರು ಎನ್ನಲಾಗಿದೆ. ಆಗ ಏನಾದರೂ ಕೃತ್ಯದ ಸಂಬಂಧ ಮಾತುಕತೆ ನಡೆದಿತ್ತೇ ಎಂಬುವುದರ ಕುರಿತು ವಿಚಾರಣೆ ನಡೆಸಲು ಚಿಕ್ಕಣ್ಣಗೆ ನೋಟಿಸ್ ಜಾರಿ ಮಾಡಲಾಗಿದೆ ಎಂದು ಪೊಲೀಸರು ಹೇಳಿದರು.

## ಬೆಲೆ ಕೇಳಿ ಬೆಚ್ಚಿ ಬೀಳುತ್ತಿರುವ ಗ್ರಾಹಕ!

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಮುಂಗಾರು ಇನ್ನೂ ಸರಿಯಾಗಿ ಕಾಲಿಟ್ಟಿಲ್ಲ, ಬರಗಾಲ ಛಾಯೆಯಿಂದ ಹೊರ ಬರುವುದಕ್ಕೆ ಇನ್ನೂ ಹಲವು ದಿನಗಳು ಬೇಕಾಗಿದ್ದು, ಒಂದು ವೇಳೆ ಮಳೆ ಸಮಯಕ್ಕೆ ಸರಿಯಾಗಿ ಬಾರದೇ ಹೋದರೆ ಇಡೀ ಆರ್ಥ ವ್ಯವಸ್ಥೆ ಮೇಲೆ ಗಂಭಿರವಾದ ಪರಿಣಾಮ ಬೀರುವುದು ಸುಳ್ಳಲ್ಲ. ಈ ನಡುವೆ ಮಾರುಕಟ್ಟೆಯಲ್ಲಿ ದಿನದಿಂದ ದಿನಕ್ಕೆ ಟೊಮೆಟೊ ಸೇರಿದಂತೆ ಕಾಯಿಪಲ್ಲೆ, ಹಸಿರುಪಲ್ಲೆಗಳ ದರಗಳು ಹೆಚ್ಚಳವಾಗುತ್ತಿದ್ದು, ಬೆಲೆ ಕೇಳಿಸಿಕೊಳ್ಳುವ ಗ್ರಾಹಕ ತಮ್ಮಹಣಕಾಸಿನ ಸ್ಥಿತಿಯನ್ನು ಎರಡು ಬಾರಿ ಯೋಚನೆ ಮಾಡಿಯಿಪಲ್ಲೆ, ಹಸಿರುಪಲ್ಲೆಗಳನ್ನು ಕೊಂಡುಕೊಳ್ಳುತ್ತಿದ್ದಾರೆ. ಕಳೆದ ವಾರವಷ್ಟೆ ಕೆಜಿಗೆ 50 ರೂ.ಗೆ ದೊರೆಯುತ್ತಿದ್ದ ಟೊಮೆಟೊ, ಈಗ ಏಕಾಏಕಿ 100 ರೂ. ಗಡಿ ದಾಟಿದ್ದು, ಗ್ರಾಹಕರ ಜೇಬಿಗೆ ಕತ್ತರಿ ಬಿದಿದ್ದೆ. ಇವೆಲ್ಲದರ ನಡುವೆ ಶನಿವಾರದಿಂದ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯೂ ಹೆಚ್ಚಳ ಕಂಡಿದ್ದು, ಇದು ಕೂಡ ತರಕಾರಿಗಳ, ದಿನಸಿ ವಸ್ತುಗಳ ಬೆಲೆಯಲ್ಲಿನ ಹೆಚ್ಚಳಕ್ಕೆ ಕಾರಣವಾಗಬಹುದು ಎನ್ನಲಾಗಿದೆ.

## ಪೋಕ್ಸೊ ಪ್ರಕರಣ: ರಾಜ್ಯ ಸರ್ಕಾರದಿಂದ ಪ್ರಕರಣದ ತನಿಖಾಧಿಕಾರಿ ನೇಮಕ..!

• ಉದಯವಾಹಿನಿ, ಬೆಂಗಳೂರು

ಯಡಿಯೂರಪ್ಪ ವಿರುದ್ಧದ ಪೋಕ್ಸೊ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಕರಣದ ತನಿಖಾಧಿಕಾರಿಯಾಗಿ ಪುನೀತ್ ಅವರನ್ನು ನೇಮಕ ಮಾಡಲಾಗಿದೆ. ಸಿಐಡಿ ವರ್ಗಾವಣೆ ಬಳಿಕ ಡಿವೈಎಸ್ಪಿ ಪೃಥ್ವಿ ತನಿಖಾಧಿಕಾರಿಯಾಗಿ ನೇಮಕಗೊಂಡಿದ್ದರು. ಈಗ ಪೃಥ್ವಿ ಸಿಐಡಿಯಿಂದ ವರ್ಗಾವಣೆ ಹಿನ್ನೆಲೆ ಪ್ರಕರಣದ ತನಿಖಾಧಿಕಾರಿಯಾಗಿ ಡಿವೈಎಸ್‌ಪಿ ಪುನೀತ್ ನೇಮಕಗೊಂಡಿದ್ದಾರೆ. ಸಿಐಡಿ ಡಿವೈಎಸ್‌ಪಿ ಪುನೀತ್ ಅವರು ಬಿಎಸ್ ಯಡಿಯೂರಪ್ಪ ಅವರನ್ನು ವಿಚಾರಣೆ ನಡೆಸಲಿದ್ದಾರೆ.ಅಪ್ರಾಪ್ತ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಆರೋಪವನ್ನು ಬಿಎಸ್ ಯಡಿಯೂರಪ್ಪ ಎದುರಿಸುತ್ತಿದ್ದು, ಪ್ರಕರಣ ದಾಖಲಾಗಿ ಮೂರು ತಿಂಗಳ ಬಳಿಕ ಇಂದು ಸಿಐಡಿ ಮುಂದೆ ಹಾಜರಾಗಿದ್ದಾರೆ. ಮಾರ್ಚ್ 14 ರಂದು ಯಡಿಯೂರಪ್ಪ ವಿರುದ್ಧ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ಅಪ್ರಾಪ್ತ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಆರೋಪದ ಮೇಲೆ ಎಫ್‌ಐಆರ್ ದಾಖಲಾಗಿತ್ತು.

## ರೇಣುಕಾಸ್ವಾಮಿಯ ನಾಪತ್ತೆಯಾದ ಮೊಬೈಲ್‌ಗಾಗಿ ಹುಡುಕಾಟ

• ಉದಯವಾಹಿನಿ, ಬೆಂಗಳೂರು

ದಿನಗಳದಂತೆ ರೇಣುಕಾ ಸ್ವಾಮಿ ಕೊಲೆ ಪ್ರಕರಣದ ಭೀಕರ ಅಂಶಗಳು ಹೊರಬೀಳುತ್ತಿವೆ. ಆರಂಭದಲ್ಲಿ, ಭಯಪಡಿಸಲು ಹೋಗಿ ಮಾಡಲಾಗಿರುವ ಹತ್ಯೆ ಎನ್ನಲಾಗಿತ್ತು, ಆದರೆ ಪ್ರಕರಣ ಮುಂದುವರೆದಂತೆ ರೇಣುಕಾ ಸ್ವಾಮಿಯನ್ನು ದರ್ಶನ್ ಹಾಗೂ ಗ್ಯಾಂಗ್ ಹೇಗೆಲ್ಲ ಚಿತ್ರಹಿಂಸೆ ಕೊಟ್ಟಿದ್ದಾರೆ ಎಂಬ ಅಂಶಗಳು ಬಹಿರಂಗವಾಗುತ್ತಿವೆ. ಇನ್ನೂ ರೇಣುಕಾಸ್ವಾಮಿ ಹತ್ಯೆ ಬಳಿಕ ಆತನ ಮೊಬೈಲ್ ಅನ್ನು ಸುಮನಹಳ್ಳಿ ಬ್ರಿಡ್ಜ್ ಬಳಿಯ ರಾಜಕಾಲುವೆಯಲ್ಲಿ ಆರೋಪಿ ವಿನಯ್ ಬಿಸಾಕಿರುವುದಾಗಿ ಪೊಲೀಸರ ಮುಂದೆ ಹೇಳಿಕೆ ನೀಡಿದ್ದಾನೆ. ಹೀಗಾಗಿ ಮೊಬೈಲ್ ಬಿಸಾಕಿದ ಜಾಗಕ್ಕೆ ಕಾಮಾಕ್ಷಿಪಾಳ್ಯ ಠಾಣೆ ಪೊಲೀಸರು ಕರೆತಂದು ಮಹಜರಿಗೆ ಒಳಪಡಿಸಿದ್ದಾರೆ.ಸುಮನಹಳ್ಳಿಯ ಸತ್ವ ಅನುಗ್ರಹ ಲೇಔಟ್ ಬಳಿಯಿರುವ ರಾಜಕಾಲುವೆಯಲ್ಲಿ ರೇಣುಕಾಸ್ವಾಮಿ ಶವ ಬಿಸಾಕಿದ್ದರು. ಆರೋಪಿ ವಿನಯ್, ರೇಣುಕಾಸ್ವಾಮಿ ಬಳಸುತ್ತಿದ್ದ ಮೊಬೈಲ್ ಅನ್ನು ಇದೇ ರಾಜಕಾಲುವೆಯಲ್ಲಿ ಎಸೆದಿರುವುದಾಗಿ ವಿಚಾರಣೆಯಲ್ಲಿ ಹೇಳಿಕೆ ನೀಡಿದ್ದಾನೆ.

## ದರ್ಶನ್‌ಗಾಗಿ ವಕೀಲರನ್ನು ಭೇಟಿ ಮಾಡಿ, ಕಾನೂನು ಹೋರಾಟಕ್ಕೆ ಇಳಿದ ಪತ್ನಿ

• ಉದಯವಾಹಿನಿ, ಬೆಂಗಳೂರು

ದರ್ಶನ್ ತನ್ನ ಗೆಳತಿ ಪವಿತ್ರಾ ಗೌಡರಿಂದಾಗಿ ಕೊಲೆ ಪ್ರಕರಣದಲ್ಲಿ ಆರೋಪಿ ಯಾಗಿದ್ದಾರೆ. ತನ್ನ ಆಪ್ತೆ ಪವಿತ್ರಾ ಗೌಡಾಗೆ ಅಶ್ಲೀಲ ಮೆಸೇಜ್ ಮಾಡಿದ್ದಾನೆ ಎಂದು ಚಿತ್ರದುರ್ಗದ ರೇಣುಕಾಸ್ವಾಮಿ ಎನ್ನುವವರನ್ನು ಕೊಲೆ ಮಾಡಿಸಿದ್ದಾರೆ ಎಂಬ ಗಂಭೀರ ಆರೋಪ ಎದುರಿಸುತ್ತಿದ್ದಾರೆ. ವೇಳೆ ಇಷ್ಟು ದಿನ ಸುಮ್ಮನಿದ್ದ ದರ್ಶನ್ ಪತ್ನಿ ವಿಜಯಲಕ್ಷ್ಮಿ ಗಂಡನ ಪರವಾಗಿ ಕಾನೂನು ಹೋರಾಟಕ್ಕೆ ಮುಂದಾಗಿದ್ದಾರೆ. ಪತಿ ಪರವಾಗಿ ವಾದ ಮಾಡುವಂತೆ ಖ್ಯಾತ ವಕೀಲರನ್ನು ಭೇಟಿಯಾಗಿದ್ದಾರೆ. ದರ್ಶನ್ ಪರವಾಗಿ ವಾದ ಮಾಡುವಂತೆ ಹಿರಿಯ ವಕೀಲ ಸಿ ವಿ ನಾಗೇಶ್ ಅವರನ್ನು ಮನವಿ ಮಾಡಿದ್ದಾರೆ. ಹೈಕೋರ್ಟ್ ಹಿರಿಯ ವಕೀಲರಾದ ಸಿ ವಿ ನಾಗೇಶ್ ಅವರನ್ನು ವಿಜಯಲಕ್ಷ್ಮಿ ಭೇಟಿ ಮಾಡಿದ್ದಾರೆ. ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಸಿಲುಕಿರುವ ದರ್ಶನ್ ಅವರ ಪರವಾಗಿ ಸಿ ವಿ ನಾಗೇಶ್ ವಾದ ಮಾಡುವ ಸಾಧ್ಯತೆಯಿದೆ. ಇನ್ನು ಪ್ರಕರಣದಲ್ಲಿ ಈಗಾಗಲೇ 19 ಮಂದಿಯನ್ನು ಪೊಲೀಸರು ವಶಕ್ಕೆ ತೆಗೆದುಕೊಂಡಿದ್ದಾರೆ. ಆದರೆ, ದರ್ಶನ್ ಪರ ಮಾತ್ರ ವಾದ ಮಾಡಲು ವಿಜಯಲಕ್ಷ್ಮಿ ತೀರ್ಮಾನ ಮಾಡಿದ್ದಾರೆ. ತನ್ನ ಪತಿ ದರ್ಶನ್ ಹೊರತುಪಡಿಸಿ ಬೇರೆಯವರ ಪರ ವಾದ ಮಂಡನೆ ಮಾಡದಂತೆ ಮನವಿ ಮಾಡಿದ್ದಾರೆ.

# ಸರ್ಕಾರಿ ನೌಕರರಿಗೆ ಹೊಸ ಭರವಸೆ ಕೊಟ್ಟ ಡಿಸಿಎಂ ಡಿಕೆಶಿ

■ 7ನೇ ವೇತನ ಆಯೋಗದ ವರದಿಯನ್ನು ಸರ್ಕಾರ ಯಾವಾಗ ಜಾರಿ ■ ಸರ್ಕಾರಿ ನೌಕರರಿಗೆ ಸಿಹಿಸುದ್ದಿ ಸಿಕ್ಕಿಲ್ಲ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ಸರ್ಕಾರಿ ನೌಕರರು, ನಿವೃತ್ತ ನೌಕರರು ಕೆ. ಸುಧಾಕರ್‌ರಾವ್ ನೇತೃತ್ವದ ರಾಜ್ಯ 7ನೇ ವೇತನ ಆಯೋಗದ ವರದಿಯನ್ನು ಸರ್ಕಾರ ಯಾವಾಗ ಜಾರಿಗೊಳಿಸುತ್ತದೆ ಎಂದು ಕಾಯುತ್ತಿದ್ದಾರೆ. ಸರ್ಕಾರ ಈ ವಿಚಾರದಲ್ಲಿ ನೌಕರರಿಗೆ ಹಲವು ಭರವಸೆಗಳನ್ನು ನೀಡುತ್ತಲೇ ಇದೆ.

**ನೀತಿ ಸಂಹಿತೆ ತೆರವಾದ ಬಳಿಕ ಸಚಿವ ಸಂಪುಟ**



ಉದಯವಾಹಿನಿ ಚಿತ್ರ

ಲೋಕಸಭೆ ಚುನಾವಣೆ 2024, ವಿಧಾನ ಪರಿಷತ್ ಚುನಾವಣೆ ನೀತಿ ಸಂಹಿತೆ ಮುಕ್ತಾಯಗೊಂಡಿದೆ. ನೀತಿ ಸಂಹಿತೆ ತೆರವಾದ ಬಳಿಕ ಕರ್ನಾಟಕ ಸರ್ಕಾರದ ಮೊದಲ ಸಚಿವ ಸಂಪುಟ ಸಭೆಯನ್ನು ಸಹ ನಡೆಸಲಾಗಿದೆ. ಆದರೆ ಸರ್ಕಾರಿ ನೌಕರರಿಗೆ ಸಿಹಿಸುದ್ದಿ ಸಿಕ್ಕಿಲ್ಲ. ಈಗ ಉಪ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಸರ್ಕಾರಿ ನೌಕರರಿಗೆ ಮತ್ತೊಂದು ಭರವಸೆ ನೀಡಿದ್ದಾರೆ. ಜೂನ್ 15ರಂದು ಅವರು ಬೆಂಗಳೂರಿನ ಟೌನ್‌ಹಾಲ್‌ನಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಆಯೋಜಿಸಿದ್ದ ಬೆಂಗಳೂರು ನಗರ, ರಾಮನಗರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ರಾಜ್ಯ ಸರ್ಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಡಿ. ಕೆ. ಶಿವಕುಮಾರ್ ಮಾತನಾಡಿ, ಸರ್ಕಾರಿ ನೌಕರರ ಸಮಸ್ಯೆಗಳ ಅರಿವು ಇದೆ. ಮಂತ್ರಿಗಳು ಸರ್ಕಾರದ ಸೇವಕರೇ. ಸಮಸ್ಯೆ ಪರಿಹಾರ ಕಂಡುಕೊಳ್ಳಲು ಎಲ್ಲರೂ ಪ್ರಾಮಾಣಿಕವಾಗಿ ಪ್ರಯತ್ನಿಸೋಣ ಎಂದು ಹೇಳಿದರು.

7ನೇ ವೇತನ ಆಯೋಗದ ಶಿಫಾರಸುಗಳ ಜಾರಿಗೆ ಸರ್ಕಾರ ಬದ್ಧವಾಗಿದೆ. ನೌಕರರ ಎಲ್ಲಾ ಬೇಡಿಕೆಗಳನ್ನು ಹಂತ-ಹಂತವಾಗಿ ಈಡೇರಿಸಲಾಗುತ್ತದೆ. ಲೋಕಸಭೆ ಚುನಾವಣೆ ಸರ್ಕಾರಿ ನೌಕರರು ಸರ್ಕಾರದ ವಿರುದ್ಧ ಅಸಮಾಧಾನಗೊಂಡಿರುವುದಕ್ಕೆ ಸಾಕ್ಷಿಯಾಗಿದೆ ಎಂದರು. ಕರ್ನಾಟಕದಲ್ಲಿ ಬಿಜೆಪಿ ಸರ್ಕಾರವಿದ್ದಾಗ 7ನೇ ರಾಜ್ಯ ವೇತನ ಆಯೋಗ ರಚನೆ ಮಾಡಲಾಗಿತ್ತು. 2023ರ ವಿಧಾನಸಭೆ ಚುನಾವಣೆ ಬಳಿಕ ಕಾಂಗ್ರೆಸ್ ಸರ್ಕಾರ ರಚನೆಗೊಂಡಿತು. 2024ರ ಮಾರ್ಚ್ 16ರಂದು ಕೆ. ಸುಧಾಕರ್ ರಾವ್ ನೇತೃತ್ವದ ರಾಜ್ಯ 7ನೇ ವೇತನ ಆಯೋಗದ ಹಣಕಾಸು ಸಚಿವ, ಮುಖ್ಯಮಂತ್ರಿ ಸಿದ್ದರಾಮಯ್ಯಗೆ ವರದಿಯನ್ನು ನೀಡಿದೆ.

> **ಮಾರ್ಚ್‌ನಲ್ಲಿ 7ನೇ ವೇತನ ಆಯೋಗದ ವರದಿ ಸ್ವೀಕರಿಸಿದ್ದ ಮುಖ್ಯಮಂತ್ರಿಗಳು ಟ್ವೀಟ್ ಮಾಡಿ, ರಾಜ್ಯದ 7ನೇ ವೇತನ ಆಯೋಗವು ಇಂದು ವರದಿಯನ್ನು ಸಲ್ಲಿಸಿದ್ದು ಮೂಲವೇತನದ ಶೇಕಡ 27.5 ರಷ್ಟು ಹೆಚ್ಚಳ ಮಾಡಲು ಶಿಫಾರಸು ಮಾಡಿದೆ. ವರದಿಯನ್ನು ಪರಿಶೀಲಿಸಿ ಸರ್ಕಾರ ಸೂಕ್ತ ತೀರ್ಮಾನ ಕೈಗೊಳ್ಳಲಿದೆ ಎಂದು ಭರವಸೆ ನೀಡಿದ್ದರು.**

ಆದರೆ ವರದಿ ನೀಡಿದ ದಿನದಿಂದಲೇ ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿಗೆ ಬಂದ ಕಾರಣ ವರದಿ ಬಗ್ಗೆ ಯಾವುದೇ ಕ್ರಮವನ್ನು ಸರ್ಕಾರ ಕೈಗೊಂಡಿಲ್ಲ. ಈಗ ನೀತಿ ಸಂಹಿತೆ ತೆರವು ಮಾಡಲಾಗಿದ್ದು, ಆಯೋಗದ ವರದಿ ಯಾವಾಗ ಜಾರಿಯಾಗಲಿದೆ ಎಂದು ನೌಕರರು ಕಾಯುತ್ತಿದ್ದಾರೆ.

ಲೋಕಸಭೆ ಚುನಾವಣೆ ಮುಗಿಯುತ್ತಿದ್ದಂತೆಯೇ ರಾಜ್ಯ ಸರ್ಕಾರಿ ನೌಕರ ಸಂಘದ ರಾಜ್ಯಾಧ್ಯಕ್ಷ ಸಿ. ಎಸ್. ಷಡಾಕ್ಷರಿ ಮತ್ತು ರಾಜ್ಯ ಸಂಘದ ಪದಾಧಿಕಾರಿಗಳು ಜೂನ್ 3ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಭೇಟಿ ಮಾಡಿದ್ದರು.

7ನೇ ವೇತನ ಆಯೋಗದ ವರದಿ ಅನುಷ್ಠಾನಗೊಳಿಸುವಂತೆ ಮನವಿ ಸಲ್ಲಿಕೆ ಮಾಡಿದ್ದರು. ವೇತನ ಆಯೋಗದ ಅವಧಿಯನ್ನು ಮೂರು ತಿಂಗಳು ವಿಸ್ತರಿಸಲಾಗಿತ್ತು. ಈ ಅವಧಿಯು ಮಾರ್ಚ್ 15ರಂದು ಮುಕ್ತಾಯಗೊಂಡಿದೆ. ನಿನ್ನೆ ನಾನು ಮೈಸೂರಿನಲ್ಲಿದ್ದ ಕಾರಣ ವರದಿ ಸ್ವೀಕರಿಸಲು ಸಾಧ್ಯವಾಗಿರಲಿಲ್ಲ. ಅದಕ್ಕಾಗಿ ಇಂದು ವರದಿಯನ್ನು ಸ್ವೀಕರಿಸಲಾಗಿದೆ. ವರದಿಯಲ್ಲಿ ಕನಿಷ್ಠ ಮೂಲವೇತನವನ್ನು ರೂ.17,000 ದಿಂದ ರೂ.27,000 ಕ್ಕೆ ಹೆಚ್ಚಿಸುವಂತೆ ಶಿಫಾರಸು ಮಾಡಲಾಗಿದೆ. ಇದರೊಂದಿಗೆ ಇನ್ನೂ ಅನೇಕ ಶಿಫಾರಸುಗಳಿದ್ದು ವರದಿಯನ್ನು ಆರ್ಥಿಕ ಇಲಾಖೆಗೆ ನೀಡಲಾಗಿದೆ. ಆರ್ಥಿಕ ಇಲಾಖೆಯು ವರದಿಯನ್ನು ಕೂಲಂಕುಷವಾಗಿ ಅಧ್ಯಯನ ಮಾಡಿದ ನಂತರ ನೀಡುವ ಸಲಹೆಗಳ ಆಧಾರದಲ್ಲಿ ಸರ್ಕಾರ ತೀರ್ಮಾನ ಕೈಗೊಳ್ಳಲಿದೆ ಎಂದು ಹೇಳಿದ್ದರು.

> **ಜೂನ್ 6ರಂದು ಲೋಕಸಭೆ ಚುನಾವಣೆ ನೀತಿ ಸಂಹಿತೆ, ಜೂನ್ 12ರಂದು ವಿಧಾನ ಪರಿಷತ್ ಮಾದರಿ ಚುನಾವಣಾ ನೀತಿ ಸಂಹಿತೆ ತೆರವು ಮಾಡಲಾಗಿದೆ. ಜೂನ್ 13ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಸಭೆಯೂ ನಡೆದಿತ್ತು. ಸಭೆಯಲ್ಲಿ 7ನೇ ವೇತನ ಆಯೋಗ ವರದಿ ಜಾರಿ ಕುರಿತು ಚರ್ಚೆ ನಡೆದಿತ್ತು. ಸಚಿವರ ಅಭಿಪ್ರಾಯವನ್ನು ಮುಖ್ಯಮಂತ್ರಿಗಳು ಸಂಗ್ರಹ ಮಾಡಿದ್ದರು.**

## ಬೆಂಗಳೂರಿನಲ್ಲಿ ಫೈರ್ ಲೈಸೆನ್ಸ್ ಇಲ್ಲದೆ ಕಾರ್ಯನಿರ್ವಹಣೆ

• ಉದಯವಾಹಿನಿ, ಬೆಂಗಳೂರು

ಮೇ 25 ರಂದು ರಾಜ್ಕೋಟ್ ಗೇಮಿಂಗ್ ವಲಯದಲ್ಲಿ ಸಂಭವಿಸಿದ ಅಗ್ನಿ ದುರಂತದಲ್ಲಿ 27 ಜನರು ಸಾವನ್ನಪ್ಪಿದ ನಂತರ, ಉಪಮುಖ್ಯಮಂತ್ರಿ ಮತ್ತು ಬೆಂಗಳೂರು ಅಭಿವೃದ್ಧಿ ಸಚಿವ ಡಿ.ಕೆ.ಶಿವಕುಮಾರ್ ಅವರು ನಗರದ ಗೇಮಿಂಗ್ ವಲಯಗಳ ಲೆಕ್ಕಪರಿಶೋಧನೆಗೆ ಆದೇಶಿಸಿದ್ದಾರೆ.


ಉದಯವಾಹಿನಿ ಚಿತ್ರ

ಸುರಕ್ಷತಾ ಕ್ರಮಗಳು, ಅಗ್ನಿಶಾಮಕ ಇಲಾಖೆಯಿಂದ ಪರವಾನಗಿ ಇಲ್ಲದ ಕಾರಣ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಸೋಮವಾರ ಎಂಟು ಗೇಮಿಂಗ್ ವಲಯಗಳನ್ನು ಮುಚ್ಚಿದೆ. ಮೇ 25 ರಂದು ರಾಜ್ಕೋಟ್ ಗೇಮಿಂಗ್ ವಲಯದಲ್ಲಿ ಸಂಭವಿಸಿದ ಅಗ್ನಿ ದುರಂತದಲ್ಲಿ 27 ಜನರು ಸಾವನ್ನಪ್ಪಿದ ನಂತರ, ಉಪಮುಖ್ಯಮಂತ್ರಿ, ಬೆಂಗಳೂರು ಅಭಿವೃದ್ಧಿ ಸಚಿವ ಡಿ.ಕೆ.ಶಿವಕುಮಾರ್ ಅವರು ನಗರದ ಗೇಮಿಂಗ್ ವಲಯಗಳ ಲೆಕ್ಕಪರಿಶೋಧನೆಗೆ ಆದೇಶಿಸಿದ್ದಾರೆ. ನಗರದ 29 ಗೇಮಿಂಗ್ ವಲಯಗಳ ಲೆಕ್ಕಪರಿಶೋಧನೆಯ ತಂಡಗಳು ಎಂಟು ಅಧಿಕಾರಿಗಳಿಂದ ಸಂಬಂಧಿತ ನಿರಾಕ್ಷೇಪಣಾ ಪ್ರಮಾಣಪತ್ರಗಳನ್ನು (ಎನ್‌ಒಸಿ) ಹೊಂದಿಲ್ಲ ಎಂದು ಕಂಡುಕೊಂಡಿವೆ.

ಅನೇಕ ಮಾಲ್‌ಗಳನ್ನು ಹೊಂದಿರುವ ಯಲಹಂಕದಲ್ಲಿ ಅತಿ ಹೆಚ್ಚು ಗೇಮಿಂಗ್ ವಲಯ ಉಲ್ಲಂಘನೆಗಳಿವೆ, ಆರು ಮಾಲ್‌ಗಳಿವೆ. ಯಲಹಂಕ ವಲಯದಲ್ಲಿ ನಿಯಮ ಉಲ್ಲಂಘನೆಗಾಗಿ ಆರ್ ಎಂಝಡ್ ಗ್ಯಾಲೇರಿಯಾದ ಫನ್ ಸಿಟಿ, ಮಾಲ್ ಆಫ್ ಏಷ್ಯಾದ ಫನ್ ಸಿಟಿ, ಎಲಿಮೆಂಟ್ಸ್ ಮಾಲ್ ಫನ್ ಸಿಟಿಯ ಫನ್ ಅನ್ಲಿಮಿಟೆಡ್ ಮತ್ತು ಭಾರತೀಯ ಸಿಟಿ ಮಾಲ್‌ನ ಅಮೀಬಾವನ್ನು ಮುಚ್ಚಲಾಗಿದೆ.

ಬಿಬಿಎಂಪಿ ಅಧಿಕಾರಿಯೊಬ್ಬರು, ನಾವು ಸದ್ಯಕ್ಕೆ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಿದ್ದೇವೆ. ಅವರು ಸುರಕ್ಷತಾ ಕ್ರಮಗಳನ್ನು ಅನುಸರಿಸಿದರೆ ಮತ್ತು ಸಂಬಂಧಿತ ಏಜೆನ್ಸಿಗಳಿಂದ ಎನ್‌ಒಸಿ ಪಡೆದರೆ ಮರುಪ್ರಾರಂಭಿಸಲು ನಾವು ಅವರಿಗೆ ಅವಕಾಶ ನೀಡುತ್ತೇವೆ ಎಂದರು.

## ಸರ್ಕಾರ ವರ್ಷ ಪೂರೈಸಿದರೂ, ಆಗದ ಅಭಿವೃದ್ಧಿ

• ಉದಯವಾಹಿನಿ, ದೇವನಹಳ್ಳಿ

ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಆರಂಭವಾದ ದೇವನಹಳ್ಳಿ ಜಾಗತಿಕ ಮಟ್ಟದದಲ್ಲಿ ಗುರುತಿಸಿ ಕೊಂಡಿದೆ. ಆದರೆ ಒಂದು ತಾಲ್ಲೂಕು ಕೇಂದ್ರಕ್ಕೆ ಬೇಕಾದ ಕನಿಷ್ಠ ಸೌಕರ್ಯಗಳು ಇಲ್ಲದೆ ದೇವನಹಳ್ಳಿ ಹಳ್ಳಿಯಾಗಿಯೇ ಉಳಿದಿದ್ದು, ಹೆಸರಿಗೆ ಮಾತ್ರ ಪಟ್ಟಣ ಎಂದೆನಿಸಿದೆ. ದೇವನಹಳ್ಳಿಗೆ ವಿಶ್ವದರ್ಜೆಯ ಸವಲತ್ತು, ಕನಿಷ್ಠ ಮೂಲ ಸೌಕರ್ಯ ಕಲ್ಪಿಸುವಲ್ಲಿ ಸರ್ಕಾರ ವಿಫಲವಾಗಿದೆ.

ಸಣ್ಣ ಮಳೆಗೆ ಪಟ್ಟಣ ನಲುಗುತ್ತಿದೆ. ಪ್ರಾಥಮಿಕವಾಗಿ ಬೇಕಾಗಿರುವ ರಸ್ತೆ, ಚರಂಡಿ ವ್ಯವಸ್ಥೆ ಇಲ್ಲ. ನೈರ್ಮಲ್ಯತೆ ಕಣ್ಮರೆಯಾಗಿದೆ. ದಿನನಿತ್ಯ ಸಮಸ್ಯೆಗಳಿಗೆ ಜನ ಹೊಂದಿಕೊಂಡು ಜೀವನ ನಡೆಸುತ್ತಿದ್ದಾರೆ. ಅಧಿಕಾರಕ್ಕೆ ಬರುವ ರಾಜಕೀಯ ಮುತ್ಸದ್ದಿಗಳು ಮತ್ತು ಜಿಲ್ಲಾ ಉಸ್ತುವಾರಿ ಸಚಿವರು ಅಭಿವೃದ್ಧಿವನ್ನು ಭಾಷಣಕಷ್ಟೇ ಸೀಮಿತಗೊಳಿಸಿದ್ದಾರೆ. ಕ್ಷೇತ್ರದ ಪ್ರಗತಿಯನ್ನು ಕಡೆಗಣಿಸಿದ್ದಾರೆ ಎನ್ನುವುದು ಸಾರ್ವಜನಿಕರ ದಶಕದ ಆರೋಪ. ಕಾಂಗ್ರೆಸ್‌ಅಧಿಕಾರಕ್ಕೆ ಬಂದು ವರ್ಷ ಪೂರೈಸಿದೆ. ಚುನಾವಣೆಗೂ ಮುನ್ನ ಕೆ.ಎಚ್.ಮುನಿಯಪ್ಪ ಅವರು ದೇವನಹಳ್ಳಿಯನ್ನು ಜಾಗತಿಕ ಮಟ್ಟದ ನಗರವಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ಆಶ್ವಾಸನೆ ನೀಡಿದ್ದರು. ಅವರೇ ವಿಜೇತರಾಗಿ, ಜಿಲ್ಲಾ ಉಸ್ತುವಾರಿ ಸಚಿವರೂ ಆದರೂ, ಆದರೆ ಅವರ ನೀಡಿದ ಭರವಸೆಗಳು ಯಾವುದು ಈಡೇರಲಿಲ್ಲ. ಅವರ ಒಂದು ವರ್ಷದ ಅವಧಿಯಲ್ಲಿ ಯಾವುದೇ ದೊಡ್ಡಮಟ್ಟದ ಅಭಿವೃದ್ಧಿ ಕಾರ್ಯ ಮತ್ತು ಕಾಮಗಾರಿಗಳಿಗೆ ಚಾಲನೆಯೂ ಸಿಗಲಿಲ್ಲ.



ಉದಯವಾಹಿನಿ ಚಿತ್ರ

ಕ್ಷೇತ್ರ ಜನರ ನಿರೀಕ್ಷೆಯಂತೆ ಪ್ರಗತಿಯೂ ಕಾಣಲಿಲ್ಲ ದೇವನಹಳ್ಳಿ ವಿಧಾನ ಸಭಾ ಕ್ಷೇತ್ರವೂ ಉಳಿದ ಜಿಲ್ಲೆಗಳ ಜಿಲ್ಲಾ ಕೇಂದ್ರಗಳಿಗೆ ಹೋಲಿಸಿಕೊಂಡರೇ ಅತ್ಯಂತ ಕಳಪೆಯಾಗಿದೆ. ಸೌಕರ್ಯ ಕೊರತೆಯೊಂದಿಗೆ ಜನ ಬದುಕು ವನ್ನು ರೂಢಿಸಿಕೊಂಡಿದ್ದಾರೆ.

ಪಟ್ಟಣದ ತಾಲ್ಲೂಕು ಆಡಳಿತಸೌಧದ ಉಪ ನೋಂದಣಾಧಿಕಾರಿ ಕಚೇರಿಯಿಂದ ನಿತ್ಯ ಕೋಟಿ ಕೋಟಿ, ವರಮಾನ ಸರ್ಕಾರದ ಖಜಾನೆಗೆ ಜಮೆ ಆಗುತ್ತಿದ್ದರೂ, ಯಾವುದೇ ಉಪಯೋಗವಿಲ್ಲದಂತಾಗಿದೆ. ಇಲ್ಲಿಗೆ ಬರುವ ಸಾರ್ವಜನಿಕರಿಗೆ ಶೌಚಾಲಯ, ಲಿಫ್ಟ್ ವ್ಯವಸ್ಥೆ ಇಲ್ಲದೇ ಹಿಡಿ ಶಾಪ ಹಾಕುವುದು ಸರ್ವೇ ಸಾಮಾನ್ಯವಾಗಿದೆ. ಸರ್ಕಾರಿ ಭೂಮಿ ರಕ್ಷಣೆಯಲ್ಲಿ ಅಧಿಕಾರಿಗಳು ಸೋತ್ತಿದ್ದು, ಯೋಜನಾ ಪ್ರಾಧಿಕಾರದ ಸಿಬ್ಬಂದಿಯೇ ನಕಲಿ ದಾಖಲೆ ನಕ್ಷೆ ಅನುಮೋದನೆ ಕೊಟ್ಟು, ಅನಧಿಕೃತ ನಿವೇಶನ ಸೃಷ್ಟಿಸುತ್ತಿದ್ದಾರೆ ಎನ್ನುವುದು ಸ್ಥಳೀಯರ ಗಂಭೀರ ಆರೋಪ. ಸ್ಥಳೀಯ ಗ್ರಾಮ ಪಂಚಾಯಿತಿ, ಪುರಸಭೆ ವ್ಯಾಪ್ತಿಯ ಉದ್ಯಾನಗಳು ಅವ್ಯವಸ್ಥೆಯ ಕೂಪವಾಗಿದೆ. ಅವುಗಳನ್ನು ಸೂಕ್ತವಾಗಿ ನಿರ್ವಹಣೆ ಮಾಡದೆ ಪಾಳು ಬಿದ್ದಿವೆ.

## ವೈದ್ಯರ ಗ್ರಾಮೀಣ ಸೇವೆ ನಿಯಮ ಬದಲಿಸಿ ಕರ್ನಾಟಕ ವಿಶೇಷ ರಾಜ್ಯ ಪತ್ರ ಪ್ರಕಟಿಸಿದ ಸರ್ಕಾರ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಸರ್ಕಾರ ವೈದ್ಯಕೀಯ ಕೋರ್ಸ್‌ಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಗ್ರಾಮೀಣ ಸೇವೆ ನಿಯಮಗಳಲ್ಲಿ ಮಹತ್ವದ ಬದಲಾವಣೆ ತಂದಿದ್ದು, ಈ ಕುರಿತು ಕರ್ನಾಟಕ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಣೆಯನ್ನು ಹೊರಡಿಸಿದೆ. ಕಡ್ಡಾಯ ಗ್ರಾಮೀಣ ಸೇವೆಗೆ ವೈದ್ಯಕೀಯ ಕೋರ್ಸ್ ಪೂರೈಸಿದವರನ್ನು ಸರ್ಕಾರಕ್ಕೆ ಅಗತ್ಯವಿದಷ್ಟು ಹುದ್ದೆಯನ್ನು ಮೆರಿಟ್ ಆಧಾರದ ಮೇಲೆ ಕೌನ್ಸಿಲಿಂಗ್ ಮೂಲಕ ನೇಮಕ ಮಾಡಿಕೊಳ್ಳಲು ನಿರ್ಧರಿಸಿದೆ.

**ಕೌನ್ಸಿಲಿಂಗ್ ಮೂಲಕ ನೇಮಕ**



ಉದಯವಾಹಿನಿ ಚಿತ್ರ

ಈ ಬಗ್ಗೆ ಜೂ. 11ರಂದು ನಿಯಮಾವಳಿಗಳೊಂದಿಗೆ ಗೆಜೆಟ್ ಅಧಿಸೂಚನೆ ಪ್ರಕಟಿಸಿದೆ. ಈ ಸಂಬಂಧ ಆಕ್ಷೇಪಣೆ ಸಲ್ಲಿಸಲು 15 ದಿನಗಳ ಕಾಲಾವಕಾಶ ನೀಡಿದೆ. ಈವರೆಗೆ ವೈದ್ಯಕೀಯ ಪದವಿ ಪೂರೈಸಿದ ಎಲ್ಲರೂ ಕಡ್ಡಾಯವಾಗಿ ಒಂದು ವರ್ಷದ ಸರ್ಕಾರಿ ಗ್ರಾಮೀಣ ಸೇವೆ ಸಲ್ಲಿಸಬೇಕಾಗಿತ್ತು. ಅಷ್ಟೂ ಮಂದಿಗೆ ಸರ್ಕಾರ ಸೇವೆಗೆ ಅವಕಾಶ ಮಾಡಿಕೊಡಲು ಹುದ್ದೆಗಳು ಇಲ್ಲದ ಕಾರಣ ಖಾಲಿ ಹುದ್ದೆಗಳಿಗೆ ಮಾತ್ರ ಅನ್ವಯವಾಗುವಂತೆ ತಿದ್ದುಪಡಿ ಮಾಡಿತ್ತು.

ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ಕಾಯಿದೆಯಲ್ಲಿ (2012) 'ಒಂದು ವರ್ಷದ ಕಡ್ಡಾಯ ಗ್ರಾಮೀಣ ಸೇವೆಗೆ' ಎಂಬ ಪದಗಳ ಮೊದಲು 'ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಲಾದಂತೆ ಅಸ್ತಿತ್ವದಲ್ಲಿರುವ ಖಾಲಿಹುದ್ದೆಗಳಲ್ಲಿ' ಎಂಬ ಪದಗಳನ್ನು ಸೇರಿಸಿತ್ತು.

ಈ ಪ್ರಕಾರ ಎಂಬಿಬಿಎಸ್, ಡಿಪ್ಲೊಮಾ, ಎಂಸ್/ಎಂಡಿ, ಸೂಪರ್ ಸ್ಪೆಷಾಲಿಟಿ ಕೋರ್ಸ್ ಪೂರೈಸಿದ ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ಅಗತ್ಯವಿರುವಷ್ಟು ಮಂದಿಯನ್ನು ಮಾತ್ರ ಒಂದು ವರ್ಷದ ಕಡ್ಡಾಯ ಸೇವೆಗೆ ನೇಮಕ ಮಾಡಿಕೊಳ್ಳಲು ಹಾಗೂ ಈ ವೇಳೆ ಪಾಲಿಸಬೇಕಾದ ನಿಯಮಗಳನ್ನು ಪ್ರಕಟಿಸಿದೆ. ಸ್ಥಳ ನಿಯೋಜನೆ, ವಿನಾಯಿತಿ ನೀಡುವ ವೇಳೆ ಅರ್ಜಿದಾರರ ಪತಿ, ಪತ್ನಿ, ಮಕ್ಕಳು ಅಥವಾ ಅವಲಂಬಿತರು ತೀವ್ರ ಅನಾರೋಗ್ಯ ಸಮಸ್ಯೆ ಹೊಂದಿದ್ದರೆ, ಅಭ್ಯರ್ಥಿ ಶೇ.40 ಹೆಚ್ಚು ಅಂಗ ವೈಕಲ್ಯ ಹೊಂದಿದ್ದರೆ, ವಿಧವೆಯಾಗಿದ್ದರೆ, ಸಿಂಗಲ್ ಪೇರೆಂಟ್ ಆಗಿದ್ದರೆ ಆದ್ಯತೆ ನೀಡಲು ತಿಳಿಸಲಾಗಿದೆ.

### 30 ಲಕ್ಷರು.ವರೆಗೆ ದಂಡ

**ಕಂಪ್ಯೂಟರ್ ಆಧಾರದ ಮೇಲೆ ಕೌನ್ಸೆಲಿಂಗ್ ನಡೆಯಲಿದ್ದು, ಸಮಯ, ಸ್ಥಳ ಹಾಗೂ ದಿನಾಂಕವನ್ನು ಪ್ರಾಧಿಕಾರ ತಿಳಿಸಲಿದೆ. ಮೆರಿಟ್ ಇದ್ದರೂ ಉದ್ದೇಶಪೂರ್ವಕವಾಗಿ ಕಡ್ಡಾಯ ಸೇವೆಯಿಂದ ತಪ್ಪಿಸಿಕೊಂಡರೆ ಅಥವಾ ಕೌನ್ಸಿಲಿಂಗ್‌ಗೆ ಹಾಜರಾಗದೆ ನಿರ್ಲಕ್ಷ್ಯ ಮಾಡಿ ನಿಯಮ ಉಲ್ಲಂಘಿಸಿದರೆ ಎಂಬಿಬಿಎಸ್ ಅಭ್ಯರ್ಥಿಗಳು 15 ಲಕ್ಷ ರು., ಡಿಪ್ಲೊಮಾ ಅಭ್ಯರ್ಥಿಗಳು 20 ಲಕ್ಷ, ಎಂಡಿ/ಎಂಎಸ್ ಅಭ್ಯರ್ಥಿಗಳು 25 ಲಕ್ಷ, ಸೂಪರ್ ಸ್ಪೆಷಾಲಿಸಿ ಕೋರ್ಸ್‌ನ ಅಭ್ಯರ್ಥಿಗಳು 30 ಲಕ್ಷರು. ದಂಡ ಪಾವತಿಸಬೇಕು ಎಂದು ಹೇಳಲಾಗಿದೆ.**

## ಹೊಸ ಬಿಪಿಲ್ ಕಾರ್ಡ್ ಸದ್ಯಕ್ಕಿಲ್ಲ ವಿತರಣೆ..!

• ಉದಯವಾಹಿನಿ, ಬೆಂಗಳೂರು

ಹೊಸ ಬಿಪಿಲ್ ಕಾರ್ಡ್ ನಿರೀಕ್ಷೆಯಲ್ಲಿದ್ದವರಿಗೆ ಕರ್ನಾಟಕ ಸರ್ಕಾರದಿಂದ ಬಿಗ್ ಶಾಕ್ ಸಿಕ್ಕಿದೆ. ಹೌದು, ಹೊಸದಾಗಿ ಕಾರ್ಡ್‌ಗಳನ್ನು ವಿತರಿಸಿದರೆ ಅಂತಹವರಿಗೆ ಗೃಹಲಕ್ಷ್ಮಿ ಯೋಜನೆಯಡಿ 2 ಸಾವಿರ ರೂ. ಹಣವನ್ನೂ ಕೂಡ ನೀಡಬೇಕಾಗುತ್ತದೆ, ಇದು ರಾಜ್ಯ ಸರ್ಕಾರಕ್ಕೆ ಹೊರೆಯಾಗುವ ನಿಟ್ಟಿನಲ್ಲಿ ಸದ್ಯಕ್ಕೆ ಹೊಸ ಕಾರ್ಡ್‌ಗಳನ್ನು ನೀಡದೇ ಇರುವುದಕ್ಕೆ ರಾಜ್ಯ ಸರ್ಕಾರ ಮುಂದಾಗಿರುವ ಬಹುದು ಎನ್ನಲಾಗಿದೆ.

2023ರ ಮೇ ತಿಂಗಳಲ್ಲಿ ರಾಜ್ಯ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಚುನಾವಣಾ ನೀತಿ ಸಂಹಿತೆ ಜಾರಿಗೆ ಬಂದ ಹಿನ್ನಲೆಯಲ್ಲಿ ಹೊಸ ಪಡಿತರ ಚೀಟಿಯನ್ನು ನೀಡುವುದಕ್ಕೆ ತಡೆ ಇತ್ತು, ಆದಾದ ಬಳಿಕ ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಕೂಡ ಹೊಸ ಕಾರ್ಡ್‌ಗಳನ್ನು ನೀಡಲಾಗುತ್ತಿರಲಿಲ್ಲ. ಸದ್ಯ ಹೊಸದಾಗಿ ಕಾರ್ಡ್‌ಗಾಗಿ ಅರ್ಜಿ ಸಲ್ಲಿಸಲು ಸಾಕಷ್ಟು ಮಂದಿ ಕಾಯುತ್ತಿದ್ದು, ಅಂತಹವರಿಗೆ ಹೊಸ ಕಾರ್ಡ್ ಸಿಗುವುದು ಸದ್ಯಕ್ಕೆ ಅನುಮಾನ ಮೂಡಿಸಿದೆ.

## ಟೋಪಿ, ಶಾಲು ಧರಿಸಿ ಬಕ್ರೀದ್‌ನಲ್ಲಿ ಭಾಗಿಯಾದ ಸಿಎಂ

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯ ಅವರು ಇಂದು 'ಮುಸ್ಲಿಂ' ಸಮುದಾಯದ ಟೋಪಿ, ಶಾಲು ಧರಿಸಿ ಬಕ್ರೀದ್‌ನಲ್ಲಿ ಭಾಗಿಯಾಗಿದ್ದಾರೆ.ಇಂದು ಬಕ್ರೀದ್ ಹಬ್ಬದ ಅಂಗವಾಗಿ ಚಾಮರಾಜಪೇಟೆಯ ಈದ್ಗಾ ಮೈದಾನದಲ್ಲಿ ನಡೆದ ಸಾಮೂಹಿಕ ಪ್ರಾರ್ಥನೆಯಲ್ಲಿ ಪಾಲ್ಗೊಂಡ ಸಿಎಂ ಸಿದ್ದರಾಮಯ್ಯ ಮುಸ್ಲಿಂ ಬಾಂಧವರನ್ನುದ್ದೇಶಿಸಿ ಮಾತನಾಡಿದರು.

ಎಲ್ಲಾ ಮುಸಲ್ಮಾನ ಬಾಂಧವರಿಗೆ ಬಕ್ರೀದ್ ಶುಭಾಶಯಗಳು. ಎಲ್ಲರೂ ಇಂದು ಭಕ್ತಿಯಿಂದ ಪ್ರಾರ್ಥನೆಯಲ್ಲಿ ಭಾಗವಹಿಸಿ ಮನುಕುಲಕ್ಕೆ ಒಳಿತಾಗಲಿ ಎಂದು ಪ್ರಾರ್ಥಿಸಿದ್ದೀರಿ. ಎಲ್ಲರೂ ಸಾಮೂಹಿಕ ಪ್ರಾರ್ಥನೆ ಮಾಡಿದ್ದು, ಸಮಾಜದಲ್ಲಿ ನಾವೆಲ್ಲರೂ ಅಣ್ಣತಮ್ಮಂದಿರ ಹಾಗೆ ಪರಸ್ಪರ ಪ್ರೀತಿ ವಿಶ್ವಾಸದಿಂದ ಬಾಳಬೇಕು. ಭಾರತ ಬಹುತ್ವದ ದೇಶ. ಎಲ್ಲಾ ಧರ್ಮ, ಜಾತಿ, ಭಾಷೆ, ಪ್ರಾಂತ್ಯದವರು ಒಟ್ಟಾಗಿ ಬಾಳಬೇಕು. ಮನುಷ್ಯತ್ವ ಬಹಳ ದೊಡ್ಡದು. ಎಲ್ಲರೂ ಪರಸ್ಪರ ಪ್ರೀತಿಸಬೇಕು. ಪ್ರತಿಯೊಬ್ಬರೂ ಸಹಿಷ್ಣುತೆಯನ್ನು ಪಾಲಿಸಬೇಕು. ಧರ್ಮವನ್ನು ಪ್ರೀತಿಸುವ ಮನೋಭಾವವನ್ನು ಬೆಳೆಸಿಕೊಳ್ಳಬೇಕು. ಹಾಗೆ ಬೆಳೆದಾಗ ಮಾತ್ರ ರಾಷ್ಟ್ರ, ಸಮಾಜ, ಎಲ್ಲಾ ಧರ್ಮಗಳೂ ಏಳಿಗೆಯಾಗುತ್ತವೆ. ನಮ್ಮದು ಸರ್ವಧರ್ಮ ಸಮನ್ವಯದಲ್ಲಿ, ಸಂವಿಧಾನದಲ್ಲಿ ನಂಬಿಕೆ ಇಟ್ಟಿರುವ ಸರ್ಕಾರ.

ಸಂವಿಧಾನ ಹೇಳುವಂತೆ ನಡೆದುಕೊಳ್ಳುತ್ತೇವೆ. ಯಾವುದೇ ತಾರತಮ್ಯ ಮಾಡುವುದಿಲ್ಲ. ಕರ್ನಾಟಕದ ಏಳು ಕೋಟಿ ಜನರನ್ನು ರಕ್ಷಣೆ ಮಾಡುವ ಜವಾಬ್ದಾರಿ ನಮ್ಮದು. ಈ ಕೆಲಸವನ್ನು ತಾರತಮ್ಯವಿಲ್ಲದೆ ಮಾಡುತ್ತೇವೆ. ಅಲ್ಪಸಂಖ್ಯಾತರು ಕೂಡ ಯಾವುದೇ ಕಾರಣಕ್ಕೂ ಭಯ ಆತಂಕ ಪಡಬೇಕಾದ ಅಗತ್ಯವಿಲ್ಲ.

# ಫಲಿತಾಂಶ ಯಶಸ್ವಿ: ಜೆಡಿಎಸ್-ಬಿಜೆಪಿ ಮೈತ್ರಿ ಮತ್ತಷ್ಟು ಗಟ್ಟಿ

■ ಎಚ್. ಡಿ. ಕುಮಾರಸ್ವಾಮಿ ಲೋಕಸಭೆ ಚುನಾವಣೆ 2024 ಗಮನದಲ್ಲಿಟ್ಟುಕೊಂಡು ಎನ್‌ಡಿಎ ಮೈತ್ರಿಕೂಟಕ್ಕೆ ಬೆಂಬಲ ಘೋಷಣೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ರಾಜಕೀಯ ಚಿತ್ರಣದಲ್ಲಿ ಕೆಲವು ಬದಲಾವಣೆಯಾಗಿದೆ. 2023ರ ವಿಧಾನಸಭೆ ಚುನಾವಣೆ, 2024ರ ಲೋಕಸಭೆ ಚುನಾವಣೆ ಬಳಿಕ ರಾಜ್ಯ ರಾಜಕೀಯದಲ್ಲಿ ಮಹತ್ವದ ಬದಲಾವಣೆ ಯಾಗಿದೆ. ಕಾಂಗ್ರೆಸ್‌ವಿರುದ್ಧದ ಬಿಜೆಪಿ-ಜೆಡಿಎಸ್ ಮೈತ್ರಿ ಮತ್ತಷ್ಟು ಗಟ್ಟಿಯಾಗಿದೆ.

**ಬಿಜೆಪಿ-ಜೆಡಿಎಸ್ ಸೀಟು ಹಂಚಿಕೆ**


ಉದಯವಾಹಿನಿ ಚಿತ್ರ

2023ರ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್135 ಕ್ಷೇತ್ರ ಗೆಲ್ಲುವ ಮೂಲಕ ಬಿಜೆಪಿಗೆ ಮುಖಭಂಗ ಉಂಟು ಮಾಡಿತು. ಅಧಿಕಾರ ದಲ್ಲಿದ್ದ ಪಕ್ಷವಾದ ಬಿಜೆಪಿ ಕೇವಲ 66 ಸ್ಥಾನಗಳಲ್ಲಿ ಗೆಲುವು ಕಂಡಿತು. ಜೆಡಿಎಸ್ 19 ಸ್ಥಾನ ಗೆಲ್ಲಲು ಮಾತ್ರ ಸಾಧ್ಯವಾಯಿತು. ಆದರೆ ಚುನಾವಣೆ ಫಲಿತಾಂಶದ ಬಳಿಕ ರಾಜ್ಯ ರಾಜಕೀಯ ಬದಲಾಯಿತು.

ಮಾಜಿ ಮುಖ್ಯಮಂತ್ರಿ ಎಚ್. ಡಿ. ಕುಮಾರಸ್ವಾಮಿ ಲೋಕಸಭೆ ಚುನಾವಣೆ 2024 ಗಮನದಲ್ಲಿಟ್ಟುಕೊಂಡು ಎನ್‌ಡಿಎ ಮೈತ್ರಿಕೂಟಕ್ಕೆ ಬೆಂಬಲ ಘೋಷಣೆ ಮಾಡಿದರು. ಬಿಜೆಪಿ ಜೊತೆ ಸೀಟು ಹಂಚಿಕೆ ಮಾಡಿಕೊಂಡು ಚುನಾವಣೆ ಎದುರಿಸುವುದಾಗಿ ಘೋಷಣೆ ಮಾಡಿದರು. ಬಿಜೆಪಿ-ಜೆಡಿಎಸ್ ಮೈತ್ರಿಯ ಪ್ರಯೋಗದ ಬಗ್ಗೆ ಅನೇಕರಿಗೆ ಆತಂಕವಿತ್ತು. ವಿಧಾನ ಪರಿಷತ್ ಚುನಾವಣೆ, ಲೋಕಸಭೆ ಚುನಾವಣೆ 2024ರಲ್ಲಿ ಬಿಜೆಪಿ-ಜೆಡಿಎಸ್ ಸೀಟು ಹಂಚಿಕೆ, ಮೈತ್ರಿ ಫಲ ನೀಡಿದೆ. ಇದರಿಂದಾಗಿ ಮುಂಬರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ), ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆಗಳಲ್ಲಿಯೂ ಮೈತ್ರಿ ಮುಂದುವರೆಯುವ ಸೂಚನೆ ಸಿಕ್ಕಿದೆ.

ಲೋಕಸಭೆ ಚುನಾವಣೆ 2024ರ ಫಲಿತಾಂಶ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಗೆ ಶಕ್ತಿ ತುಂಬಿದೆ. ಹಳೆ ಮೈಸೂರು ಭಾಗದಲ್ಲಿ ಬಿಜೆಪಿಗೆ ಒಕ್ಕಲಿಗ ಮತಗಳು ಬಂದಿದ್ದು, ಜೆಡಿಎಸ್ ಬಿಜೆಪಿ ಹೊಂದಾಣಿಕೆ ಫಲ ನೀಡಿದೆ ಎಂಬುದಕ್ಕೆ ಸಾಕ್ಷಿಯಾಗಿದೆ. ಮಂಡ್ಯದಿಂದ ಚುನಾವಣೆಗೆ ಗೆದ್ದ ಎಚ್. ಡಿ. ಕುಮಾರಸ್ವಾಮಿ ಪ್ರಧಾನಿ ನರೇಂದ್ರ ಮೋದಿ 3.0 ಸಂಪುಟವನ್ನು ಸೇರಿದ್ದು, ಭಾರೀ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವರಾಗಿ ಅಧಿಕಾರ ವಹಿಸಿಕೊಂಡಿದ್ದಾರೆ.

> **ಬೆಂಗಳೂರು ನಗರ, ಹಳೆ ಮೈಸೂರು ಭಾಗದ ಲೋಕಸಭಾ ಕ್ಷೇತ್ರಗಳ ಸಂಸದರು ಬಿಜೆಪಿ-ಜೆಡಿಎಸ್ ಮೈತ್ರಿ ಬಿಬಿಎಂಪಿ ಚುನಾವಣೆ, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆಯಲ್ಲಿ ಮುಂದುವರೆಯಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ಮೈತ್ರಿ ಮುರಿಯುವ ಮಾತುಗಳನ್ನು ಉಭಯ ಪಕ್ಷಗಳ ಯಾವ ನಾಯಕರು ಸಹ ಆಡಿಲ್ಲ. ಈ ಬಿಗಿಯಾದ ಮೈತ್ರಿ ಕಾಂಗ್ರೆಸ್‌ಗೆ ಆತಂಕವನ್ನು ತಂದಿದೆ.**

ಕೋಲಾರದಲ್ಲಿ ಜೆಡಿಎಸ್, ಬೆಂಗಳೂರು ದಕ್ಷಿಣ, ಉತ್ತರ, ಕೇಂದ್ರ ಲೋಕಸಭಾ ಕ್ಷೇತ್ರ. ತುಮಕೂರು ಲೋಕಸಭಾ ಕ್ಷೇತ್ರ. ಬೆಂಗಳೂರು ಗ್ರಾಮಾಂತರದಲ್ಲಿ ಬಿಜೆಪಿ ಅಭ್ಯರ್ಥಿ ಡಾ. ಸಿ. ಎನ್. ಮಂಜುನಾಥ್ ಗೆಲುವು ಎಲ್ಲದರಲ್ಲೂ ಬಿಜೆಪಿ-ಜೆಡಿಎಸ್ ಮೈತ್ರಿಯ ಲೆಕ್ಕಾಚಾರ ಅಡಗಿದೆ ಎಂಬುದನ್ನು ಬಿಜೆಪಿ ನಾಯಕರು ಸಹ ಒಪ್ಪಿದ್ದಾರೆ. ಬಿಬಿಎಂಪಿ ಚುನಾವಣೆ ಕಾಂಗ್ರೆಸ್-ಬಿಜೆಪಿ ಜೆಡಿಎಸ್ ಮೈತ್ರಿಕೂಟಕ್ಕೆ ಪ್ರತಿಷ್ಠೆಯಾಗಿದೆ. ಬೆಂಗಳೂರಿನ ಮೇಲೆ ಹಿಡಿತಹೊಂದಿರುವ ಪ್ರತಿಪಕ್ಷ ನಾಯಕ ಆರ್. ಅಶೋಕ ಬಿಜೆಪಿ ಅಧಿಕಾರ ಹಿಡಿಯಲೇಬೇಕು ಎಂದು ತಂತ್ರ ರೂಪಿಸುತ್ತಿದ್ದಾರೆ. ಕಾಂಗ್ರೆಸ್‌ವಿರೋಧಿಯಾದ ಜೆಡಿಎಸ್ ಬಿಜೆಪಿಗೆ ಬೆಂಬಲ ನೀಡಲಿದೆ. ಲೋಕಸಭೆ ಚುನಾವಣೆಯಲ್ಲಿ ಬೆಂಗಳೂರು ನಗರದ ಮೂರು ಕ್ಷೇತ್ರಗಳನ್ನು ಗೆದ್ದಿರುವ ಬಿಜೆಪಿ, ಬಿಬಿಎಂಪಿ ವಾರ್ಡ್‌ಗಳ ಸಂಖ್ಯೆ ಹೆಚ್ಚಾದ ಬಳಿಕ ನಡೆಯುವ ಮೊದಲ ಚುನಾವಣೆಯಲ್ಲಿ ಗೆಲುವು ಸಿಗಬೇಕು ಎಂದು ಚುನಾವಣಾ ತಯಾರಿ ಆರಂಭಿಸಿದೆ.

> **ಬಿಬಿಎಂಪಿ ಚುನಾವಣೆ ಗೆಲ್ಲುವ ಮೂಲಕ ಬೆಂಗಳೂರು ನಗರಾಭಿವೃದ್ಧಿ ಸಚಿವರಾದ ಡಿ. ಕೆ. ಶಿವಕುಮಾರ್‌ಗೆ ಹಿನ್ನಡೆ ಉಂಟು ಮಾಡುವುದು ಬಿಜೆಪಿ, ಜೆಡಿಎಸ್ ತಂತ್ರವಾಗಿದೆ. ಸುಮಾರು 4 ವರ್ಷಗಳಿಂದ ಬಿಬಿಎಂಪಿ ಚುನಾವಣೆಯೇ ನಡೆದಿಲ್ಲ. ಆದ್ದರಿಂದ ಈಗ ನಡೆಯುವ ಚುನಾವಣೆ ಗೆದ್ದು, ಬೆಂಗಳೂರು ನಗರದ ಆಡಳಿತ ಹಿಡಿಯಬೇಕು ಎಂಬುದು ಬಿಜೆಪಿ ಗುರಿ, ಇದಕ್ಕೆ ಜೆಡಿಎಸ್ ಬೆಂಬಲವಾಗಿ ನಿಂತಿದೆ.**

# ಒಕ್ಕಲಿಗ ನಾಯಕನಾಗಿ ಮೇಲೇಳಲು ಡಿಕೆಶಿ ಸರ್ವ ಪ್ರಯತ್ನ

## ಒಂದು ವರ್ಷದ ಅಂತರದಲ್ಲಿ ಮತ್ತೆ ಒಕ್ಕಲಿಗರು ಕುಮಾರಸ್ವಾಮಿ ಅವರ ಬೆನ್ನಿಗೆ ನಿಂತಿರುವುದು ಫಲಿತಾಂಶಗಳಲ್ಲಿ ಗೋಚರಿಸುತ್ತಿದೆ

• ಉದಯವಾಹಿನಿ ಮಂಡ್ಯ

ಲೋಕಸಭಾ ಚುನಾವಣೆಯಲ್ಲಿ ಒಕ್ಕಲಿಗ ಪ್ರಾಂತದಲ್ಲೇ ಹಿನ್ನಡೆ ಅನುಭವಿಸಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತೆ ಒಕ್ಕಲಿಗ ಸಮುದಾಯದ ಮೇಲೆ ಹಿಡಿತ ಸಾಧಿಸಲು ಪ್ರಯತ್ನ ನಡೆಸುತ್ತಿದ್ದಾರೆ. ಒಕ್ಕಲಿಗ ಸಮುದಾಯದಲ್ಲಿ ಒಕ್ಕಲಿಗ ನಾಯಕರ ನಾಯಕ ಎಂದು ಬಿಂಬಿಸಿಕೊಳ್ಳುತ್ತಿದ್ದ ಅವರಿಗೆ ಈ ಚುನಾವಣೆ ಮುಜುಗರ ತಂದೊಡ್ಡಿದೆ.

ಒಕ್ಕಲಿಗ ಸಮುದಾಯ ಬಲಿಷ್ಠವಾಗಿರುವ ಹಾಸನ ಹೊರತುಪಡಿಸಿ ಉಳಿದ ಎಲ್ಲಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ತೀವ್ರ ಹಿನ್ನಡೆ ಅನುಭವಿಸಿದೆ. ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಶಿವಕುಮಾರ್ ಅವರ ಸಹೋದರ ಡಿ.ಕೆ. ಸುರೇಶ್ ದಾಖಲೆಯ ಮತಗಳ ಅಂತರದಿಂದ ಸೋಲು ಕಂಡಿದ್ದಾರೆ. ಮಂಡ್ಯದಲ್ಲಿ ಕೇಂದ್ರ ಸಚಿವ ಜೆಡಿಎಸ್ ವರಿಷ್ಠ ಎಚ್.ಡಿ.ಕುಮಾರಸ್ವಾಮಿ ಮತ್ತು ಕೋಲಾರದಲ್ಲಿ ಮಲ್ಲೇಶ್ ಬಾಬು ಗೆದ್ದಿದ್ದಾರೆ. ಬಿಜೆಪಿ ಅಭ್ಯರ್ಥಿಗಳಾದ ತುಮಕೂರಿನಲ್ಲಿ ಕೇಂದ್ರ ಸಚಿವ ವಿ. ಸೋಮಣ್ಣ, ಮೈಸೂರಿನಲ್ಲಿ ಒಡೆಯರ್, ಚಿತ್ರದುರ್ಗದಲ್ಲಿ ಗೋವಿಂದ ಕಾರಜೋಳ ಬೆಂಗಳೂರು ಉತ್ತರದಲ್ಲಿ ಶೋಭಾ ಕರಂದ್ಲಾಜೆ, ಚಿಕ್ಕಬಳ್ಳಾಪುರದಲ್ಲಿ ಡಾ.ಡಿ.ಸುಧಾಕರ್ ಗೆಲುವು ಸಾಧಿಸಿದ್ದಾರೆ. ಎಂಟು ಒಕ್ಕಲಿಗ ಅಭ್ಯರ್ಥಿಗಳಿಗೆ ಟಿಕೆಟ್ ನೀಡಿದ್ದರೂ ಗೆದ್ದಿದ್ದು ಒಬ್ಬ ಅಭ್ಯರ್ಥಿ ಮಾತ್ರ ಎನ್ನುವುದು ಅರಗಿಸಿಕೊಳ್ಳಲಾಗದ ಸತ್ಯ.

ಭವಿಷ್ಯದಲ್ಲಿ ಮುಖ್ಯಮಂತ್ರಿ ಹುದ್ದೆಯ ಮೇಲೆ ಕಣ್ಣಿಟ್ಟಿರುವ ಶಿವಕುಮಾರ್ ಅವರಿಗೆ ಒಂದು ಹೆಜ್ಜೆ ಹಿಂದೆ ಸರಿದ ಅನುಭವವಾಗಿರಲಿಕ್ಕೂ ಸಾಕು.

ವರ್ಷದ ಹಿಂದೆ ನಡೆದ ವಿಧಾನಸಭಾ ಚುನಾವಣೆಯಲ್ಲಿ ಒಕ್ಕಲಿಗರು ಜೆಡಿಎಸ್ ಬಿಜೆಪಿ ಎರಡೂ ಪಕ್ಷಗಳನ್ನು ಕೈ ಬಿಟ್ಟು ಕಾಂಗ್ರೆಸ್ ಬೆಂಬಲಿಸಿದ್ದರು. ಇದೇ ಕಾರಣಕ್ಕೆ ಕಾಂಗ್ರೆಸ್ 135 ಸ್ಥಾನಗಳಲ್ಲಿ ಗೆಲುವು ಸಾಧಿಸಲು ಸಾಧ್ಯವಾಗಿತ್ತು. ಒಂದು ವರ್ಷದ ಅಂತರದಲ್ಲಿ ಮತ್ತೆ ಒಕ್ಕಲಿಗರು ಕುಮಾರಸ್ವಾಮಿ ಅವರ ಬೆನ್ನಿಗೆ ನಿಂತಿರುವುದು ಫಲಿತಾಂಶಗಳಲ್ಲಿ ಗೋಚರಿಸುತ್ತಿದೆ.

**ಎಲ್ಲಾ ಕ್ಷೇತ್ರಗಳಲ್ಲಿ ಕಾಂಗ್ರೆಸ್‌ಗೆ ತೀವ್ರ ಹಿನ್ನಡೆ**

ಇದರಿಂದ ಕಂಗೆಟ್ಟಿರುವ ಶಿವಕುಮಾರ್ ಇತ್ತೀಚೆಗೆ ಒಕ್ಕಲಿಗ ಸಚಿವರು ಮತ್ತು ಶಾಸಕರಿಗೆ ಔತಣಕೂಟ ಹಮ್ಮಿಕೊಂಡಿದ್ದರು. ಮತ್ತೆ ಒಕ್ಕಲಿಗರ ವಿಶ್ವಾಸವನ್ನು ಗಳಿಸಲು ಈ ಸಭೆಯಲ್ಲಿ ಚರ್ಚೆ ನಡೆದಿದೆ. ಒಕ್ಕಲಿಗರ ಬೆಂಬಲ ಏಕೆ ಕಡಿಮೆಯಾಯಿತು ಎಂಬ ಬಗ್ಗೆ ಕಾರಣಗಳನ್ನು ತಿಳಿದುಕೊಳ್ಳಬೇಕಿದೆ ಮತ್ತು ಪರಿಹಾರಗಳನ್ನು ರೂಪಿಸಬೇಕಿದೆ ಎಂದು ಅವರು ಸಭೆಗೆ ತಿಳಿಸಿದ್ದಾರೆ ಎಂದು ತಿಳಿದು ಬಂದಿದೆ. ಸೋತಿರುವುದು ನಿಜ. ಈ ಸೋಲು ತಾತ್ಕಾಲಿಕ ಎಂದು ಭಾವಿಸುತ್ತೇನೆ. ಮುಂದಿನ 6 ತಿಂಗಳಲ್ಲಿ ಮತ್ತೆ ಒಕ್ಕಲಿಗರ ವಿಶ್ವಾಸವನ್ನು ಗಳಿಸುತ್ತೇನೆ. 2028ರ ಚುನಾವಣೆಯಲ್ಲೂ ಮತ್ತೆ ಕಾಂಗ್ರೆಸ್ ಪಕ್ಷವನ್ನು ಮರಳಿ ಅಧಿಕಾರಕ್ಕೆ ತರುತ್ತೇನೆ. ಮುಂಬರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮರಳಿ ಒಕ್ಕಲಿಗರ ವಿಶ್ವಾಸವನ್ನು ಗಳಿಸುವುದಾಗಿಯೂ ಅವರು ಒಕ್ಕಲಿಗ ಶಾಸಕರ ಮುಂದೆ ಶಪಥ ಮಾಡಿದ್ದಾರೆ. ಅತ್ತ ಶಿವಕುಮಾರ್ ಬೇಸರದಲ್ಲಿದ್ದರೆ ಇತ್ತ ಮುಖ್ಯಮಂತ್ರಿ ಸಿದ್ದರಾಮಯ್ಯ ಗುಂಪಿನ ಸಚಿವರು ಶಾಸಕರು ಶಿವಕುಮಾರ್ ವಿರುದ್ಧ ತಮ್ಮ ಕತ್ತಿಗಳನ್ನು ಮತ್ತಷ್ಟು ಹರಿತಗೊಳಿಸುತ್ತಿದ್ದಾರೆ. ಸಹಕಾರ ಸಚಿವ ಕೆ.ಎನ್.ರಾಜಣ್ಣ ಅವರು ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಸ್ಥಾನಕ್ಕೆ ಮಾತ್ರ ಶಿವಕುಮಾರ್ ಅವರನ್ನು ಬೆಂಬಲಿಸುವುದಾಗಿ ಮತ್ತೆ ಹೇಳಿದ್ದಾರೆ. ಮೂವರು ಉಪ ಮುಖ್ಯಮಂತ್ರಿ ಸ್ಥಾನಗಳನ್ನು ಸೃಷ್ಟಿಸಲು ಇದು ಸಕಾಲ ಎಂದು ಸಚಿವರಾದ ಸತೀಶ್ ಜಾರಕಿಹೊಳಿ ಮತ್ತು ಡಾ.ಎಚ್.ಸಿ.ಮಹದೇವಪ್ಪ ಮತ್ತು ಪುನರುಚ್ಚರಿಸಿದ್ದಾರೆ. ಈ ಅಭಿಪ್ರಾಯಗಳು ಶಿವಕುಮಾರ್ ಅವರ ಸ್ಥಾನಕ್ಕೆ ಕುತ್ತು ತರುವಂತಿವೆ ಎಂದು ಅವರ ಬೆಂಬಲಿಗರು ವಿಶ್ಲೇಷಿಸುತ್ತಾರೆ.


ಉದಯವಾಹಿನಿ ಚಿತ್ರ

**ಡಿ.ಕೆ ಶಿವಕುಮಾರ ಒಕ್ಕಲಿಗರ ಅದ್ವಿತೀಯ ನಾಯಕ ಎಂದು ಬಿಂಬಿತಗೊಂಡಿಲ್ಲ**

ಸಿದ್ದರಾಮಯ್ಯ ಅಹಿಂದ ವರ್ಗಗಳ ಚಾಂಪಿಯನ್ ಆಗಿ ಸಮರ್ಥವಾಗಿ ಬಿಂಬಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. ಈ ವರ್ಗಗಳು ಅವರನ್ನು ಒಪ್ಪಿಕೊಂಡಿವೆ. ಆದರೆ ಶಿವಕುಮಾರ ಒಕ್ಕಲಿಗರ ಅದ್ವಿತೀಯ ನಾಯಕ ಎಂದು ಬಿಂಬಿತಗೊಂಡಿಲ್ಲ. ಈಗಲೂ ತಮ್ಮ ನಾಯಕ ಎಂದು ಒಕ್ಕಲಿಗರು ಎಚ್.ಡಿ.ದೇವೇಗೌಡ ಮತ್ತು ಎಚ್.ಡಿ.ಕುಮಾರಸ್ವಾಮಿ ಅವರನ್ನು ಒಪ್ಪಿಕೊಂಡಿದ್ದಾರೆಯೇ ಹೊರತು ಶಿವಕುಮಾರ್ ಅವರನ್ನು ಅಲ್ಲ ಎನ್ನುವುದು ಸತ್ಯ.

**2020ರಲ್ಲಿ ಸಂಕಷ್ಟ ಕಾಲದಲ್ಲಿ ಶಿವಕುಮಾರ್ ಪಕ್ಷದ ಅಧ್ಯಕ್ಷರಾಗಿ ನೇಮಕಗೊಂಡಿದ್ದರು. 135 ಸ್ಥಾನಗಳನ್ನು ಗೆಲ್ಲುವಲ್ಲಿ ಅವರ ಪರಿಶ್ರಮವನ್ನು ಅಲ್ಲಗಳೆಯುವಂತಿಲ್ಲ. ಸರಕಾರ ಮತ್ತು ಪಕ್ಷದಲ್ಲಿ ಸಿದ್ದರಾಮಯ್ಯ ಅವರನ್ನು ಬೆಂಬಲಿಸುವಷ್ಟು ಶಿವಕುಮಾರ್ ಅವರನ್ನು ಬೆಂಬಲಿಸುವವರ ಸಂಖ್ಯೆ ಕಡಿಮೆ. ಹೊರಗಿನ ಎದುರಾಳಿಗಳನ್ನು ಎದುರಿಸುವುದು ಸುಲಭ. ಒಳಗಿನ ಶತ್ರುಗಳನ್ನು ಎದುರಿಸುವುದು ಕಷ್ಟಸಾಧ್ಯ. ಹಾಗಾಗಿ ತಮ್ಮ ಎದುರಾಳಿಗಳಿಗೆ ತಕ್ಕ ಉತ್ತರ ನೀಡಲು ಬೆಂಬಲಿಗರ ಕೊರತೆ ಇರುವುದನ್ನು ಅವರ ಬೆಂಬಲಿಗರು ಒಪ್ಪಿಕೊಳ್ಳುತ್ತಾರೆ.**

# ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಶಿಡ್ಲಘಟ್ಟ

ಮಕ್ಕಳಲ್ಲಿ ಸಾಹಿತ್ಯದ ಜ್ಞಾನ ತುಂಬಬೇಕು. ಈ ಮೂಲಕ ಉತ್ತಮ ಸಮಾಜದ ನಿರ್ಮಾಣಕ್ಕೆ ಬುನಾದಿ ಹಾಕಬೇಕು. ಸುಸಂಸ್ಕೃತ ಸಮಾಜ ನಿರ್ಮಾಣವಾದರೆ ಸಾಹಿತ್ಯ ಚಟುವಟಿಕೆಗೆ ಅರ್ಥ ಬರುತ್ತದೆ ಎಂದು ಮಂಗಳನಾಥ ಸ್ವಾಮೀಜಿ ನುಡಿದರು.

ತಾಲ್ಲೂಕಿನ ಹಂಡಿಗನಾಳ ಗ್ರಾಮದ ಕೆವಿ ಭವನದಲ್ಲಿ ಶ್ರೀ ಕೆಂಪಣ್ಣಸ್ವಾಮಿ ಶ್ರೀ ವೀರಣ್ಣಸ್ವಾಮಿ ದೇವಾಲಯದ ಟ್ರಸ್ಟ್ ವತಿಯಿಂದ 10ನೇ ವಾರ್ಷಿಕ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಮಾತನಾಡಿ, ಮಕ್ಕಳು ತಮ್ಮ ವಿದ್ಯಾರ್ಥಿ ಜೀವನದಲ್ಲಿ ಶ್ರದ್ಧೆ, ಛಲ, ಆಸಕ್ತಿಯೊಂದಿಗೆ ನಿಖರ ಗುರಿಗೆ ಮನಸ್ಸನ್ನು ಕೇಂದ್ರೀಕರಿಸಿಕೊಂಡು ಪರಿಶ್ರಮ ಹಾಕಬೇಕು. ಪ್ರತಿಫಲಕ್ಕೆ ತಕ್ಕ ಫಲ ದೊರೆಯುತ್ತದೆ. ತರಗತಿಯಲ್ಲಿ ದೈಹಿಕವಾಗಿ ಕುಳಿತರೆ ಸಾಲದು ಮನಸ್ಸು ಹೊರ ಹೋಗದಂತೆ ಎಚ್ಚರವಹಿಸಬೇಕು. ಪಾಠ ಕೇಳುವ ಶ್ರದ್ಧೆ ಬೆಳೆಸಿಕೊಳ್ಳಬೇಕು ಎಂದು ಆಶೀರ್ವಚನ ನೀಡಿದರು. ಎಸ್ ಎಸ್ ಎಲ್ ಸಿ ಮತ್ತು ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರವನ್ನು ಟ್ರಸ್ಟ್ ವತಿಯಿಂದ ವಿತರಿಸಿ ವಿದ್ಯಾರ್ಥಿಗಳೊಂದಿಗೆ ಪೋಷಕರನ್ನು ಸನ್ಮಾನಿಸಿ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಮಾಜಿ ಶಾಸಕ ವಿ.ಮುನಿಯಪ್ಪ, ದೇವಾಲಯದ ಟ್ರಸ್ಟ್‌ನ ಅಧ್ಯಕ್ಷ ನಾಗರಾಜ್ ಎನ್,ಅಶ್ವತ್ಥಯ್ಯ,ರವಿ ಬಿಳಿಶಿವಾಲೆ,ಅಧ್ಯಕ್ಷರು ನಾಗರಾಜ್ ಎನ್,ಸ್ಕೂಲ್ ದೇವರಾಜ್, ನಾಗರಾಜ್,ಮುನಿಸ್ವಾಮಿಗೌಡ, ಸದಾನಂದ ಮೂರ್ತಿ,ಎಲ್‌ಐಸಿ ನಾಗರಾಜ್, ವಿಜಯೇಂದ್ರ,ಗೊರಮಡಗು ರಾಜಣ್ಣ, ಪ್ರಶಾಂತ್ ಎಸ್‌ಎಫ್ ಸಿಎಸ್,ಧರ್ಮಪುರಿ ಚಂದ್ರು,ವಿವೇಕ್, ವಿದ್ಯಾರ್ಥಿಗಳು ಹಾಗೂ ಪೋಷಕರು ಇದ್ದರು.

**ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸದ ಜೊತೆಗೆ ಸಂಸ್ಕಾರವನ್ನು ಕೊಡುವುದು ಅವಶ್ಯವಿದೆ. ವಿದ್ಯಾರ್ಥಿ ಜೀವನದಲ್ಲಿ ಚೆನ್ನಾಗಿ ಅಭ್ಯಾಸ ಮಾಡಬೇಕು. ಶಿಕ್ಷಕರು ಪಾಠಗಳ ಜೊತೆಗೆ ಮಾನವೀಯ ಮೌಲ್ಯಗಳನ್ನು ಹಾಗೂ ಪ್ರಾಮಾಣಿಕತೆಯನ್ನು ಬಿತ್ತಬೇಕು. ಶಿಸ್ತು, ಒಳ್ಳೆಯ ನಡತೆ, ನೈತಿಕ ಮೌಲ್ಯಗಳನ್ನು ವಿದ್ಯಾರ್ಥಿಗಳು ಮೈಗೂಡಿಸಿಕೊಳ್ಳಬೇಕು. ನಮ್ಮ ಮಕ್ಕಳಿಗೆ ಇಂಗ್ಲೀಷ್ ಬರುವುದಿಲ್ಲ,ಕನ್ನಡ ಮಾಧ್ಯಮದಲ್ಲಿ ಓದಿದ್ದಾರೆ, ಅಂಕಗಳು ಕಡಿಮೆ ಬಂದಿದೆ, ನಮ್ಮ ಮಗು ಹಳ್ಳಿ ಶಾಲೆಯಲ್ಲಿ ಓದಿರುವುದು ನಮ್ಮ ಮಕ್ಕಳಿಗೆ ಉತ್ತಮ ಕೆಲಸ ಸಿಗುವುದಿಲ್ಲ ಎಂಬ ಅಪನಂಬಿಕೆಯನ್ನು ಬಿಟ್ಟು ಮಕ್ಕಳಲ್ಲಿ ಮಾನವೀಯ ಮೌಲ್ಯಗಳನ್ನು ಬೆಳಸಿ**

**-ಹೆಚ್.ಎನ್.ನಾಗಮೋಹನ್ ದಾಸ್, ನಿವೃತ್ತ ನ್ಯಾಯಮೂರ್ತಿ**

# ಮಳಿಗೆಗಳ ಹರಾಜು ಪ್ರಕ್ರಿಯೆ: ತೀವ್ರ ಹಗ್ಗಜಗ್ಗಾಟ

• ಉದಯವಾಹಿನಿ, ಚಿಕ್ಕಬಳ್ಳಾಪುರ

ನಗರದ ಬಜಾರ್ ರಸ್ತೆಯ ತರಕಾರಿ ಮಾರುಕಟ್ಟೆಯಲ್ಲಿ ನಗರಸಭೆಗೆ ಸೇರಿದ 99 ಅಂಗಡಿ ಮಳಿಗೆಗಳ ಹರಾಜು ಪ್ರಕ್ರಿಯೆ ನಗರದಲ್ಲಿ ತೀವ್ರ ಹಗ್ಗಜಗ್ಗಾಟಕ್ಕೆ ಕಾರಣವಾಗಿತ್ತು. ಈಗ ನಗರಸಭೆಯು ಒಂದು ಹೆಜ್ಜೆ ಮುಂದಡಿ ಇಟ್ಟು ದಿಟ್ಟ ಕ್ರಮಕ್ಕೆ ಮುಂದಾಗಿದೆ. ಮಳಿಗೆ ಹರಾಜು ನಡೆಯುತ್ತದೆಯೇ ಇಲ್ಲವೇ ಎನ್ನುವ ಜಿಜ್ಞಾಸೆಗಳ ನಡುವೆಯೇ 'ಮಳಿಗೆಗಳ ಹರಾಜು ನಡೆಸಲಾಗುತ್ತದೆ.

ಆಸಕ್ತರು ಭಾಗವಹಿಸಬಹುದು ಎಂದು ಮಾರುಕಟ್ಟೆಯ ಆವರಣ ಹಾಗೂ ನಗರದ ವಿವಿಧ ಭಾಗಗಳಲ್ಲಿ ಆಟೊ ಮೂಲಕ ಪ್ರಚಾರ ಸಹ ನಡೆಸಲಾಗಿದೆ. ಈ ಪ್ರಚಾರವು ಮಳಿಗೆಗಳ ಬಾಡಿಗೆದಾರರ ಕಣ್ಣು ಕೆಂಪಾಗುವಂತೆ ಮಾಡಿದ್ದರೆ, ಈಗಲಾದರೂ ನಗರಸಭೆಯು ಕ್ರಮವಹಿಸಲು ಮುಂದಾಯಿತು ಎಂದು ನಾಗರಿಕರು ನುಡಿಯುತ್ತಿದ್ದಾರೆ. ಸರ್ಕಾರ ನಿಯಮಗಳ ಪ್ರಕಾರ 12 ವರ್ಷಕ್ಕೆ ಒಮ್ಮೆ ಮಳಿಗೆಗಳ ಹರಾಜು ಹಾಕಬೇಕಾಗಿತ್ತು. ಆದರೆ ಇಲ್ಲಿಯವರೆಗೆ ಆಗಿಲ್ಲ. 1993ರಲ್ಲಿ ಮಳಿಗೆಗಳಿಗೆ ಬಾಡಿಗೆಗೆ ಬಂದಿರುವವರು ಇಂದಿಗೂ ಮುಂದುವರಿದ್ದಾರೆ. ಕೆಲವರು ಉಪ ಬಾಡಿಗೆ ನೀಡಿದ್ದಾರೆ. ಈಗ ಬಾಡಿಗೆಯಲ್ಲಿರುವವರೂ ಹರಾಜಿನಲ್ಲಿ ಪಾಲ್ಗೊಳ್ಳಲಿ. ಬಿಡ್‌ನಲ್ಲಿ ಭಾಗವಹಿಸಿ ಮಳಿಗೆ ಪಡೆಯಲಿ ಎನ್ನುತ್ತವೆ ನಗರಸಭೆ ಮೂಲಗಳು.


ಉದಯವಾಹಿನಿ ಚಿತ್ರ

ಮಳಿಗೆಗಳ ಹರಾಜು ಸಂಬಂಧ ಕಳೆದ ವರ್ಷದ ಡಿಸೆಂಬರ್‌ನಲ್ಲಿಯೇ ನಗರಸಭೆಯು ಬಾಡಿಗೆದಾರರಿಗೆ ಅಂತಿನ ನೋಟಿಸ್‌ಗಳನ್ನು ಜಾರಿಗೊಳಿಸಿತ್ತು. ಡಿ.31ರ ಗಡುವು ನೀಡಿತ್ತು. ನಗರಸಭೆ ಆಡಳಿತಾಧಿಕಾರಿಯೂ ಆದ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಮತ್ತು ಶಾಸಕ ಪ್ರದೀಪ್ ಈಶ್ವರ್ ಮಾರುಕಟ್ಟೆಗೆ ಭೇಟಿ ನೀಡಿದ್ದರು. ಆ ನಂತರ ಯಾವುದೇ ಪ್ರಕ್ರಿಯೆಗಳು ಮುಂದುವರಿಯಲಿಲ್ಲ. ರಾಜಕೀಯ ಹಸ್ತಕ್ಷೇಪಗಳ ಕಾರಣ ಹರಾಜು ಪ್ರಕ್ರಿಯೆ ನನೆಗುದಿಗೆ ಬಿದ್ದಿತು ಎನ್ನುವ ಮಾತುಗಳಿದ್ದವು.

# ಶಾಲೆಗಳಲ್ಲಿ ಮೂಲಸೌಕರ್ಯ ಕೊರತೆ: ಅಪಾಯದ ತೂಗುಗತ್ತಿ

• ಉದಯವಾಹಿನಿ, ಚಾಮರಾಜನಗರ

ಬಣ್ಣ ಮಾಸಿರುವ ಕಟ್ಟಡಗಳು, ದುರ್ವಾಸನೆ ಬೀರುವ ಶೌಚಾಲಯಗಳು, ಬಿರುಕುಬಿಟ್ಟ ತರಗತಿ ಕೊಠಡಿಗಳು, ಅಲ್ಲಲ್ಲಿ ಕುಸಿದು ಬಿದ್ದಿರುವ ಕಾಂಪೌಂಡ್ ಗೋಡೆ, ಮಳೆಗಾಲದಲ್ಲಿ ಸೋರುವ ಮಾಡು, ಮುರಿದು ಬಿದ್ದ ಕಿಟಕಿಗಳು, ಕುಸಿಯುವ ಭೀತಿಯಲ್ಲಿರುವ ಗೋಡೆಗಳು..ಇವು ಜಿಲ್ಲೆಯ ಸರ್ಕಾರಿ ಶಾಲೆಗಳ ಸ್ಥಿತಿ ಗತಿ...

ಮಳೆಗಾಲ ಆರಂಭವಾಗಿರುವ ಹಿನ್ನೆಲೆಯಲ್ಲಿ ಶಿಥಿಲಗೊಂಡರಿವ ಶಾಲೆಗಳ ದುರಸ್ತಿಗೆ ತುರ್ತು ಕ್ರಮ ಕೈಗೊಳ್ಳಬೇಕಿದ್ದು ನಿರ್ಲಕ್ಷ್ಯ ವಹಿಸಿದರೆ ಅನಾಹುತ ಸಂಭವಿಸುವ ಅಪಾಯ ಕಣ್ಣೆದುರಿಗಿದೆ. ಅಭಿವೃದ್ಧಿ ವಂಚಿತ ಗಡಿ ಜಿಲ್ಲೆ ಎಂಬ ಹಣೆಪಟ್ಟಿ ಕಟ್ಟಿಕೊಂಡಿರುವ ಚಾಮರಾಜನಗರ ಜಿಲ್ಲೆಯಲ್ಲಿ ಸರ್ಕಾರಿ ಶಾಲೆಗಳ ಸ್ಥಿತಿ ಉತ್ತಮವಾಗಿಲ್ಲ. ಶಿಕ್ಷಣ ಇಲಾಖೆಯ ಅಂಕಿ ಅಂಶಗಳ ಪ್ರಕಾರ ಜಿಲ್ಲೆಯಲ್ಲಿ 807 ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿದ್ದು ಇವುಗಳ ಪೈಕಿ 297 ಶಾಲೆಗಳಲ್ಲಿ ಆಟದ ಮೈದಾನ ಇಲ್ಲ. 49 ಶಾಲೆಗಳಲ್ಲಿ ಬಾಲಕರ ಹಾಗೂ 12 ಶಾಲೆಗಳಲ್ಲಿ ಬಾಲಕಿಯರ ಶೌಚಾಲಯಗಳ ಕೊರತೆ ಇದೆ.

122 ಶಾಲೆಗಳಲ್ಲಿ ಭಾಗಶಃ ಮಾತ್ರ ಶಾಲಾ ಕಾಂಪೌಡ್ ಇದ್ದರೆ, 54 ಶಾಲೆಗಳಿಗೆ ಕಾಂಪೌಂಡ್ ಭಾಗ್ಯವೇ ಇಲ್ಲ. 3 ಶಾಲೆಗಳಲ್ಲಿ ಗ್ರಂಥಾಲಯಗಳ ಕೊರತೆ ಇದೆ. 42 ಶಾಲೆಗಳಲ್ಲಿ ಅಂಗವಿಕಲ ವಿದ್ಯಾರ್ಥಿಗಳು ತರಗತಿ ಪ್ರವೇಶಕ್ಕೆ ಅನುಕೂಲವಾಗುವ ರಯಾಂಪ್ ವ್ಯವಸ್ಥೆ ಇಲ್ಲ. 52 ಶಾಲೆಗಳಲ್ಲಿ ಬಿಸಿಯೂಟ ತಯಾರಿಕೆಗೆ ಅಡುಗೆ ಮನೆಗಳ ಸೌಲಭ್ಯ ಇಲ್ಲ.


ಉದಯವಾಹಿನಿ ಚಿತ್ರ

**ಜಿಲ್ಲೆಯ ಸರ್ಕಾರಿ ಶಾಲೆಗಳ ಸ್ಥಿತಿ**

**ಚಾಮರಾಜನಗರ ತಾಲ್ಲೂಕಿನಲ್ಲಿರುವ 282 ಸರ್ಕಾರಿ ಶಾಲೆಗಳ ಪೈಕಿ 14 ಶಾಲೆಗಳಲ್ಲಿ ರ‍್ಯಾಂಪ್. 105 ಶಾಲೆಗಳಲ್ಲಿ ಆಟದ ಮೈದಾನ, 21 ಶಾಲೆಗಳಲ್ಲಿ ಸಮರ್ಪಕ ಶೌಚಾಲಯ, 18 ಶಾಲೆಗಳಲ್ಲಿ ಕಾಂಪೌಂಡ್, 2 ಶಾಲೆಗಳಲ್ಲಿ ವಿದ್ಯುತ್ ಸಂಪರ್ಕ ಹಾಗೂ 24 ಶಾಲೆಗಳಲ್ಲಿ ಅಡುಗೆ ಮನೆ ಇಲ್ಲ.**

# ತಲೆ ಮೇಲೆ ಕಲ್ಲು ಎತ್ತಿಹಾಕಿ ವ್ಯಕ್ತಿಯ ಬರ್ಬರ ಹತ್ಯೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಚಿಕ್ಕಬಳ್ಳಾಪುರ ಪೊಲೀಸ್ ಠಾಣೆ ಎದುರೇ ವ್ಯಕ್ತಿಯೊಬ್ಬರ ತಲೆ ಮೇಲೆ ಕಲ್ಲು ಎತ್ತಿಹಾಕಿ ಬರ್ಬರವಾಗಿ ಹತ್ಯೆ ಮಾಡಿರುವ ಘಟನೆಯೊಂದು ಭಾನುವಾರ ನಡೆದಿದೆ. ಎಲ್.ಎಂ.ಎಲ್ ಶೇಖರ್ ಕೊಲೆಯಾದ ವ್ಯಕ್ತಿ. ಅನೈತಿಕ ಸಂಬಂಧ, ಕಿರುಕುಳ, ಹಳೆ ದ್ವೇಷದಿಂದ ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದೆ.

ವಿಚಾರ ಗೊತ್ತಾಗುತ್ತಿದ್ದಂತೆಯೇ ಚಿಕ್ಕಬಳ್ಳಾಪುರ ನಗರಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಕೇಸ್ ದಾಖಲಿಸಿಕೊಂಡಿರುವ ಪೊಲೀಸರು ತನಿಖೆಯನ್ನು ಆರಂಭಿಸಿದ್ದಾರೆ.

ಹತ್ಯೆ ಮಾಡಿರುವ ಆರೋಪಿಯನ್ನು ಶಿವಕುಮಾರ್ (35) ಎಂದು ಗುರ್ತಿಸಲಾಗಿದೆ. ಚಿಕ್ಕಬಳ್ಳಾಪುರ ನಗರದ ಕಾರ್ಖಾನೆ ಪೇಟೆ ನಿವಾಸಿಯಾಗಿರುವ ಶಿವಕುಮಾರ್, ಕೊಲೆ ಮಾಡಿ ಪರಾರಿ ಆಗಿದ್ದಾನೆ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.

# ಆರ್ಥಿಕ ಚೇತರಿಕೆ ತುಂಬಿದ ಹೈನುಗಾರಿಕೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಕೊಡಿಗೇನಹಳ್ಳಿ

ಕೃಷಿಯಿಂದ ನಿರಂತರ ಆರ್ಥಿಕ ನಷ್ಟ ಅನುಭವಿಸುತ್ತಿದ್ದ ಹೋಬಳಿಯ ಜನ ಹೈನಗಾರಿಕೆಯಿಂದ ಆರ್ಥಿಕ ಚೇತರಿಕೆ ಕಂಡಿದ್ದಾರೆ. ಮಧುಗಿರಿ ತಾಲ್ಲೂಕು ಮಳೆಯಾಶ್ರಿತ ಪ್ರದೇಶ. ಮುಂಗಾರು ಮಳೆ ಒಂದು ವರ್ಷ ಸುರಿದರೆ, ಮತ್ತೆ ನಾಲ್ಕೈದು ವರ್ಷ ಬರ ಎದುರಿಸುವುದು ಮಾಮೂಲಿ. ಇಂತಹ ಸ್ಥಿತಿಯಲ್ಲಿ ರೈತ ಆರ್ಥಿಕ ಲಾಭ ನಿರೀಕ್ಷಿಸುವುದು ಹೇಗೆ? ಇಲ್ಲಿ ವ್ಯವಸಾಯ ಬಿಟ್ಟರೆ ಯಾವುದೇ ಕಾರ್ಖಾನೆ ಮತ್ತು ಶಾಶ್ವತ ನೀರಾವರಿ ಸೌಕರ್ಯಗಳಿಲ್ಲದಿರುವುದರಿಂದ ಇಲ್ಲಿನ ಬಹುತೇಕ ರೈತರು ಕೃಷಿ ಜೊತೆಗೆ ಹೈನುಗಾರಿಕೆಯಲ್ಲಿ ತೊಡಗಿಕೊಂಡು ಬದುಕು ಕಟ್ಟಿಕೊಳ್ಳುತ್ತಿದ್ದಾರೆ.

ಈ ಹಿಂದೆ ಪ್ರತಿ ರೈತರ ಮನೆಯಲ್ಲಿ ಕೃಷಿಗಾಗಿ ಎತ್ತು, ಕೋಣಗಳನ್ನು ಸಾಕುತ್ತಿದ್ದರು. ಆದರೆ ಇಂದು ಅವುಗಳ ಜಾಗವನ್ನು ಸೀಮೆ ಹಸುಗಳು ತುಂಬಿವೆ. ಭತ್ತ, ಕಬ್ಬು ಮತ್ತಿತರೆ ವಾಣಿಜ್ಯ ಬೆಳೆಗಳನ್ನು ಬೆಳೆಯುತ್ತಿದ್ದ ರೈತರು ಇಂದು ಜಾನುವಾರುಗಳಿಗಾಗಿ ಮಾತ್ರ ಮೇವು ಬೆಳೆದುಕೊಳ್ಳುತ್ತಿದ್ದಾರೆ. ಒಂದೆಡೆ ದವಸ-ಧಾನ್ಯಗಳನ್ನು ಬೆಳೆಯುವುದು ಕಡಿಮೆಯಾಗುತ್ತಿರುವುದು ಆತಂಕಕಾರಿಯಾದರೆ, ಮತ್ತೊಂದಡೆ ಹೈನಗಾರಿಕೆಯಿಂದ ಜೀವನ ಮಟ್ಟ ಸುಧಾರಣೆಯಾಗುತ್ತಿದೆ ಎಂದು ಸೂರನಾಗೇನಹಳ್ಳಿ ಗ್ರಾಮದ ರೈತ ಗಂಗಪ್ಪ ಅಭಿಪ್ರಾಯಪಟ್ಟರು.

ತಾಲ್ಲೂಕಿನಲ್ಲಿ ನಾಲ್ಕೈದು ತಿಂಗಳ ಹಿಂದೆ ಡೇರಿಗೆ ದಿನಕ್ಕೆ 89 ಸಾವಿರ ಲೀಟರ್ ಹಾಲು ಪೂರೈಕೆಯಾಗುತ್ತಿದ್ದು, ಇಂದು 1.15 ಲಕ್ಷ ಲೀಟರ್ ಹಾಲು ಪೂರೈಕೆಯಾಗುತ್ತಿದೆ.

# ದರ್ಶನ್‌ರನ್ನು ಇನ್ನಷ್ಟು ತೀವ್ರ ವಿಚಾರಣೆಗೆ ಒಳಪಡಿಸಿ

• ಉದಯವಾಹಿನಿ, ಮಡಿಕೇರಿ

ನಟ ದರ್ಶನ್ ಬೇರೆ ಕೊಲೆಗಳನ್ನು ಮಾಡಿರಬಹುದೇ ಎಂಬ ಕುರಿತು ತೀವ್ರ ವಿಚಾರಣೆ ಗೊಳಪಡಿಸಬೇಕು ಎಂದು ಬಿಜೆಪಿ ಮುಖಂಡ ಎಂ.ಪಿ.ಅಪ್ಪಚ್ಚುರಂಜನ್ ಒತ್ತಾಯಿಸಿದರು.ಅವರು ಇಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದರು.ನಾನು ಹೆಸರಿಡಿದೇ ಹೇಳುತ್ತೇನೆ. ಈ ದರ್ಶನ್ ಒಬ್ಬ ದುರಂಹಕಾರದ ವ್ಯಕ್ತಿ.

ಅಲ್ಪನಿಗೆ ಐಶ್ವರ್ಯ ಬಂದರೆ ಮಧ್ಯರಾತ್ರಿಯಲ್ಲಿ ಕೊಡೆ ಹಿಡಿದರು ಎಂಬಂತೆ ದರ್ಶನ್ ಇದ್ದರು. ಅವರ ಮ್ಯಾನೇಜರ್ ನಾಪತ್ತೆ ಪ್ರಕರಣವನ್ನೂ ಗಂಭೀರವಾಗಿ ಪರಿಗಣಿಸಿ ತನಿಖೆ ನಡೆಸಬೇಕು ಎಂದು ಅವರು ಆಗ್ರಹಿಸಿದರು.


ಉದಯವಾಹಿನಿ ಚಿತ್ರ

ಕಾಂಗ್ರೆಸ್ ಸರ್ಕಾರ ಬಂದ ಮೇಲೆ ಅಪರಾಧ ಕೃತ್ಯಗಳು ಹೆಚ್ಚಾಗಿವೆ. ಕೂಡಲೆ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು. ಇದಕ್ಕೂ ಮುನ್ನ ಸೈಕಲ್‌ನಲ್ಲಿ ಇಲ್ಲಿನ ಜನರಲ್ ತಿಮ್ಮಯ್ಯ ವೃತ್ತಕ್ಕೆ ಬಂದು ಇಂಧನ ಬೆಲೆ ಏರಿಕೆ ವಿರುದ್ಧ ನಡೆದ ಪ್ರತಿಭಟನೆಯಲ್ಲಿ ಭಾಗಿಯಾದರು.

# ದುರಸ್ತಿಗೆ ಕಾದಿರುವ 1,971 ಶಾಲಾ ಕೊಠಡಿ

• ಉದಯವಾಹಿನಿ, ಮಂಡ್ಯ

ಹಾರಿ ಹೋದ ಶೀಟುಗಳು, ಕುಸಿದು ಬಿದ್ದ ಕಟ್ಟಡಗಳು, ಬಿರುಕು ಬಿಟ್ಟ ಗೋಡೆಗಳು, ಸೋರುವ ಚಾವಣಿಗಳು, ನೇತಾಡುವ ಮರದ ತೀರುಗಳು, ಒಡೆದು ಹೋದ ಹೆಂಚುಗಳು, ಉದುರುತ್ತಿರುವ ಸಿಮೆಂಟ್... ಹೀಗೆ ನಾನಾ ತರಹದ ಸಮಸ್ಯೆಗಳಿಗೆ ಜಿಲ್ಲೆಯ ಸರ್ಕಾರಿ ಶಾಲಾ ಕೊಠಡಿಗಳು ತುತ್ತಾಗಿವೆ. ದುರಸ್ತಿ ಮತ್ತು ಮರುನಿರ್ಮಾಣದ ಕಾರ್ಯ ಆಮೆಗತಿಯಲ್ಲಿ ಸಾಗುತ್ತಿರುವುದು ಪಾಲಕರು ಮತ್ತು ಮಕ್ಕಳ ಬೇಸರಕ್ಕೆ ಕಾರಣವಾಗಿದೆ.

ಮಳೆಗಾಲದಲ್ಲಿ ಸರ್ಕಾರಿ ಶಾಲೆಗಳ ಮಕ್ಕಳಿಗೆ ಕಿರಿಕಿರಿ ತಪ್ಪಿದ್ದಲ್ಲ. ಮೂಲಸೌಕರ್ಯ ವಂಚಿತ ಮತ್ತು ಶಿಥಿಲಾವಸ್ಥೆಯಲ್ಲಿರುವ ಕೊಠಡಿಗಳಲ್ಲಿ ಆತಂಕದ ವಾತಾವರಣದಲ್ಲೇ ಮಕ್ಕಳ ಆಟ-ಪಾಠ ನಡೆಯುತ್ತಿದೆ. ಶಿಥಿಲಾವಸ್ಥೆ ತಲುಪಿದ ಕೊಠಡಿಯಲ್ಲಿ ಬೋಧಿಸಲು ಶಿಕ್ಷಕರು ಹಿಂದೇಟು ಹಾಕುತ್ತಾರೆ. ಹೀಗಾಗಿ ಶಾಲೆಗೆ ಸಮೀಪದ ಸಭಾ ಭವನ, ದೇವಸ್ಥಾನ ಅಂಗಳಗಳು ಶಾಲೆಯಾಗಿ ಮಾರ್ಪಡುವುದು ಅನಿವಾರ್ಯವಾಗುತ್ತದೆ. ಮಂಡ್ಯ ಜಿಲ್ಲೆಯಲ್ಲಿ 1756 ಸರ್ಕಾರಿ ಶಾಲೆಗಳಿದ್ದು, ಅವುಗಳಲ್ಲಿ 647 ಶಾಲೆಗಳು ದುರಸ್ತಿಗೆ ಕಾದಿವೆ. 600 ಶಾಲಾ ಕೊಠಡಿಗಳು ಸಣ್ಣ ಪ್ರಮಾಣದ ದುರಸ್ತಿಗೆ ಕಾದಿದ್ದರೆ, 1371 ಕೊಠಡಿಗಳಿಗೆ ದೊಡ್ಡ ಪ್ರಮಾಣದಲ್ಲಿ ದುರಸ್ತಿ ಕಾರ್ಯ ನಡೆಯಬೇಕಿದೆ. ಈ ದುರಸ್ತಿ ಕಾರ್ಯಕ್ಕೆ ಅಂದಾಜು 38.09 ಕೋಟಿ ಅನುದಾನ ಅಗತ್ಯವಿದೆ ಎಂದು ಶಿಕ್ಷಣ ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.


ಉದಯವಾಹಿನಿ ಚಿತ್ರ

ನಾಗಮಂಗಲ ತಾಲ್ಲೂಕಿನ ಬೆಳ್ಳೂರು ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆ, ಕರಡಹಳ್ಳಿ ಹಿರಿಯ ಪ್ರಾಥಮಿಕ ಶಾಲೆ, ಸರ್ಕಾರಿ ಬಾಲಕರ ಹಿರಿಯ ಪ್ರಾಥಮಿಕ ಶಾಲೆ ನಾಗಮಂಗಲ, ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಚೊಟ್ಟಕ್ಯಾತನಹಳ್ಳಿ, ಬುರುಡುಗುಂಟೆ, ಸಂಕನಹಳ್ಳಿ, ಜಟ್ಟನಹಳ್ಳಿ ಮತ್ತು ತೊಂಡಹಳ್ಳಿ ಶಾಲೆಗಳಲ್ಲಿ ಶಿಥಿಲವಾಗಿರುವ ಕಟ್ಟಡಗಳಿದ್ದು, ದುರಸ್ತಿಗೆ ಇಲಾಖೆಗೆ ಪತ್ರ ಬರೆಯಲಾಗಿದೆ.

# ಪುರಸಭೆ 25ನೇ ವಾರ್ಡ್‌ನಲ್ಲಿ ಮೂಲ ಸೌಕರ್ಯ ಕೊರತೆ

## • ಕುಡಿಯುವ ನೀರು ಸೇರಿದಂತೆ ಸ್ವಚ್ಛತೆ ಇಲ್ಲದೆ ಸೊಳ್ಳೆಗಳ ಕಾಟದಿಂದ ನಲುಗಿರುವ ಪುರಸಭೆ, 25ನೇ ವಾರ್ಡ್‌ನ ಜನರು ಹೈರಾಣು

• ಉದಯವಾಹಿನಿ ಮಾಲೂರು

ಕುಡಿಯುವ ನೀರು ಸೇರಿದಂತೆ ಸ್ವಚ್ಛತೆ ಇಲ್ಲದೆ ಸೊಳ್ಳೆಗಳ ಕಾಟದಿಂದ ನಲುಗಿರುವ ಪುರಸಭೆ 25ನೇ ವಾರ್ಡ್‌ನ ಜನರು ಹೈರಾಣಾಗಿದ್ದಾರೆ. ಈ ವಾರ್ಡ್‌ನಲ್ಲಿ ಸುಮಾರು 1900 ಮತದಾರರು ಇದ್ದು 800 ಕುಟುಂಬಗಳು ವಾಸ ಮಾಡುತ್ತಿವೆ. ವಾರ್ಡ್‌ನಲ್ಲಿ ಎಸ್.ಸಿ ಸಮುದಾಯದಕ್ಕೆ ಸೇರಿದ ಕೂಲಿ ಕಾರ್ಮಿಕರು ಹೆಚ್ಚಾಗಿ ವಾಸ ಮಾಡುತ್ತಿದ್ದಾರೆ. ಆದರೆ, ಮೂಲ ಸೌಲಭ್ಯ ಕೊರತೆಯಿಂದ ಹೈರಾಣರಾಗಿದ್ದಾರೆ.

**ಕುಡಿಯುವ ನೀರಿನ ಸಮಸ್ಯೆ:** 25ನೇ ವಾರ್ಡ್‌ನ ಜನರಿಗೆ ಪುರಸಭೆಯು ಕೊಳವೆಬಾವಿ ಪೈಪ್ ಲೈನ್ ಮೂಲಕ ಕುಡಿಯುವ ನೀರು ಸರಬರಾಜು ಮಾಡುತ್ತಿದೆ. 10ದಿನಕ್ಕೊಮ್ಮೆ ಅರ್ಧ ಗಂಟೆ ಮಾತ್ರ ನೀರು ಸರಬರಾಜು ಮಾಡುವುದರಿಂದ ಕುಡಿಯುವ ನೀರಿಗೆ ತೊಂದರೆಯಾಗಿದೆ.

ನೀರಿನ ಬವಣೆ ನೀಗಿಸಿಕೊಳ್ಳಲು ಟ್ಯಾಂಕರ್ ನೀರಿನ ಮೇಲೆ ಅವಲಂಬಿತರಾಗಿದ್ದಾರೆ. ಒಂದು ಟ್ಯಾಂಕರ್ ನೀರಿಗೆ 500ರಂತೆ ಖರೀದಿಸಬೇಕಾಗಿದೆ. ನೀರು ಸರಬರಾಜು ಮಾಡುವ ಪೈಪ್ ಹಾಳಾದರೆ ಪ್ರತಿ ಮನೆಯಿಂದ ಹಣ ಸಂಗ್ರಹಿಸಿ ದುರಸ್ತಿ ಮಾಡಬೇಕಾದ ಪರಿಸ್ಥಿತಿ ಇದೆ.

ಕುಡಿಯುವ ನೀರು ಸಮರ್ಪಕವಾಗಿ ಸರಬರಾಜು ಮಾಡಲು ವಿಫಲವಾಗಿರುವ ಪುರಸಭೆ ನೀರಿನ ತೆರಿಗೆ ಮಾತ್ರ ಪ್ರತಿ ತಿಂಗಳು ಕ್ರಮಬದ್ಧವಾಗಿ ಸಂಗ್ರಹಿಸುತ್ತಿದೆ. ನೀರಿನ ತೆರಿಗೆ ಕಟ್ಟುವುದು ವಿಳಂಬವಾದರೆ ಬಡ್ಡಿ ಹಾಕಿ ವಸೂಲಿ ಮಾಡಲಾಗುತ್ತದೆ ಎಂದು ಸ್ಥಳೀಯರು ದೂರಿದ್ದಾರೆ.

ಈ ವಾರ್ಡ್‌ನಲ್ಲಿ ಚರಂಡಿ ವ್ಯವಸ್ಥೆ ಇಲ್ಲ. ಇರುವ ಕೆಲವು ಚರಂಡಿಗಳಲ್ಲಿ ಸ್ವಚ್ಛತೆ ಇಲ್ಲದೆ ಸೊಳ್ಳೆ ಕಾಟ ಹೆಚ್ಚಾಗಿದ್ದು ದುರ್ವಾಸನೆಯಿಂದ ಕೂಡಿದೆ. ಮನೆಗಳ ಬಾಗಿಲು ಮುಚ್ಚಿಕೊಂಡು ಜೀವನ ದೂಡುವಂತಾಗಿದೆ. ಈ ಭಾಗದಲ್ಲಿ ಚರಂಡಿ ಸ್ವಚ್ಛ ಮಾಡಿ ವರ್ಷಗಳೇ ಕಳೆದಿದೆ. ಮನೆಗಳ ಮುಂದೆ ಹಳ್ಳ ನಿರ್ಮಿಸಿಕೊಂಡು ಕೊಳಚೆ ನೀರು ತುಂಬಿಸಿ ನಂತರ ಅದರಲ್ಲೇ ಇಂಗಿಸುವ ಕೆಲಸ ಮಾಡಲಾಗುತ್ತಿದೆ.

ಪುರಸಭೆ ಚುನಾವಣೆ ಸಂದರ್ಭದಲ್ಲಿ ಮತ ಕೇಳಲು ಬಂದಿದ್ದ ಈ ವಾರ್ಡ್‌ನ ಪುರಸಭೆ ಸದಸ್ಯರು ಇಲ್ಲಿವರೆಗೂ ಈ ಕಡೆ ಮುಖ ಮಾಡಿಲ್ಲ ಎಂದು ಮಹಿಳೆಯರು ಆಕ್ರೋಶ ವ್ಯಕ್ತಪಡಿಸುತ್ತಾರೆ.

**ರಸ್ತೆ ಬದಿ ವಿದ್ಯುತ್ ದೀಪ ಕೊರತೆ:** ಈ ವಾರ್ಡ್‌ನ ಮಹಿಳೆಯರು ವೈಟ್ ಫೀಲ್ಡ್ ಸೇರಿದಂತೆ ಬೆಂಗಳೂರು ನಗರದಲ್ಲಿ ಮನೆ ಕೆಲಸ ಮಾಡಲು ಪ್ರತಿದಿನ ರೈಲು ಮೂಲಕ ಸುಮಾರು 100 ರಿಂದ 150 ಮಂದಿ ಮಹಿಳೆಯರು ಹೋಗುತ್ತಾರೆ. ರೈಲು ನಿಲ್ದಾಣ ತಲುಪುವ ರಸ್ತೆಯಲ್ಲಿ ನಾಯಿಗಳ ಕಾಟ ವಿಪರೀತ ಇದೆ.

ಪ್ರತಿ ತಿಂಗಳು ನೀರಿನ ತೆರಿಗೆ ಪಾವತಿಸಬೇಕಿದೆ. ಆದರೆ ಸಮರ್ಪಕವಾಗಿ ಸರಬರಾಜು ಮಾಡುತ್ತಿಲ್ಲ ಕೃಷ್ಣಪ್ಪ ಸುಭಾಷ್ ನಗರದ ನಿವಾಸಿರಸ್ತೆಗಳಲ್ಲಿ ಓಡಾಡಲು ಸಾಧ್ಯವಾಗುತ್ತಿಲ್ಲ. ಮನೆಗಳಿಂದ ಹೊರಗೆ ಬಂದರೆ ಮುಗು ಮುಚ್ಚಿಕೊಂಡು ಸಂಚಾರ ಮಾಡಬೇಕಾಗಿದೆ.

**ಪಟ್ಟಣದ ರೈಲ್ವೆ ಸ್ಟೇಷನ್ ಬಳಿ ಇರುವ ಪುರಸಭೆ 25,26 ಮತ್ತು 27 ವಾರ್ಡ್‌ಗಳು ಕೈಗಾರಿಕಾ ಪ್ರಾಂಗಣ ವ್ಯಾಪ್ತಿಯಲ್ಲಿ ಇರುವುದರಿಂದ ಈ ಮೂರು ವಾರ್ಡ್‌ಗಳಲ್ಲಿ ಸ್ಥಳೀಯರ ಜತೆ ವಿವಿಧ ರಾಜ್ಯಗಳಿಂದ ಕಾರ್ಮಿಕರು ಬಂದು ನಲೆಸಿದ್ದಾರೆ. ಜನಸಂಖ್ಯೆ ಕೂಡ ಹೆಚ್ಚಾಗಿದೆ. ಇಲ್ಲಿನ ಪುರಸಭೆ ಈ ಮೂರು ವಾರ್ಡ್‌ಗಳಿಗೆ ಹೆಚ್ಚಿನ ಅನುದಾನ ಬಿಡುಗಡೆ ಮಾಡುವ ಮೂಲಕ ಈ ಭಾಗದ ಜನರಿಗೆ ಮೂಲ ಸೌಕರ್ಯ ಕಲ್ಪಿಸಬೇಕೆಂದು ಇಲ್ಲಿನ ನಾಗರಿಕರು ಒತ್ತಾಯಿಸಿದ್ದಾರೆ.**


ಉದಯವಾಹಿನಿ ಚಿತ್ರ

**ಪುರಸಭೆ ನೀರಿನ ತೆರಿಗೆ ಮಾತ್ರ ಪ್ರತಿ ತಿಂಗಳು ಕ್ರಮಬದ್ಧವಾಗಿ ಸಂಗ್ರಹಿಸುತ್ತಿದೆ**

**12 ದಿನಕ್ಕೊಮ್ಮೆ ಪುರಸಭೆ ವತಿಯಿಂದ ನೀರು ಸರಬರಾಜು**

**ಮನೆ ಮುಂದಿನ ಹಳ್ಳದಲ್ಲಿ ನೀರು ಹಿಂಗಿಸುತ್ತಿರುವುದು ಸಸಸರೋಜಮ್ಮ ಸುಭಾಷ್ ನಗರ ನಿವಾಸಿಒಂದರೆಡು ವರ್ಷಗಳಿಂದ ಚರಂಡಿ ಸ್ವಚ್ಛತೆ ಮಾಡಿಲ್ಲ. ಸೊಳ್ಳೆ ಕಾಟ ಹೆಚ್ಚಾಗಿದೆ. ವಾರ್ಡ್ ಸಮಸ್ಯೆಗಳ ಬಗ್ಗೆ ಕೇಳುವವರು ಇಲ್ಲ ಸುಜಾತ ಶುಭಾಷ್ ನಗರದ ನಿವಾಸಿಸುಭಾಷ್ ನಗರದಿಂದ ಸ್ಟೇಷನ್ ಒಂದು ಕಿ.ಮೀ ನಡೆದು ಹೋಗಬೇಕು. ರಸ್ತೆಬದಿ ಅಳವಡಿಸಿರುವ ದೀಪಗಳು ಬೆಳಗುತ್ತಿಲ್ಲ. ನಾಯಿ ಮತ್ತು ಕಳ್ಳರ ಕಾಟ ಹೆಚ್ಚಾಗಿದೆ ಜಯಮ್ಮ ಶುಭಾಷ್ ನಗರದ ನಿವಾಸಿ 12 ದಿನಕ್ಕೊಮ್ಮೆ ಪುರಸಭೆ ವತಿಯಿಂದ ನೀರು ಸರಬರಾಜು ಮಾಡಲಾಗುತ್ತದೆ.**

# ಮಿನಿ ನ್ಯೂಸ್

## ತೈಲಬೆಲೆ ಹೆಚ್ಚಳ: ಬಿಜೆಪಿ ಪ್ರತಿಭಟನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಚಾಮರಾಜನಗರ

ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಖಂಡಿಸಿ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಸೋಮವಾರ ಪ್ರತಿಭಟನೆ ನಡೆಸಿತು. ಇಲ್ಲಿನ ಚಾಮರಾಜೇಶ್ವರ ಸ್ವಾಮಿ ದೇವಸ್ಥಾನದಿಂದ ಭುವನೇಶ್ವರಿ ವೃತ್ತದವರೆಗೆ ತಳ್ಳು ಗಾಡಿಯ ಮೇಲೆ ಸ್ಕೂಟರ್ ಇರಿಸಿ ಮೆರವಣಿಗೆ ನಡೆಸಿದ ಕಾರ್ಯಕರ್ತರು ಕಾಂಗ್ರೆಸ್ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ತೈಲ ಬೆಲೆ ಹೆಚ್ಚಿಸುವ ಮೂಲಕ ಜನಸಾಮಾನ್ಯರ ಮೇಲೆ ಆರ್ಥಿಕ ಹೊರೆ ಹಾಕಿದೆ ಎಂದು ಮಾಜಿ ಶಾಸಕ ಎನ್.ಮಹೇಶ್ ವಾಗ್ದಾಳಿ ನಡೆಸಿದರು. ಪರಿಶಿಷ್ಟ ಜಾತಿ, ಪಂಗಡಗಳಿಗೆ ಮೀಸಲಿಟ್ಟಿದ್ದ ಅನುದಾನವನ್ನು ಗ್ಯಾರಂಟಿಗಳಿಗೆ ಬಳಕೆ ಮಾಡಲಾಗಿದೆ. ಅಬಕಾರಿ ತೆರಿಗೆ ಹೆಚ್ಚಿಸಲಾಗಿದೆ, ನೋಂದಣಿ ಶುಲ್ಕ ಹೆಚ್ಚಿಸಲಾಗಿದೆ ಎಂದು ಟೀಕಿಸಿದರು.

## ಶ್ರದ್ಧಾಭಕ್ತಿಯಿಂದ ಬಕ್ರೀದ್ ಆಚರಣೆ

• ಉದಯವಾಹಿನಿ ತುಮಕೂರು

ನಗರ ಸೇರಿದಂತೆ ಜಿಲ್ಲೆಯಾದ್ಯಂತ ಸೋಮವಾರ ಶ್ರದ್ಧಾ ಭಕ್ತಿಯಿಂದ ಬಕ್ರೀದ್ ಆಚರಿಸಲಾಯಿತು. ನಗರದ ಕುಣಿಗಲ್ ರಸ್ತೆಯಲ್ಲಿರುವ ಈದ್ಗಾ ಮೈದಾನದಲ್ಲಿ ನೂರಾರು ಜನ ಮುಸ್ಲಿಮರು ಸಾಮೂಹಿಕ ಪ್ರಾರ್ಥನೆಯಲ್ಲಿ ಭಾಗವಹಿಸಿದ್ದರು. ಹೊಸ ಬಟ್ಟೆ ಧರಿಸಿ ಸಂಭ್ರಮಿಸಿದರು. ಪರಸ್ಪರ ಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡರು. ವಿವಿಧ ಮಸೀದಿಗಳಲ್ಲಿ ಸೋಮವಾರ ಬೆಳಗ್ಗೆಯಿಂದ ವಿಶೇಷ ಪ್ರಾರ್ಥನೆ ನೆರವೇರಿತು.


ಉದಯವಾಹಿನಿ ಚಿತ್ರ

## ಕಮಿಷನ್ ಆಮಿಷ: 19 ಲಕ್ಷ ವಂಚನೆ

• ಉದಯವಾಹಿನಿ ಚಿಕ್ಕಬಳ್ಳಾಪುರ

ಮನೆಯಿಂದಲೇ ಕೆಲಸ ಮಾಡಬಹುದು ಎಂದು ನಂಬಿಸಿ ಶಿಡ್ಲಘಟ್ಟದ ವ್ಯಕ್ತಿಯೊಬ್ಬರಿಗೆ ಆನ್‌ಲೈನ್ ವಂಚಕರು 19 ಲಕ್ಷ ವಂಚಿಸಿದ್ದಾರೆ. ಈ ಸಂಬಂಧ ಅವರು ನಗರದ ಸಿಇಎನ್ ಠಾಣೆಗೆ ದೂರು ನೀಡಿದ್ದಾರೆ. ಕರೆ ಮಾಡಿದ ವ್ಯಕ್ತಿಯೊಬ್ಬರು ಟಿಕೆಟ್ ಬುಕಿಂಗ್ ಕೆಲಸವನ್ನು ಮನೆಯಿಂದಲೇ ಮಾಡಿದರೆ ನಿಮಗೆ ಒಳ್ಳೆಯ ಕಮಿಷನ್ ಕೊಡುತ್ತೇವೆ ಎಂದರು. ನನ್ನ ಟೆಲಿಗ್ರಾಮ್ ಗ್ರೂಪ್‌ಗೆ ಸೇರಿಸಿದರು. ಲಕ್ಷ್ಮಣ್ ಎಂಬುವರು ಟಿಕೆಟ್ ಬುಕಿಂಗ್ ಬಗ್ಗೆ ಮಾರ್ಗದರ್ಶನ ನೀಡಿದರು. ಹಂತ ಹಂತವಾಗಿ ಹೂಡಿಕೆ ಮಾಡಿಸಿಕೊಂಡು ಆನ್ ಲೈನ್ ಮೂಲಕ ವಂಚಿಸಿದ್ದಾರೆ. ವಂಚಕರ ವಿರುದ್ಧ ಕಾನೂನು ಕ್ರಮಕೈಗೊಳ್ಳಬೇಕು ಎಂದು ದೂರಿನಲ್ಲಿ ಮನವಿ ಮಾಡಿದ್ದಾರೆ.

## ಶ್ರದ್ಧಾ, ಭಕ್ತಿಯಿಂದ ಬಕ್ರೀದ್ ಆಚರಣೆ

• ಉದಯವಾಹಿನಿ ಮಡಿಕೇರಿ


ಉದಯವಾಹಿನಿ ಚಿತ್ರ

ನಗರ ಸೇರಿದಂತೆ ಕೊಡಗು ಜಿಲ್ಲೆಯಾದ್ಯಂತ ಮುಸ್ಲಿಮರು ಸೋಮವಾರ ಶ್ರದ್ಧಾ ಭಕ್ತಿಯಿಂದ ಬಕ್ರೀದ್ ಆಚರಿಸಿದರು. ಮಳೆಯ ಕಾರಣಕ್ಕೆ ಈದ್ಗಾ ಮೈದಾನದಲ್ಲಿ ಪ್ರಾರ್ಥನೆ ನಡೆಸಲಿಲ್ಲ. ಆದರೆ ಎಲ್ಲಾ ಮಸೀದಿಗಳಲ್ಲೂ ಬೆಳಿಗ್ಗೆಯಿಂದಲೇ ವಿಶೇಷ ಪ್ರಾರ್ಥನೆಗಳು ನಡೆದವು. ಬಡವರಿಗೆ ಕುರಿ ಮಾಂಸವನ್ನು ಹಂಚಿದರು. ಮಕ್ಕಳು ಹೊಸಬಟ್ಟೆ ತೊಟ್ಟು ಸಂಭ್ರಮಿಸಿದರು.

ಕೊಡಗಿನ ಗಡಿಭಾಗವಾದ ಪೇರಡ್ಕ ಮೋಹಿದ್ದಿನ್ ಜುಮಾ ಮಸೀದಿಯಲ್ಲಿ ಬಕ್ರೀದ್ ಹಬ್ಬದ ಮಹತ್ವ ಬಗ್ಗೆ ಸಮಾಜದಲ್ಲಿ ಮತ್ತು ಊರಿನಲ್ಲಿ ಸಹಬಾಳ್ವೆ ಅಗತ್ಯದ ಬಗ್ಗೆ ಖತೀಬ್ ನಹೀಮ್ ಫೈಜಿ ಮಾತನಾಡಿದರು. ದೇಶದ ಜನರ ಒಳಿತಿಗೆ, ಅಭಿವೃದ್ಧಿ, ಶಾಂತಿಗಾಗಿ ವಿಶೇಷ ಪ್ರಾರ್ಥನೆ ನಡೆಸಿದರು. ಎಲ್ಲರು ಪರಸ್ಪರ ಬಕ್ರೀದ್ ಹಬ್ಬದ ಶುಭಾಶಯ ವಿನಿಮಯ ಮಾಡಿ ಖಬರಸ್ಥಾನದಲ್ಲಿ ಮತ್ತು ಪೇರಡ್ಕ ಗೂನಡ್ಕ ದರ್ಗಾದಲ್ಲಿ ವಿಶೇಷ ಪ್ರಾರ್ಥನೆ ನಡೆಸಲಾಯಿತು.

## ಸಚಿವರು, ಶಾಸಕರು ನಟ ದರ್ಶನ್ ಬೆಂಬಲಕ್ಕೆ ನಿಲ್ಲಬಾರದು: ಮಹೇಶ್

• ಉದಯವಾಹಿನಿ ಚಾಮರಾಜನಗರ

ಚಿತ್ರನಟ ದರ್ಶನ್ ಮಾಡಿರುವುದು ಸಾಮಾನ್ಯ ಕೃತ್ಯವಲ್ಲ, ವಿಕೃತಿ ಎಂದು ರೇಣುಕಾಸ್ವಾಮಿ ಕೊಲೆ ಸಂಬಂಧ ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ಚಾಮರಾಜನಗರದಲ್ಲಿ ಆಕ್ರೋಶ ಹೊರಹಾಕಿದ್ದಾರೆ.

ಚಾಮರಾಜನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ತಾನು ಅಜಾನಬಾಹು ಎಂಬುದನ್ನು ರೇಣುಕಾಸ್ವಾಮಿ ಎದುರು ತೋರಿಸಿಕೊಂಡಿದ್ದಾನೆ. ದರ್ಶನ್‌ಗೆ ಕಠಿಣಾತಿ ಕಠಿಣ ಶಿಕ್ಷೆ ಕೊಡಬೇಕು, ಆತನ ಬೆಂಬಲಕ್ಕೆ ಸಿಎಂ ಹೋಗದಿರುವುದು ಸ್ವಾಗತಾರ್ಹ. ಯಾವ ಮಂತ್ರಿಗಳು, ಶಾಸಕರು ದರ್ಶನ್ ಬೆಂಬಲಕ್ಕೆ ನಿಲ್ಲಬಾರದು ಎಂದರು. ಪೊಲೀಸರು ಯಾವ ಪ್ರಭಾವಿ ಮಾತನ್ನೂ ಕೇಳಬಾರದು, ರೇಣುಕಾಸ್ವಾಮಿ ಕುಟುಂಬಕ್ಕೆ ನ್ಯಾಯ ಕೊಡಿಸಬೇಕಿದೆ. ನಟ ದರ್ಶನ್ ಮಾಡಿರುವುದು ಸಾಮಾನ್ಯ ಕೃತ್ಯವಲ್ಲ, ವಿಕೃತಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಮಾನವೀಯತೆ ಮೆರೆದ ಡಾ.ಮಂಜುನಾಥ್

• ಉದಯವಾಹಿನಿ ರಾಮನಗರ


ಉದಯವಾಹಿನಿ ಚಿತ್ರ

ರಸ್ತೆ ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡು ನರಳುತ್ತಿದ್ದ ಗಾಯಾಳುಗೆ ಸ್ಥಳದಲ್ಲೇ ಚಿಕಿತ್ಸೆ ನೀಡುವ ಮೂಲಕ ಬಿಜೆಪಿ ನೂತನ ಸಂಸದ ಡಾ.ಸಿ.ಎನ್. ಮಂಜುನಾಥ್ ಮಾನವೀಯತೆ ಮೆರೆದಿದ್ದಾರೆ. ರಾಮನಗರ ಜಿಲ್ಲೆಯ ಕನಕಪುರ-ಸಾತನೂರು ಮಾರ್ಗ ಮಧ್ಯೆ ಅಪಘಾತವೊಂದು ಸಂಭವಿಸಿ, ವ್ಯಕ್ತಿಯೋರ್ವರು ಗಂಭೀರವಾಗಿ ಗಾಯಗೊಂಡು ನರಳಾಡುತ್ತಿದ್ದರು. ಅದೇ ಮಾರ್ಗದಲ್ಲಿ ತೆರಳುತ್ತಿದ್ದ ಸಂಸದ ಡಾ.ಸಿ.ಎನ್.ಮಂಜುನಾಥ್, ತಕ್ಷಣ ಕಾರು ನಿಲ್ಲಿಸಿ, ಗಾಯಾಳುವನ್ನು ಪರೀಕ್ಷಿಸಿ ಸ್ಥಳದಲ್ಲೇ ಪ್ರಥಮ ಚಿಕಿತ್ಸೆ ನೀಡಿದ್ದಾರೆ. ಬಳಿಕ ಗಾಯಾಳುವನ್ನು ಆಸ್ಪತ್ರೆಗೆ ಕಳುಹಿಸಿಕೊಟ್ಟಿದ್ದಾರೆ. ವೈದ್ಯರಿಗೆ ಕರೆ ಮಾಡಿ ಗಾಯಾಳುವಿಗೆ ಸೂಕ್ತ ಚಿಕಿತ್ಸೆ ನೀಡುವಂತೆ ಸೂಚಿಸಿದ್ದಾರೆ.

ಅಂತರಾಳದಿಂದ.. EDITORIAL

# ಇಂಧನ ಬೆಲೆ: ಜನಹಿತ- ವರಮಾನದ ನಡುವೆ ಸಮತೋಲನ ಬೇಕು

ಲೋಕಸಭಾ ಚುನಾವಣೆಯ ಪ್ರಕ್ರಿಯೆ ಪೂರ್ಣಗೊಂಡ ನಂತರದಲ್ಲಿ ರಾಜ್ಯದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯನ್ನು ಹೆಚ್ಚಿಸಲಾಗಿದೆ. ದೇಶದಲ್ಲಿ 2010ರಲ್ಲಿ ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರವು ಪೆಟ್ರೋಲ್ ಬೆಲೆಯನ್ನು ನಿಯಂತ್ರಣ ಮುಕ್ತವಾಗಿಸಿತು. ನಂತರ, 2014ರಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರವು ಡೀಸೆಲ್ ಬೆಲೆಯನ್ನು ನಿಯಂತ್ರಣದಿಂದ ಮುಕ್ತಗೊಳಿಸಿತು. ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆಯಲ್ಲಿ ಆಗುವ ಏರಿಳಿತಗಳಿಗೆ ಅನುಗುಣವಾಗಿ ದೇಶಿ ಮಾರುಕಟ್ಟೆಯಲ್ಲಿ ಪೆಟ್ರೋಲ್ ಡೀಸೆಲ್ ಬೆಲೆಯನ್ನು ಸರಿಹೊಂದಿಸಿಕೊಳ್ಳುವುದು ಈ ನಡೆಯ ಉದ್ದೇಶ ಆಗಿತ್ತು. ಇದನ್ನು ಮಾರುಕಟ್ಟೆ ಸುಧಾರಣೆಯ ದಿಸೆಯಲ್ಲಿ ಕೈಗೊಂಡ ದಿಟ್ಟ ಕ್ರಮ ಎಂದು ಆಗ ಕೆಲವರು ಪ್ರಶಂಸಿಸಿದ್ದರು ಕೂಡ. ಕೇಂದ್ರ ಪೆಟ್ರೋಲಿಯಂ ಸಚಿವರು 2015ರಲ್ಲಿ ಸಂಸತ್ತಿಗೆ ನೀಡಿದ್ದ ಉತ್ತರವೊಂದರಲ್ಲಿ, 'ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯನ್ನು ಸರ್ಕಾರಿ ಸ್ವಾಮ್ಯದ ತೈಲೋತ್ಪನ್ನ ಮಾರಾಟ ಕಂಪನಿಗಳು ಮಾರುಕಟ್ಟೆ ಪರಿಸ್ಥಿತಿಯನ್ನು ಆಧರಿಸಿ ತೀರ್ಮಾನಿಸುತ್ತವೆ' ಎಂದಿದ್ದರು. ಆದರೆ, ವಾಸ್ತವದಲ್ಲಿ ಭಾರತದಲ್ಲಿ ಜಾರಿಯಲ್ಲಿ ಇರುವ, ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಗಳನ್ನು 'ನಿಯಂತ್ರಣದಿಂದ ಮುಕ್ತವಾಗಿಸುವ ನೀತಿಯು ಮಾರುಕಟ್ಟೆಯ **ಪರಿಸ್ಥಿತಿಯನ್ನು ಆಧರಿಸಿಲ್ಲ**: ಬದಲಿಗೆ ಅದು ಚುನಾವಣಾ ವೇಳಾಪಟ್ಟಿಯನ್ನು ನೇರವಾಗಿ ಅವಲಂಬಿಸಿದೆ. ದೇಶದಲ್ಲಿ ವಿಧಾನಸಭೆ ಅಥವಾ ಲೋಕಸಭೆ ಚುನಾವಣೆ ಎದುರಾದ ಹೊತ್ತಿನಲ್ಲಿ ಈ ಎರಡು ತೈಲೋತ್ಪನ್ನಗಳ ಬೆಲೆಯನ್ನು ನಿಯಂತ್ರಿಸಲಾಗುತ್ತದೆ. ಚುನಾವಣೆ ಇಲ್ಲದಿದ್ದ ಸಂದರ್ಭಗಳಲ್ಲಿ ಅದನ್ನು ನಿಯಂತ್ರಣದಿಂದ ಮುಕ್ತವಾಗಿಸಲಾಗುತ್ತದೆ. ಈ ಮಾತಿಗೆ ಹಲವು ನಿದರ್ಶನಗಳು ಸಿಗುತ್ತವೆ. ಈ ಹಿನ್ನೆಲೆಯಲ್ಲಿಯೇ ಈಗ ರಾಜ್ಯ ಸರ್ಕಾರವು ಪೆಟ್ರೋಲ್ ಹಾಗೂ ಡೀಸೆಲ್ ಮೇಲಿನ ಮಾರಾಟ ತೆರಿಗೆಯನ್ನು ಹೆಚ್ಚಿಸಿ. ಇವೆರಡು ಉತ್ಪನ್ನಗಳ ಚಿಲ್ಲರೆ ಮಾರಾಟ ದರ ಏರಿಸಿರುವುದನ್ನು ಅರ್ಥಮಾಡಿಕೊಳ್ಳಬೇಕು.


ಉದಯವಾಹಿನಿ ಚಿತ್ರ

> **ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯಲ್ಲಿ ಆಗುವ ಏರಿಕೆಯು ಜನರ ನಿತ್ಯದ ವೆಚ್ಚಗಳನ್ನು ಹೆಚ್ಚಿಸುತ್ತದೆ. ಅಲ್ಲದೆ, ನೇರವಾಗಿ ಹಣದುಬ್ಬರದ ಏರಿಕೆಗೆ ಕಾರಣ ಆಗುತ್ತದೆ. ಕೋವಿಡ್ ಕಾರಣದಿಂದ ಜಾರಿಗೆ ಬಂದ ಲಾಕ್‌ಡೌನ್ ನಂತರದಲ್ಲಿ, 2022ರಲ್ಲಿ ದೇಶದಲ್ಲಿ ಹಣದುಬ್ಬರ ದರವು ವಿಪರೀತ ಮಟ್ಟಕ್ಕೆ ತಲುಪಿತ್ತು. ಆಗ 'ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯನ್ನು ತಗ್ಗಿಸುವಂತೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳಿಗೆ ಭಾರತೀಯ ರಿಸರ್ವ್ ಬ್ಯಾಂಕ್ ಮನವಿ ಮಾಡಿಕೊಂಡಿತ್ತು.**

ಆದರೆ, ಆರ್‌ಬಿಐ ಮನವಿಗೆ ಸರ್ಕಾರಗಳು ಪೂರಕವಾಗಿ ಸ್ಪಂದಿಸದ ಕಾರಣಕ್ಕೆ, ಹಣದುಬ್ಬರ ದರವನ್ನು ನಿಯಂತ್ರಣದಲ್ಲಿ ಇರಿಸುವ ಹೊಣೆ ಹೊತ್ತಿರುವ ಆರ್‌ಬಿಐನ ಹಣಕಾಸು ನೀತಿ ಸಮಿತಿಯು ಅನಿವಾರ್ಯವಾಗಿ ರೆಪೊ ದರವನ್ನು ಹೆಚ್ಚಿಸಿತು' ಎಂಬ ವರದಿಗಳಿವೆ. ಇದರ ನೇರ ಪರಿಣಾಮವಾಗಿ ಸಾಲಗಳು ತುಟ್ಟಿಯಾದವು. ಈ ಏರಿಕೆಯ ಪರೋಕ್ಷ ಪರಿಣಾಮಗಳು ಇನ್ನೂ ಹಲವು. ಈಗ ಹಣದುಬ್ಬರವು ಶೇಕಡ 4.75ರಷ್ಟು ಇದೆ. ಇದು ಶೇ 4ಕ್ಕೆ ಇಳಿಕೆ ಕಾಣಬೇಕಿದೆ. ಈ ಹಂತದಲ್ಲಿ ರಾಜ್ಯ ಸರ್ಕಾರವು ಪೆಟ್ರೋಲ್, ಡೀಸೆಲ್ ಬೆಲೆಯನ್ನು ಹೆಚ್ಚಿಸಿರುವುದು ಸಮರ್ಥನೀಯ ಅಲ್ಲ. ವರಮಾನ ಸಂಗ್ರಹದ ಗುರಿಯನ್ನು ತಲುಪಲು ಈ ಹೆಚ್ಚಳ ಎಂಬ ಸಮರ್ಥನೆಯನ್ನು ಸರ್ಕಾರ ನೀಡಬಹುದಾದರೂ ಎಲ್ಲಾ ಬಗೆಯ ಉತ್ಪನ್ನಗಳ ಬೆಲೆ ಏರಿಕೆಯ ಮೇಲೆ ಅದು ಬೀರಬಹುದಾದ ಪರಿಣಾಮವನ್ನು ಗಮನಿಸಿದಾಗ ಈ ಸಮರ್ಥನೆಯು ದುರ್ಬಲವಾಗಿ ಕಾಣುತ್ತದೆ. ಚುನಾವಣೆ ಮುಗಿದಿರುವ ಕಾರಣ ತೈಲೋತ್ಪನ್ನ ಕಂಪನಿಗಳಿಗೆ ಪೆಟ್ರೋಲ್, ಡೀಸೆಲ್ ಬೆಲೆಯನ್ನು ಪ್ರತಿನಿತ್ಯ ಪರಿಷ್ಕರಿಸಲು ಕೇಂದ್ರ ಸರ್ಕಾರ ಕೂಡ ಶೀಘ್ರದಲ್ಲಿಯೇ ಅವಕಾಶ ಕಲ್ಪಿಸಬಹುದು. ಸರ್ಕಾರಗಳು ತಮ್ಮ ವರಮಾನ ಹೆಚ್ಚಳಕ್ಕೆ ಆದ್ಯತೆ ನೀಡುವಾಗ, ಜನರ ಆದಾಯದ ಮಿತಿಗಳ ಬಗ್ಗೆಯೂ ಗಮನಹರಿಸುವುದು ಒಳಿತು. ಪೆಟ್ರೋಲ್, ಡೀಸೆಲ್‌ನಂತಹ ಜೀವನಾವಶ್ಯಕ ಉತ್ಪನ್ನಗಳ ಬೆಲೆಯಲ್ಲಿ ಸ್ಥಿರತೆ ಸಾಧಿಸದೆ ಹಣದುಬ್ಬರ ನಿಯಂತ್ರಣ ಕಷ್ಟಸಾಧ್ಯ. ಜೀವನಾವಶ್ಯಕ ವಸ್ತುಗಳ ಬೆಲೆಯನ್ನು ನಿರ್ಧರಿಸುವ ಅಧಿಕಾರವನ್ನು ಸಂಪೂರ್ಣವಾಗಿ ಮಾರುಕಟ್ಟೆ ಶಕ್ತಿಗಳಿಗೇ ಬಿಟ್ಟುಕೊಡುವುದು ಯುಕ್ತವಾದ ಕ್ರಮ ಆಗುವುದಿಲ್ಲ. ತೈಲೋತ್ಪನ್ನಗಳ ಬೆಲೆಯನ್ನು ಸಂಪೂರ್ಣವಾಗಿ ಸರ್ಕಾರಗಳೇ ತೀರ್ಮಾನಿಸುವ ವ್ಯವಸ್ಥೆಯು ಕಂಪನಿಗಳ ಆರ್ಥಿಕ ಹಿತಾಸಕ್ತಿಗೆ ಧಕ್ಕೆ ಉಂಟುಮಾಡಬಹುದು. ಚುನಾವಣೆಯ ಸಂದರ್ಭಗಳಲ್ಲಿ ಮಾತ್ರ ಬೆಲೆಯನ್ನು ಸಂಪೂರ್ಣವಾಗಿ ನಿಯಂತ್ರಣದಲ್ಲಿ ಇರಿಸುವುದು ಜನಹಿತದ ಕಾರ್ಯ ಆಗುವುದಿಲ್ಲ: ಅದು ಚುನಾವಣಾ ಹಿತಾಸಕ್ತಿಯ ಕಾರ್ಯ ಆಗುತ್ತದೆ. ಅಲ್ಲದೆ, ತೈಲೋತ್ಪನ್ನ ಮಾರಾಟ ಕಂಪನಿಗಳ ಹಣಕಾಸಿನ ಸ್ಥಿತಿಯ ಮೇಲೆ ಕೆಟ್ಟ ಪರಿಣಾಮ ಉಂಟುಮಾಡಬಹುದು. ಹೀಗಾಗಿ, ಜನರ ನಿತ್ಯದ ಬದುಕು. ಬೆಲೆ ಏರಿಕೆಯ ನಿಯಂತ್ರಣ, ತೈಲೋತ್ಪನ್ನ ಮಾರಾಟ ಕಂಪನಿಗಳ ಹಿತವನ್ನು ಗಮನದಲ್ಲಿ ಇರಿಸಿಕೊಂಡು ಸರ್ಕಾರಗಳು ಪೆಟ್ರೋಲ್, ಡೀಸೆಲ್ ಬೆಲೆಯ ಮೇಲೆ ನಿಗಾ ಇರಿಸಬೇಕು. ರಾಜ್ಯ ಸರ್ಕಾರವು ಈಗ ಮಾಡಿರುವ ಏರಿಕೆಯನ್ನು ಪುನರ್ ಪರಿಶೀಲಿಸಬೇಕು.

# ಮಹಾಭಾರತ

## ಶಲ್ಯ ಪರ್ವ



• ಹಿಂದಿನ ಸಂಚಿಕೆಯಿಂದ

ಭೀಮನನ್ನು ಬಿಟ್ಟು ಇನ್ನು ಯಾರು ಅವನೊಂದಿಗೆ ಹೋರಿದರೂ ನಿಮಗೆ ರಾಜ್ಯ ಸಿಕ್ಕುವ ಸಂಭವವಿಲ್ಲ ಭೀಮನಿಗೂ ಸಹ ಅಭ್ಯಾಸ ಸಾಲದು. ಅತಿಯಾದ ಅನುಕಂಪವೇ ನಿನ್ನನ್ನು ಇಷ್ಟು ವರ್ಷಗಳೂ ಹೀನಸ್ಥಿತಿಯಲ್ಲಿಟ್ಟಿದ್ದು. ಇಲ್ಲ ಬಿಟ್ಟು ಅವನನ್ನು ದ್ವಂದ್ವಕ್ಕೆ ಆಹ್ವಾನಿಸುವುದೇ ಇದು ಇನ್ನೊಂದು ದ್ಯೂತದಾಟದ ಪ್ರಾರಂಭ ಎಂದು ಕಾಣುತ್ತದೆ. ಪಾಂಡುವಿನ ಮಕ್ಕಳು ಇಡೀ ಜೀವಮಾನವನ್ನು ಕಾಡಿನಲ್ಲೇ ಕಳೆಯಬೇಕೋ ಏನೋ ಭೀಮನು ಹೆಚ್ಚು ಶಕ್ತಿಶಾಲಿಯಾದರೂ, ಭೀಮನನ್ನು ಬಿಟ್ಟು ಇನ್ನು ಯಾರು ಅವನೊಂದಿಗೆ ಹೋರಿದರೂ ನಿಮಗೆ ರಾಜ್ಯ ಸಿಕ್ಕುವ ಸಂಭವವಿಲ್ಲ ಭೀಮನಿಗೂ ಸಹ ಅಭ್ಯಾಸ ಸಾಲದು. ಅತಿಯಾದ ಅನುಕಂಪವೇ ನಿನ್ನನ್ನು ಇಷ್ಟು ವರ್ಷಗಳೂ ಹೀನಸ್ಥಿತಿಯಲ್ಲಿಟ್ಟಿದ್ದು. ಇಲ್ಲ ಬಿಟ್ಟು ಅವನನ್ನು ದ್ವಂದ್ವಕ್ಕೆ ಆಹ್ವಾನಿಸುವುದೇ ! ಇದು ಇನ್ನೊಂದು ದ್ಯೂತದಾಟದ ಪ್ರಾರಂಭ ಎಂದು ಕಾಣುತ್ತದೆ. ಪಾಂಡುವಿನ ಮಕ್ಕಳು ಇಡೀ ಜೀವಮಾನವನ್ನು ಕಾಡಿನಲ್ಲೇ ಕಳೆಯಬೇಕೋ ಏನೋ ಭೀಮನು ಹೆಚ್ಚು ಶಕ್ತಿಶಾಲಿಯಾದರೂ, ಕುಶಲತೆಯಲ್ಲಿ ದುರ್ಯೋಧನನೇ ಮುಂದು. ದ್ವಂದ್ವದಲ್ಲಿ ಶಕ್ತಿಗಿಂತ ಮುಖ್ಯವಾದದ್ದು ಕುಶಲತೆ. ನಿನ್ನ ಈ ಕೊಡುಗೆಯಿಂದ ನಾವು ನಮ್ಮ ಸ್ಥಾನವನ್ನು ತುಂಬ ದುರ್ಬಲಗೊಳಿಸಿಕೊಂಡಂತೆ ಆಯಿತು. ಯುದ್ಧವನ್ನೆಲ್ಲ ಗೆದ್ದಮೇಲೂ ಅವನಿಗೇ ರಾಜ್ಯವನ್ನು ಒಪ್ಪಿಸಲು ಹೊರಟಿರುವೆಯಲ್ಲ ಧರ್ಮಯುದ್ಧದಲ್ಲಿ ದುರ್ಯೋಧನನನ್ನು ಎದುರಿಸುವವರು ಯಾರಿದ್ದಾರೆ ಎಂದನು. ಆಗ ಭೀಮನು, ''ಕೃಷ್ಣ, ಯೋಚಿಸಬೇಡ. ನಾನು ಅವನನ್ನು ಕೊಲ್ಲುತ್ತೇನೆ. ನಾನು ದ್ವಂದ್ವದಲ್ಲಿ ಅವನನ್ನು ಗೆಲ್ಲುವುದರಲ್ಲಿ ಸಂದೇಹವಿಲ್ಲ ಎಂದನು. ಇದನ್ನು ಕೇಳಿ ಕೃಷ್ಣನಿಗೆ ಸಂತೋಷವಾಯಿತು. ಅವನು, ''ಭೀಮ, ಯುಧಿಷ್ಠಿರನು ಚಕ್ರವರ್ತಿಯಾಗಬೇಕಾದರೆ ನಿನ್ನಿಂದಲೇ. ಒಬ್ಬನನ್ನೂ ಬಿಡದೆ ಎಲ್ಲ ಧಾರ್ತರಾಷ್ಟ್ರರನ್ನೂ ಕೊಂದಿರುವ ನೀನೇ ಈ ಕೊನೆಯವನನ್ನೂ ಕೊಲ್ಲುವುದು ನ್ಯಾಯವಾಗಿಯೇ ಇದೆ. ಲೋಕವನ್ನು ಗೆದ್ದು ಅದನ್ನು ನಿನ್ನಣ್ಣನ ಪದತಲದಲ್ಲಿಡು, ಭೀಮ. ದುರ್ಯೋಧನನ ಕೊನೆಯಾದರೆ ಯುಧಿಷ್ಠಿರನ ಎಲ್ಲಾ ತೊಂದರೆಗಳೂ ಪರಿಹಾರವಾದಂತೆಯೇ. ಆದರೆ ನೀನು ದುರ್ಯೋಧನನ ವಿಚಾರವಾಗಿ ಎಚ್ಚರಿಕೆಯಿಂದಿರಬೇಕು. ಅವನು ಗದಾಯುದ್ಧದಲ್ಲಿ ಕುಶಲಿ; ಅಲ್ಲದೆ ತೀವ್ರ ಚಲನೆಯುಳ್ಳವನು ಎಂದನು. ಭೀಮನು. ದುರ್ಯೋಧನನ ಬಳಿಗೆ ಹೋಗಿ,'' ನನ್ನ ಜೊತೆಗೆ ಯುದ್ಧಮಾಡು ದುರ್ಯೋಧನ. ನಮಗೆ ನೀನು ಮಾಡಿದುದ್ದೆಲ್ಲವನ್ನೂ ಸ್ಮರಿಸಿಕೋ. ನೀನು ಮರೆತಿರಬಹುದು; ಆದರೆ ನಾನು ಮರೆತಿಲ್ಲ; ವಾರಣಾವತ, ದ್ರೌಪದಿಯ ವಸ್ತ್ರಾಪಹರಣ, ಶಕುನಿಯೊಂದಿಗೆ ಸೇರಿ ನಡೆಸಿದ ಮೋಸದ ದ್ಯೂತ; ನಾನು ನಿನ್ನ ಎಲ್ಲಾ ಪಾಪಕಾರ್ಯಗಳ ಫಲವನ್ನು ಅನುಭವಿಸುವಂತೆ ಮಾಡುತ್ತೇನೆ. ನಿನ್ನಿಂದಾಗಿ ಅನೇಕ ವೀರಾಧಿವೀರು, ಮಹನೀಯರು, ರಣರಂಗವನ್ನಲಂಕರಿಸಿ ಹೊರಟುಹೋದರು. ಅಜ್ಜ ಭೀಷ್ಮನು ಇಂದು ಶರಶಯ್ಯೆಯಲ್ಲಿ ಮಲಗಿರುವುದು ನಿನ್ನಿಂದಾಗಿಯೇ.

**ಮುಂದುವರಿಯುವುದು...**

# ಬಿಬಿಎಂಪಿ ವಿಭಜನೆಗೆ ಯತ್ನ: ಕೈ ನಾಯಕರ ಭಿನ್ನರಾಗ

■ ಕಾಂಗ್ರೆಸ್‌ನ ವಿವಿಧ ಹಂತಗಳ ಮುಖಂಡರು ಅಸಮಾಧಾನ ■ ಬಿಬಿಎಂಪಿಗೆ ಚುನಾವಣೆ ನಡೆಸುವ ಪ್ರಕ್ರಿಯೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಬಿಬಿಎಂಪಿಯಲ್ಲಿ ಚುನಾಯಿತ ಸರ್ಕಾರ ಸ್ಥಾಪನೆಗೆ ಅವಕಾಶ ಮಾಡಿಕೊಡದೆ ವಿಭಜನೆ ನೆಪವೊಡ್ಡಿ ಚುನಾವಣೆಯನ್ನು ಮುಂದೂಡುವ ಯತ್ನಕ್ಕೆ ಕಾಂಗ್ರೆಸ್‌ನಲ್ಲೇ ಭಿನ್ನರಾಗ ಎದ್ದಿದೆ. ಕಾರ್ಪೊರೇಟರ್‌ಗಳಿಲ್ಲದ ಪಾಲಿಕೆ ಗ್ರಾಪಂಗಿಂತಲೂ ಕಡೆಯಾಗಿದೆ ಎಂಬ ಭಾವನೆ ಮಾಜಿ ಮೇಯರ್ ಆದಿಯಾಗಿ ಕಾಂಗ್ರೆಸ್‌ನ ವಿವಿಧ ಹಂತಗಳ ಮುಖಂಡರು ಅಸಮಾಧಾನ ಹೊರಹಾಕಿದ್ದಾರೆ.

ಲೋಕಸಭೆ ಚುನಾವಣೆ ಬಳಿಕ ಬಿಬಿಎಂಪಿಗೆ ಚುನಾವಣೆ ನಡೆಸುವ ಪ್ರಕ್ರಿಯೆ ಕೈಗೊಳ್ಳುವ ಭರವಸೆಯನ್ನು ಕಾರ್ಯಕರ್ತರು ಹಾಗೂ ಮುಖಂಡರಿಗೆ ನೀಡಲಾಗಿತ್ತು. ಆದರೀಗ ಫಲಿತಾಂಶ ಹೊರಬಿದ್ದ ಬಳಿಕ ಪಾಲಿಕೆ ಚುನಾವಣೆ ನಡೆಸುವ ಹೇಳಿಕೆಗೆ ಅಂಟಿಕೊಳ್ಳದೆ ವಿಭಜನೆ ಮಂತ್ರ ಜಪಿಸುತ್ತಿರುವ ನಾಯಕರ ನಿಲುವಿಗೆ ತೀವ್ರ ಆಕ್ಷೇಪ ವ್ಯಕ್ತವಾಗಿದೆ. ವಿಭಜನೆಗೆ ಒಪ್ಪಿದರೆ ಎಲ್ಲ ಪ್ರಕ್ರಿಯೆಗಳನ್ನು ಹೊಸದಾಗಿ ಆರಂಭಿಸಬೇಕು. ಅಧಿಕಾರಿಗಳ ಮಟ್ಟದಲ್ಲಿ ಕೈಗೊಳ್ಳುವ ತೀರ್ಮಾನಗಳು ಜನಪರವಾಗಿರದೆ ಮತ್ತೊಂದು ಬಿಬಿಎಂಪಿಯದ್ದೇ ಪ್ರತಿರೂಪದಂತೆ ಆಡಳಿತ ವ್ಯವಸ್ಥೆಯನ್ನು ರೂಪಿಸುತ್ತಾರಷ್ಟೇ. ಈ ಪ್ರಹಸನಕ್ಕಾಗಿ ಈಗಾಗಲೇ ಕಳೆದಹೋಗಿರುವ ಮೂರೂಮುಕ್ಕಾಲು ವರ್ಷದ ಜತೆಗೆ ಮತ್ತೊಂದು ವರ್ಷದವರೆಗೆ ಚುನಾವಣೆಗೆ ಕಾಯಬೇಕಾಗುತ್ತದೆ. ಅಲ್ಲಿಯವರೆಗೆ ಕಾದುಕುಳಿತರೆ ಪ್ರತಿಪಕ್ಷದ ಕೈಗೆ ನಾವೇ ಹೋರಾಟದ ಅಸ್ತ್ರ ಕೊಟ್ಟಂತೆ ಆಗುತ್ತದೆ. ಮತದಾರರನ್ನು ಪಕ್ಷದತ್ತ ಸೆಳೆಯಲು ಏನೆಲ್ಲ ಕೆಲಸ ಮಾಡಬೇಕೋ ಅದನ್ನು ಮಾಡಿ ಚುನಾವಣೆಗೆ ಹೋಗುವುದೇ ಕ್ಷೇಮ ಎಂಬ ಸಲಹೆಯನ್ನು ಕೆಲ ಶಾಸಕರು, ಮಾಜಿ ಮೇಯರ್/ಆಡಳಿತ ಪಕ್ಷದ ನಾಯಕರು ಪಕ್ಷದ ಹಿರಿಯರಿಗೆ ರವಾನಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

> **ರಾಜಧಾನಿಯಲ್ಲಿ ಬಿಜೆಪಿ ತನ್ನದೇಯಾದ ಹಿಡಿತ**

ರಾಜಧಾನಿಯಲ್ಲಿ ಬಿಜೆಪಿ ತನ್ನದೇಯಾದ ಹಿಡಿತ ಹೊಂದಿದೆ. ಕಳೆದ ವಿಧಾನಸಭೆ ಚುನಾವಣೆಯಲ್ಲಿ ರಾಜ್ಯದೆಲ್ಲೆಡೆ ಪಕ್ಷದ ಅಲೆ ಇದ್ದರೂ, ಬೆಂಗಳೂರಿನಲ್ಲಿ ಬಿಜೆಪಿಯನ್ನು ಹಿಂದಿಕ್ಕಲು ಸಾಧ್ಯವಾಗಿಲ್ಲ. ಇತ್ತೀಚಿನ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ತನ್ನ ಬಲವರ್ಧನೆ ಮಾಡಿಕೊಂಡಿದೆ. ಇದಕ್ಕೆ ಪ್ರತಿಯಾಗಿ ಕಾಂಗ್ರೆಸ್ ತನ್ನದೇಯಾದ ಕಾರ್ಯಕ್ರಮಗಳ ಮೂಲಕ ಬಿಜೆಪಿಯನ್ನು ಮಣಿಸಲು ವಿಶೇಷ ಕಾರ್ಯತಂತ್ರ ರೂಪಿಸಬೇಕು. ಇದರ ಆಧಾರದ ಮೇಲೆ ಬಿಬಿಎಂಪಿ ಚುನಾವಣೆ ನಡೆಸಿ ಅಧಿಕಾರವನ್ನು ಕೈವಶ ಮಾಡಿಕೊಳ್ಳಬೇಕು ಎಂದು ಕಾಂಗ್ರೆಸ್‌ನ ಮುಖಂಡರು ಪಕ್ಷದ ಹಿರಿಯರಿಗೆ ಮಾಹಿತಿ ಒದಗಿಸಿದ್ದಾರೆ ಎಂದು ತಿಳಿದುಬಂದಿದೆ. ಇದರ ಜತೆಗೆ ಸ್ಥಳೀಯ ಸಂಸ್ಥೆಗಳಿಗೆ ಹೆಚ್ಚಿನ ಅಧಿಕಾರ ನೀಡುವ ಸಂವಿಧಾನಸ 74ನೇ ತಿದ್ದುಪಡಿ ಮಾಡಿ ಜಾರಿಗೊಳಿಸುವಲ್ಲಿ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಯಶಸ್ವಿಯಾಗಿದ್ದರು. ಇದರನ್ವಯ ಹೆಚ್ಚು ಕಾಲ ಚುನಾವಣೆ ನಡೆಸದೆ ಸ್ಥಳೀಯ ಸಂಸ್ಥೆಯನ್ನು ಹಾಗೆಯೇ ಬಿಡಲಾಗದು. ಜತೆಗೆ ಈ ಶ್ರೇಯಸ್ಸನ್ನು ಪಕ್ಷದ ಪರವಾದ ವಾತಾವರಣ ಮೂಡಿಸಲು ಸಾಧ್ಯವಾಗಿಲ್ಲ. ಈ ಕೆಲಸವನ್ನು ಮಾಡದೆ ಚುನಾವಣೆ ಮುಂದೂಡುವತ್ತಲೇ ದೃಷ್ಟಿಹರಿಸಿದರೆ ಪಕ್ಷದ ವರ್ಚಸ್ಸಿಗೆ ಹಿನ್ನಡೆಯಾಗುವ ಸಾಧ್ಯತೆ ಇದೆ ಎಂಬ ಸಂದೇಶವನ್ನು ಕೆಲ ಕಾಂಗ್ರೆಸಿಗರು ಸಿಎಂ ಬಳಿ ವಾಸ್ತವ ಸ್ಥಿತಿ ಬಗ್ಗೆ ಚರ್ಚಿಸಿದ್ದಾರೆ.

### ಪ್ರಮುಖ ಮೂಲಸೌಕರ್ಯ ಜಾರಿ

**ಒಂದು ವೇಳೆ ಸರ್ಕಾರ ಹಠ ಹಿಡಿದು ವಿಭಜಿಸಿದರೆ ಪ್ರಮುಖ ಮೂಲಸೌಕರ್ಯ ಜಾರಿಗೆ ತೊಂದರೆ ಎದುರಾಗಲಿದೆ. ಒಂದು ಪಾಲಿಕೆಯಲ್ಲಿ ಕೈಗೆತ್ತಿಕೊಳ್ಳುವ ಮಳೆನೀರುಗಾಲುವೆ ಕಾಮಗಾರಿ ಇನ್ನೊಂದು ಪಾಲಿಕೆಯಲ್ಲಿ ಹಾದುಹೋಗುತ್ತದೆ. ಆಗ ಮುಂದುವರಿದ ಕೆಲಸವನ್ನು ಯಾರು ಮಾಡಬೇಕೆಂಬ ಜಿಜ್ಞಾಸೆ ಮೂಡುತ್ತದೆ. ಇದೇ ರೀತಿ ಪ್ರಮುಖ ರಸ್ತೆಗಳು, ಮೇಲ್ಸೇತುವೆಗಳು ಹಾಗೂ ಬೃಹತ್ ಕಾಮಗಾರಿಗಳನ್ನು ನಿರ್ವಹಿಸಲು ಗಡಿ ಸಮಸ್ಯೆ ಎದುರಾಗುತ್ತದೆ. ಇಂಥ ಸಮಸ್ಯೆ ಈಗಾಗಲೇ ದೆಹಲಿ, ಮುಂಬೈನಲ್ಲಿ ಉದ್ಭವಿಸಿದೆ. ಹಾಗಾಗಿ ಚುನಾವಣೆ ಮುಂದೂಡಲು ವಿಭಜನೆ ತಂತ್ರಕ್ಕೆ ಮೊರೆ ಹೋಗದೆ ಏಕ ಪಾಲಿಕೆ ವ್ಯವಸ್ಥೆಯನ್ನು ಸಶಕ್ತಗೊಳಿಸಬೇಕು ಎಂದು ಎಸ್.ಕೆ.ನಟರಾಜ್ ಪ್ರತಿಪಾದಿಸಿದ್ದಾರೆ.**

> **ಬಿಬಿಎಂಪಿಯನ್ನು ವಿಭಜಿಸದೆ ಹಾಲಿಯಿರುವ ವ್ಯವಸ್ಥೆಯನ್ನು ಇನ್ನಷ್ಟು ಸುಧಾರಣೆ ತರಲು ಸಾಧ್ಯವಿದೆ. ಅಗತ್ಯವಿದ್ದಲ್ಲಿ ವಲಯಗಳ ಸಂಖ್ಯೆ ಹೆಚ್ಚಿಸಿ ಹಿರಿಯ ಅಧಿಕಾರಿಗಳಿಗೆ ಹೆಚ್ಚಿನ ಅಧಿಕಾರ, ಹೊಣೆ ನೀಡಲಿ. ಮೇಯರ್ ಇನ್ ಕೌನ್ಸಿಲ್ ಮಾದರಿಯಲ್ಲಿ ಆಡಳಿತ ನಡೆಸಿದರೆ ಮಹಾಪೌರ ಅವಧಿ ಹೆಚ್ಚಳಗೊಂಡು ಉತ್ತಮ ಕೆಲಸವನ್ನು ಮಾಡಲು ಸಾಧ್ಯವಿದೆ. ಇದಕ್ಕಾಗಿ ಸರ್ಕಾರ ಬಿಬಿಎಂಪಿ ಮೇಯರ್ ಹಾಗೂ ಆಯುಕ್ತರಿಗೆ ಹೆಚ್ಚಿನ ಅಧಿಕಾರವನ್ನು ನೀಡಬೇಕು ಎಂದು ಮಾಜಿ ಮೇಯರ್ ಎಸ್.ಕೆ.ನಟರಾಜ್ ಆಗ್ರಹಿಸಿದ್ದಾರೆ.**

# ಸಂಜಯನಗರದಲ್ಲಿ ತನ್ನ ಹೊಸ ಎಕ್ಸ್‌ಪೀರಿಯನ್ಸ್ ಸೆಂಟರ್ ಆಶ್ವಾಸ್ ಅನ್ನು ತೆರೆದ ರೆಸ್ಟೋಲೆಕ್ಸ್

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಸ್ಪ್ರಿಂಗ್, ಕಾಯಿರ್ ಮತ್ತು ಫೋಮ್‌ನ ಗುಣಮಟ್ಟದ ಹಾಸಿಗೆಗಳನ್ನು ತಯಾರಿಸುವ ಪ್ರತಿಷ್ಠಿತ ಮ್ಯಾಟ್ರೆಸ್ ಕಂಪನಿ ಆಗಿರುವ ರೆಸ್ಟೋಲೆಕ್ಸ್ ಗ್ರಾಹಕರಿಗೆ ವಿಶಿಷ್ಟ ಅನುಭವ ಒದಗಿಸಲು ಬೆಂಗಳೂರಿನ ಸಂಜಯನಗರದಲ್ಲಿ ತನ್ನ ಆರನೇ ಎಕ್ಸ್‌ಪೀರಿಯನ್ಸ್ ಸೆಂಟರ್ ಆಶ್ವಾಸ್ ಅನ್ನು ಉದ್ಘಾಟಿಸಿತು.




ಈ ಎಕ್ಸ್‌ಪೀರಿಯನ್ಸ್ ಸೆಂಟರ್ ಅನ್ನು ಗ್ರಾಹಕರು ಯಾವುದೇ ನಿರ್ಧಾರ ತೆಗೆದುಕೊಳ್ಳುವ ಮೊದಲು ಉತ್ಪನ್ನಗಳನ್ನು ಸೂಕ್ತ ರೀತಿಯಲ್ಲಿ ನೋಡಲು, ನಿರ್ಧಾರ ತೆಗೆದುಕೊಳ್ಳಲು ನೆರವಾಗಲು ವಿನ್ಯಾಸಗೊಳಿಸಲಾಗಿದೆ. 1750 ಚದರ ಅಡಿ ವಿಸ್ತೀರ್ಣದ ಈ ಎಕ್ಸ್‌ಪೀರಿಯನ್ಸ್ ಸೆಂಟರ್ ಅನ್ನು ರೆಸ್ಟೋಲೆಕ್ಸ್‌ನ ನಿರ್ದೇಶಕರಾದ ದಿವಾಕರ ಮೆನನ್, ದವೀದ್ ಕುರುವಿಲ್ಲಾ ಉದ್ಘಾಟಿಸಿದರು ಮತ್ತು ಸಿಇಒ ಸುರೇಶ್ ಬಾಬು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಎಕ್ಸ್‌ಪೀರಿಯನ್ಸ್ ಸೆಂಟರ್‌ನಲ್ಲಿ ರೆಸ್ಟೋಲೆಕ್ಸ್‌ನ ಸಂಪೂರ್ಣ ಶ್ರೇಣಿಗಳ ಉತ್ಪನ್ನಗಳನ್ನು ಪ್ರದರ್ಶಿಸಲಾಗುತ್ತದೆ. ಜೊತೆಗೆ ಬೆಲೆ, ಸರ್ವೀಸ್‌ಗೆ ಸಂಬಂಧಿಸಿದಂತೆ ಕಂಪನಿಯು ಒದಗಿಸುವ ಆಫರ್‌ಗಳನ್ನು ನೀಡಲಾಗುತ್ತದೆ.

ಈ ಸಂದರ್ಭದಲ್ಲಿ ರೆಸ್ಟೋಲೆಕ್ಸ್‌ನ ಅಭಿವೃದ್ಧಿ ಯೋಜನೆಗಳನ್ನು ಹಂಚಿಕೊಂಡ ರೆಸ್ಟೋಲೆಕ್ಸ್‌ನ ಸಿಇಒ ಸುರೇಶ್ ಬಾಬು, ''ಗ್ರಾಹಕರ ಜೀವನ ಮಟ್ಟವನ್ನು ಸುಧಾರಿಸುವ ಆಕಾಂಕ್ಷೆ ಬೆಳೆಯುತ್ತಿರುವಂತೆ ಐಷಾರಾಮಿ ಹಾಸಿಗೆ ಉತ್ಪನ್ನಗಳ ಮೇಲಿನ ಹೆಚ್ಚು ಸೆಳೆತವನ್ನು ನಾವು ಕಾಣುತ್ತಿದ್ದೇವೆ. ಗ್ರಾಹಕರ ನಿರೀಕ್ಷೆಗಳನ್ನು ಪೂರೈಸಲು ನಾವು ಹೆಚ್ಚಿನ ಸ್ಥಳಗಳಲ್ಲಿ ನಮ್ಮ ಉತ್ಪನ್ನಗಳನ್ನು ಒದಗಿಸಲು ಲಭ್ಯವಿದ್ದೇವೆ ಎಂಬುದನ್ನು ಖಚಿತಪಡಿಸಿಕೊಳ್ಳುತ್ತಿದ್ದೇವೆ.


ಅದಕ್ಕೆ ಪೂರಕವಾಗಿ ನಮ್ಮ ಉತ್ಪನ್ನಗಳನ್ನು ಆನ್‌ಲೈನ್‌ನಲ್ಲಿ ಖರೀದಿಸಲು ಅವಕಾಶ ಮಾಡಿಕೊಡುತ್ತೇವೆ. ಜೊತೆಗೆ ನಾವು ನಮ್ಮ ಸಪ್ಲೈ ಚೈನ್ ಮತ್ತು ಆನ್‌ಲೈನ್ ಸ್ಟೋರ್ ಅನುಭವವನ್ನು ತೀವ್ರಗೊಳಿಸಿದ್ದೇವೆ'' ಎಂದು ಹೇಳಿದರು.

> **ದವೀದ್ ಕುರುವಿಲ್ಲಾ, ಕಳೆದ 40 ವರ್ಷಗಳಿಂದಲೂ ರೆಸ್ಟೋಲೆಕ್ಸ್ ಗ್ರಾಹಕರ ಅನುಭವವನ್ನು ಸುಧಾರಿಸಲು, ಅವರ ನಿರ್ಧಾರ ತೆಗೆದುಕೊಳ್ಳಲು ಸಹಾಯ ಮಾಡಲು ಬದ್ಧವಾಗಿದೆ. ನಮ್ಮ ಈ ಹೊಸ ಎಕ್ಸ್‌ಪೀರಿಯನ್ಸ್ ಸೆಂಟರ್ ತೆರೆಯುವ ಮೂಲಕ ನಮ್ಮ ಗ್ರಾಹಕರಿಗೆ ಮತ್ತಷ್ಟು ಸೌಕರ್ಯ ಒದಗಿಸಿದ್ದೇವೆ ಎಂಬುದನ್ನು ನಾವು ನಂಬುತ್ತೇವೆ'' ಎಂದು ಹೇಳಿದರು.**

### ಪದ್ಯ ಶೀರ್ಷಿಕೆ - ಯೋಗ

■ ಡಾ. ಸತ್ಯಮೂರ್ತಿ

ಎಲ್ಲರೂ ಯೋಗ ಮಾಡಿರೋ
ರೋಗದಿಂದ ದೂರ ಉಳಿಯಿರೋ
ಯೋಗಕೆ ಪ್ರಾತಃಕಾಲ ಯೋಗ್ಯವು
ಉತ್ತಮ ಆರೋಗ್ಯದ ಭಾಗ್ಯವು
ಮುಸ್ಸಂಜೆ ಯೋಗಕೆ ಸೂಕ್ತವು
ಬಾಳಿರಿ ಧೀರ್ಘ ಕಾಲವು
ಸೂರ್ಯ ನಮಸ್ಕಾರದ ಉಚ್ಚಾರ
ಬೀಜಮಂತ್ರದ ಚಮತ್ಕಾರ
ಮನಸ್ಸು ಶಾಂತಗೊಳಿಸಿರೋ
ದೇಹವ ಗಟ್ಟಿಗೊಳಿಸಿರೋ
ಋಷಿ ಮುನಿಗಳ ಜೀವನ ಅರಿಯಿರೋ
ಯೋಗದ ರಹಸ್ಯ ತಿಳಿಯಿರೋ
ಪತಂಜಲಿಯ ಸ್ಮರಿಸಿರೋ
ನಿತ್ಯಕರ್ಮವ ಮೊದಲೇ ಮುಗಿಸಿರೋ
ಬಾಲ್ಯ, ಯೌವನ, ಮುಪ್ಪು
ನೀವಾಗದಿರಿ ಅವಕೆ ಬೆಪ್ಪು
ಸಮತ್ವಂ ಯೋಗ ಉಚ್ಚತೇ
ಸಂತೋಷದ ಗುಟ್ಟು ಬಿಚ್ಚಿತೇ
ಸಸ್ಯಾಹಾರದ ಜೀವನ
ಬಾಳಿಗೆ ಅದುವೇ
ಸೋಪಾನ
ಅಂಗಾಂಗಗಳ
ಮರ್ಧನ
ಸುಂದರ ಜೀವನ
ಲಕ್ಷಣ
ಸ್ವಾತ್ಮ ರಾಮರ ಜೀವನ
ಸ್ವಸ್ಥ ಜೀವನ ಪಾವನ
ಯೋಗದ ದಿನದ ಆಚರಣೆ
ಭಾರತಕ್ಕೆ ಮನ್ನಣೆ
ಸರ್ವಾಂಗಗಳ ಆಸನ
ಕಾಣಿರೊ ಸದಾ ಯೌವನ
ಸ್ಮರಣ ಶಕ್ತಿ ಗಳಿಸಿರೋ
ಬಿಡದೆ ಯೋಗ ಮಾಡಿರೋ
ಸುಂದರವಾಗಿ ಕಾಣಿರೋ
ಲವಲವಿಕೆ ಜೀವನ ನಡೆಸಿರೋ
ಪ್ರಾಣಾಯಾಮ ಮಾಡಿರಿ
ಪ್ರಾಣಶಕ್ತಿಯ ಹೆಚ್ಚಿಸಿರಿ
ಒತ್ತಡ ಜೀವನ ಸರಿಸಿರಿ
ಶಾಂತಿಯಿಂದ ಬಾಳಿರಿ
ಯೋಗ ಮಾಡಲು ಬನ್ನಿರಿ
ಶಾಂತಿ, ನೆಮ್ಮದಿ ಕಾಣಿರಿ
ಧ್ಯಾನ ಜೀವನ ಅನುಭವಿಸಿ
ಸರಳ ಜೀವನ ಬೆನ್ನುಹತ್ತಿ
ಉತ್ತಮ ಮನುಜರಾಗಿರಿ
ಶಾಂತಿ ಹರಸಿ ಬನ್ನಿರಿ
ದೇಹವನ್ನು ದಂಡಿಸಿರಿ
ಮನಸ್ಸಿನ ಹತೋಟಿ
ಹೊಂದಿರಿ
ಯೋಗದಿಂದ ಶಕ್ತಿ
ಅದರಿಂದಲೇ ಭಕ್ತಿ
ಇದನ್ನು ತಿಳಿದರೆ
ಸಿಗುವುದು ಜೀವಕೆ ಮುಕ್ತಿ



# ಸಮಗ್ರ ಶಿಕ್ಷಣ, ರಾಷ್ಟ್ರ ನಿರ್ಮಾಣಕ್ಕೆ ವ್ಯಕ್ತಿತ್ವ ನಿರ್ಮಾಣ, ಅಧ್ಯಾತ್ಮಿಕ ಬೆಳವಣಿಗೆ ಅತ್ಯಗತ್ಯ

• ಉದಯವಾಹಿನಿ, ಬೆಂಗಳೂರು

ಆರ್‌ವಿ ವಿಶ್ವವಿದ್ಯಾಲಯವು ಶುಕ್ರವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ 'ಮೌಲ್ಯ ಶಿಕ್ಷಣ- ಯಾಕೆ, ಹೇಗೆ?' ವಿಷಯದ ಕುರಿತು ರಾಮಕೃಷ್ಣ ಮಿಷನ್‌ನ ರಾಜ್‌ಕೋಟ್ ಕೇಂದ್ರದ ಮುಖ್ಯಸ್ಥ ಸ್ವಾಮಿ ನಿಖಿಲೇಶ್ವರಾನಂದಜಿ ಮಹಾರಾಜ್ ಉಪನ್ಯಾಸ ನೀಡಿದರು.

ಸಮಕಾಲೀನ ಸಮಾಜದ ಸವಾಲುಗಳನ್ನು ಎದುರಿಸಲು ಮತ್ತು ಶ್ರೇಷ್ಠ ವ್ಯಕ್ತಿತ್ವಗಳನ್ನು ಬೆಳೆಸಲು ಬೌದ್ಧಿಕ, ಭಾವನಾತ್ಮಕ, ಅಧ್ಯಾತ್ಮಿಕ ಬೆಳವಣಿಗೆಯನ್ನು ಒಟ್ಟುಗೂಡಿಸಿದ ಸಮಗ್ರ ಶಿಕ್ಷಣ ವಿಧಾನದ ತುರ್ತು ಅಗತ್ಯವನ್ನು ಅವರು ತಮ್ಮ ಉಪನ್ಯಾಸದಲ್ಲಿ ಪ್ರತಿಪಾದಿಸಿದರು.

ಸ್ವಾಮಿ ನಿಖಿಲೇಶ್ವರಾನಂದಜಿ ಮಹಾರಾಜ್ ಅವರು ತಮ್ಮ ಭಾಷಣದಲ್ಲಿ, ಮಾನಸಿಕ ಕಾಯಿಲೆಗಳ ಹೆಚ್ಚಳ, ವಿದ್ಯಾರ್ಥಿಗಳ ಆತ್ಮಹತ್ಯೆ, ಮಾದಕ ವ್ಯಸನದಂತಹ ಸಾಮಾಜಿಕ ಸವಾಲುಗಳ ಕುರಿತು ಮಾತನಾಡಿದರು.

ಈ ಸವಾಲುಗಳನ್ನು ಎದುರಿಸಲು ಮೌಲ್ಯಾಧಾರಿತ ಶಿಕ್ಷಣದ ಅಗತ್ಯವನ್ನು ಅವರು ಒತ್ತಿಹೇಳುತ್ತಾ ಬುದ್ಧಿವಂತಿಕೆಯ ಅಂಶ (ಐಕ್ಯೂ) ಮಾತ್ರವಲ್ಲದೆ ಭಾವನಾತ್ಮಕ ಅಂಶ (ಈಕ್ಯೂ) ಅಧ್ಯಾತ್ಮಿಕ ಅಂಶ (ಎಸ್‌ಕ್ಯೂ)ಗಳ ಪ್ರಾಮುಖ್ಯತೆಯನ್ನು ತಿಳಿಹೇಳಿದರು. ದೈಹಿಕ, ಮಾನಸಿಕ, ಬೌದ್ಧಿಕ, ಭಾವನಾತ್ಮಕ ಮತ್ತು ಅಧ್ಯಾತ್ಮಿಕ ಆಯಾಮಗಳನ್ನು ಒಳಗೊಂಡಿರುವ ಸಮಗ್ರ ವ್ಯಕ್ತಿತ್ವದ ಬೆಳವಣಿಗೆಯಿಂದ ನಿಜವಾದ ಯಶಸ್ಸು ಮತ್ತು ಸಂತೋಷ ದೊರೆಯುತ್ತದೆ ಎಂದು ಅವರು ಹೇಳಿದರು.

ತಮ್ಮ ಪ್ರವಚನದಲ್ಲಿ ರಾಮಕೃಷ್ಣ ಮಿಷನ್‌ನ ರಾಜ್‌ಕೋಟ್ ಕೇಂದ್ರದ ಮುಖ್ಯಸ್ಥ ಸ್ವಾಮಿ ನಿಖಿಲೇಶ್ವರಾನಂದಜಿ ಮಹಾರಾಜ್, ಭಾರತದ ಎಲ್ಲಾ ಸಮಸ್ಯೆಗಳಿಗೆ ಶಿಕ್ಷಣವೊಂದೇ ರಾಮಬಾಣ. ನಮಗೆ ವ್ಯಕ್ತಿತ್ವವನ್ನು ಬೆಳೆಸುವ, ಮೌಲ್ಯಗಳನ್ನು ತುಂಬುವ, ಪ್ರತಿಯೊಬ್ಬ ವಿದ್ಯಾರ್ಥಿಯೊಳಗೆ ದೈವಿಕತೆಯ ಕಿಡಿಯನ್ನು ಹಚ್ಚುವ ಶಿಕ್ಷಣದ ಅಗತ್ಯವಿದೆ. ವ್ಯಕ್ತಿತ್ವ ಇಲ್ಲದೆ, ಆಂತರಿಕ ನೈತಿಕತೆ ಇಲ್ಲದೆ ಹೊಂದುವ ಎಲ್ಲಾ ಜ್ಞಾನ, ಸಂಪತ್ತು ಸೇರಿದಂತೆ ಪ್ರಪಂಚದ ಎಲ್ಲಾ ಭೌತಿಕ ಪ್ರಗತಿಯು ಅರ್ಥಹೀನವಾಗಿರುತ್ತದೆ. ಉತ್ತಮ ವ್ಯಕ್ತಿತ್ವದಿಂದ ಉತ್ತಮ ರಾಷ್ಟ್ರವನ್ನು, ಉತ್ತಮ ಭವಿಷ್ಯವನ್ನು ರೂಪಿಸಬಹುದಾಗಿದೆ ಎಂದು ಹೇಳಿದರು. ಸ್ವಾಮಿ ನಿಖಿಲೇಶ್ವರಾನಂದಜಿ ಮಹಾರಾಜ್ ಜೊತೆ ಸಂವಾದ ನಡೆಯಿತು. ಕಾರ್ಯಕ್ರಮವು ಯಶಸ್ವಿಯಾಗಿ ನಡೆದು ಆರ್ ವಿ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು, ಅಧ್ಯಾಪಕರು ಸಿಬ್ಬಂದಿಗಳ ಮೇಲೆ ಉತ್ತ ಪರಿಣಾಮ ಬೀರಿತು. ಆರ್ ವಿ ವಿಶ್ವವಿದ್ಯಾನಿಲಯ ಮತ್ತು ಆರ್ ವಿ ಕಾಲೇಜ್ ಆಫ್ ಇಂಜಿನಿಯರಿಂಗ್ ಜಂಟಿಯಾಗಿ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ಆರ್.ವಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲ ಡಾ.ಕೆ.ಎನ್. ಸುಬ್ರಹ್ಮಣ್ಯ, ಆರ್‌ವಿ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ.(ಡಾ.) ವೈ.ಎಸ್.ಆರ್. ಮೂರ್ತಿ, ಅತಿಥಿಗಳು, ಅಧ್ಯಾಪಕರು, ಸಿಬ್ಬಂದಿ ಮತ್ತು ಆಯಾ ಸಂಸ್ಥೆಗಳ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.



ಉದಯವಾಹಿನಿ ಚಿತ್ರ


# ನಾವು ದೇವರಿಗೆ ದೀಪ ಯಾಕೆ ಇಡಬೇಕು ?



ವಿಶ್ವಾಸ್.ಡಿ. ಗೌಡ
• ಉದಯವಾಹಿನಿ, ವಿಶೇಷ

ಪ್ರಿಯ ಬಂದುಗಳೇ ನಾವು ದಿನ ನಿತ್ಯ ದೇವರಿಗೆ ದೀಪ ಇಟ್ಟು, ಭಕ್ತಿಯಿಂದ ದೇವರಿಗೆ ಕೈ ಮುಗಿಯುತ್ತೇವೆ. ನಮ್ಮನ್ನು ಕುತೂಹಲದಿಂದ ನೋಡಿ ಕಲಿಯುವ ಮಕ್ಕಳು' ನಾವು ದೇವರಿಗೆ ದೀಪ ಯಾಕೆ ಇಡಬೇಕು' ಅದೊಂದು ದಿನ ನಮ್ಮನ್ನು ಕೇಳಿಯೇ ಬಿಡುತ್ತವೆ. ನೀವು ತಬ್ಬಿಬ್ಬುಗೊಳ್ಳುತ್ತಿರಿ. 'ಇದು ನಮ್ಮ ಸಂಪ್ರದಾಯ ಮಗು, ಅಜ್ಜ ಇಡುತ್ತಿದ್ದರು ಆದನಂತರ ಅಪ್ಪ ಇಡುತ್ತಿದ್ದರು ಈಗ ನಾನು ಮುಂದೆ ನೀನು' ಎನ್ನುತ್ತಾ ಮಗುವನ್ನು ಸಮಾಧಾನ ಪಡಿಸುತ್ತಿರಿ. ಮಗು ಸತ್ಯ ಎನ್ನುತ್ತಾ ನಂಬಿ ಬಿಡುತ್ತದೆ!!. ಆದರೆ ಸತ್ಯ ಅದಲ್ಲ. ನೀವು ತಿಳಿದುಕೊಳ್ಳಿ ಮತ್ತು ನಿಮ್ಮವರೊಂದಿಗೂ ಹಂಚಿಕೊಳ್ಳಿ ದೀಪ ಅನ್ನುವುದು ಬರೇ ಬೆಳಕಿಗಾಗಿ ಇಡುವುದಲ್ಲ. ಬದಲಿಗೆ ನಿಮ್ಮ ಪ್ರಾರ್ಥನೆ ಮತ್ತು ಹರಕೆಗನ್ನು ದೇವರಿಗೆ ತಲುಪಿಸುವ ವಾಹಕ. ದೀಪ ಅನ್ನುವುದು ಅಗ್ನಿಯಿಂದ ಪ್ರಜ್ವಲಿತವಾಗಿದೆ. ನಾವು ಮಾಡುವ ಯಾಗದ ಹವಿಸನ್ನು ಹೇಗೆ ಅಗ್ನಿಯು ಆಯ ದೇವತೆಗಳಿಗೆ ಕೊಂಡೊಯ್ದು ಒಪ್ಪಿಸುತ್ತದೋ ಅದೇ ತೆರನಾಗಿ ದೀಪವೂ ನಿಮ್ಮ ಪ್ರಾರ್ಥನೆಯನ್ನು ಭಗವಂತನ ಬಳಿಗೆ ಕೊಂಡೊಯ್ಯುವ ಸಾಧನವಾಗಿದೆ. ನೀವು ಯಾವ ದೇವರನ್ನು ಪ್ರಾರ್ಥನೆ ಮಾಡುತ್ತಿರೋ ಆ ಪ್ರಾರ್ಥನೆ ನಿಮ್ಮ ಆ ದೇವರ ಬಳಿ ತಲುಪಲು ದೀಪ ಒಂದು ಮಾಧ್ಯಮ.

> **ಪ್ರಾರ್ಥನೆಗಳು ಫಲಿಸುತ್ತವೆ. ದೇವರಮತ್ತು ನಿಮ್ಮ ಸಂಬಂಧಗಳು ಹತ್ತಿರ ಮತ್ತು ಗಟ್ಟಿಯಾಗುತ್ತದೆ. ಕಾರಣಿಕಗಳು ಮಾತಾಡುತ್ತವೆಇನ್ನು ಮಕ್ಕಳ ಜನ್ಮ ದಿನಾಚರಣೆಯ ಸಮಯದಲ್ಲಿ ಕ್ಯಾಂಡಲ್ ನಂದಿಸುವುದಕ್ಕಿಂತದೀಪ ಪ್ರಜ್ವಲಿಸುವುದು ತುಂಬಾ ಸೂಕ್ತವಾದ ಆಚರವಾಗಿದೆ. ಉರಿಯುತ್ತಿರುವ ಪುಟ್ಟ ದೀಪ ನಿಮ್ಮ ಬಂಧುಗಳ ಆರೈಕೆಯನ್ನು ದೇವರ ಬಳಿಗೆ ಕೊಂಡೊಯ್ಯುತ್ತದೆ ಯಾರಾದರೂ ಕೆಟ್ಟ ಹಾರೈಕೆಯನ್ನು ಮಾಡಿದರೆ ಅವನನ್ನು ಅಲ್ಲೇ ಸುಟ್ಟು ಒಳ್ಳೆಯ ಆರೈಕೆಯನ್ನು ಮಾತ್ರ ದೇವರ ಪಾದತಳದಲ್ಲಿಡುವ ಗುಣ ಪುಟ್ಟ ಹಣತೆಗಿದೆ.**



ದೀಪವಿಲ್ಲದೆ ನಿಮ್ಮ ಪ್ರಾರ್ಥನೆ ತಲುಪಬೇಕಾದ ಜಾಗವನ್ನು ತಲುಪುವುದಿಲ್ಲ. ಹಿಂದೊಮ್ಮೆ ನಾವು ಪ್ರಾರ್ಥನೆ ಮಾಡುವಾಗ ದೀಪ ನಂದಿ ಹೋದರೆ ಅಪಶಕುನ ಅನ್ನುತ್ತಿದ್ದರು.ಯಾಕೆಂದರೆ ನಿಮ್ಮ ಪ್ರಾರ್ಥನೆ ಭಗವಂತನನ್ನು ತಲುಪಲಿಲ್ಲ ಅನ್ನುವುದೇ ಅದರ ತಾತ್ಪರ್ಯ.ಆತ್ಮ ಮತ್ತು ಪರಮಾತ್ಮನ ಮಧ್ಯೆ ಸಂಬಂಧ ಸೇತುವೆ ಒಂದು ಪುಟ್ಟ ದೀಪವಾಗಬಲ್ಲುದು. ನೀವು ನಿತ್ಯ ಮನೆಯಲ್ಲಿ ದೇವರಿಗೆ ಅಥವಾ ದೈವಗಳಿಗೆ ಕೈ ಮುಗಿಯುವಾಗ ಪುಟ್ಟ ದೀಪವೊಂದನ್ನು ಪ್ರಜ್ವಲಿಸುವ ಪರಿಪಾಟವನ್ನು ಇಟ್ಟುಕೊಳ್ಳಿ. ನಿಮ್ಮ ಪ್ರತಿ ಪ್ರಾರ್ಥನೆ ಮುಟ್ಟಬೇಕಾದ ಜಾಗವನ್ನು ತಟ್ಟುತ್ತದೆ.

# ಜನಸಾಮಾನ್ಯರಿಗೆ ಬೆಲೆ ಏರಿಕೆ ಬರೆ

• ಉದಯವಾಹಿನಿ, ಬೆಂಗಳೂರು

ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಇಂಧನ ದರ ಹೆಚ್ಚಿಸಿರುವ ಬೆನ್ನಲ್ಲೇ ಜನಸಾಮಾನ್ಯರಿಗೆ ಇದೀಗ ಎಲ್ಲಾ ವಲಯದ ವಸ್ತುಗಳ ದರ ಏರಿಕೆಯ ಬಿಸಿ ಮತ್ತೊಮ್ಮೆ ತಟ್ಟಲಿದೆ. ದಿನಬಳಕೆ, ಉತ್ಪನ್ನಗಳ ಸರಬರಾಜು, ಸಾಗಾಣಿಕೆ ವೆಚ್ಚದಲ್ಲಿ ಹೆಚ್ಚಳವಾಗುತ್ತದೆ.

ಕೈಗಾರಿಕೆಗಳು, ಉದ್ಯಮಗಳು ಸಾಗಾಣಿಕೆ ವೆಚ್ಚವನ್ನು ಪ್ರಮುಖವಾಗಿ ಅವಲಂಬಿಸಿರುವ ಹಿನ್ನೆಲೆಯಲ್ಲಿ ಅನಿವಾರ್ಯವಾಗಿ ಬೆಲೆ ಹೆಚ್ಚಿಸಬೇಕಾಗುತ್ತದೆ. ಇದರಿಂದಾಗಿ ನೇರವಾಗಿ ಹೊಡೆತ ಬೀಳುವ ಬಡ, ಮಧ್ಯಮ ವರ್ಗದವರಿಗೆ ಜೀವನ ನಿರ್ವಹಣೆ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತದೆ. ಇಂಧನ ದರ ಹೆಚ್ಚಳದಿಂದಾಗಿ ವಿಶೇಷವಾಗಿ ಮನೆ ಮತ್ತು ಕಟ್ಟಡ ನಿರ್ಮಾಣ ಕಾಮಗಾರಿಗಳ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಜಲ್ಲಿಕಲ್ಲು, ಸೈಜ್‌ಗಲ್ಲು, ಗ್ರಾನೈಟ್ಸ್, ಮರಳು, ಎಂ.ಸ್ಯಾಂಡ್, ಬೋಲ್ಡರ್ಸ್, ದಿಂಡುಗಲ್ಲು ಸಿಮೆಂಟ್, ಸ್ಟೀಲ್, ಸಿಮೆಂಟ್ ಹಾಗೂ ಇಟ್ಟಿಗೆ ಬೆಲೆ ಇನ್ನಷ್ಟು ದುಬಾರಿಯಾಗಲಿದೆ. ಇದರಿಂದಾಗಿ ಹೊಸದಾಗಿ ಮನೆ ಕಟ್ಟುವವರಿಗೆ, ಸದ್ಯ ಮನೆ ನಿರ್ಮಾಣ ಮಾಡುತ್ತಿರುವವರಿಗೆ ತುಂಬ ತೊಂದರೆಯಾಗಲಿದೆ. ವರ್ಷದಿಂದ ವರ್ಷಕ್ಕೆ ಅಡುಗೆ ಎಣ್ಣೆ, ತೊಗರಿ ಬೇಳೆ, ತರಕಾರಿ, ಅಕ್ಕಿ, ಗೋಧಿ, ಹಿಟ್ಟು, ಖಾದ್ಯ ತೈಲಗಳು, ಸಕ್ಕರೆ, ಚಹ, ಕಾಫಿ ಸೇರಿ ದಿನಬಳಕೆ ವಸ್ತುಗಳ ಬೆಲೆ ನಾಗಾಲೋಟದಲ್ಲಿ ಏರುತ್ತಿವೆ. ಇದೀಗ ಇಂಧನ ಹೆಚ್ಚದಿಂದಾಗಿ ಮೇಲಿನ ವಸ್ತುಗಳ ಬೆಲೆ ಇನ್ನಷ್ಟು ದುಬಾರಿಯಾಗುತ್ತದೆ. ಬಡವರಿಗೆ, ಮಧ್ಯಮ ವರ್ಗದ ಜನರಿಗೆ, ಅವಿಭಕ್ತ ಕುಟುಂಬಗಳ ಅಡುಗೆ ಮನೆಗಳು ಇದರ ಬಿಸಿ ತಟ್ಟುತ್ತದೆ. ಮನೆ ಮನೆಗಳ ಒಡಕಿಗೆ ಕಾರಣವಾಗುವುದಲ್ಲದೆ, ಅಡುಗೆ ಮನೆಗಳು ಎರಡಾಗುತ್ತಿವೆ. ಗಂಡ ಕೊಟ್ಟ ಹಣದಲ್ಲಿ ಮನೆಯ ಖರ್ಚು,ವೆಚ್ಚ ತೂಗಿಸುವ ಗೃಹಣಿ ತಿಂಗಳ ಕೊನೆಯಲ್ಲಿ ಕೈಯಲ್ಲಿ ಕಾಸು ಉಳಿಯದೇ ಪರಿತಪಿಸುತ್ತಾಳೆ.ಈ ವಿಚಾರಕ್ಕೆ ಕೆಲವೊಮ್ಮೆ ಗಂಡಹೆಂಡತಿ ನಡುವೆ ಜಗಳ ನಡೆಯುವ ಸಾಧ್ಯತೆಯೂ ಇರುತ್ತದೆ.



## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| ಗುಳಿಕಕಾಲ | ಮಧ್ಯಾಹ್ನ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ** ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ದೊಡ್ಡ ಗುಂಪಿನಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳುವುದು ಅತ್ಯಂತ ಮನರಂಜನಾತ್ಮಕವಾಗಿರುತ್ತದೆ.

**ವೃಷಭ** ದೀರ್ಘಕಾಲದ ಹೂಡಿಕೆ ಮೇಲೆ ಗಣನೀಯ ಲಾಭ ಮಾಡುತ್ತೀರಿ. ಒಟ್ಟಾರೆ ಒಂದು ಲಾಭದಾಯಕ ದಿನವಾದರೂ ನೀವು ನಿರಾಸೆ ಭರವಸೆಯಿಡಬಹುದಾದ ಯಾರಾದರೂ ನಿಮ್ಮನ್ನು ನಿರಾಸೆಗೊಳಿಸುತ್ತಾರೆ.

**ಮಿಥುನ** ಷೇರು ಉದ್ಯಮಕ್ಕೆ ಸೇರಿರುವವರು ಇಂದು ಆರ್ಥಿಕ ಲಾಭವನ್ನು ಪಡೆಯುವ ಪ್ರಬಲ ಸಾಧ್ಯತೆ ಇದೆ. ಭಾವನಾತ್ಮಕ ಭರವಸೆಗಳನ್ನು ಬಯಸುವವರು ಹಿರಿಯರು ಅವರ ನೆರವಿಗೆ ಬರುವುದನ್ನು ನೋಡಬಹುದು.

**ಕರ್ಕಾಟಕ** ನಿಮ್ಮ ವ್ಯಕ್ತಿತ್ವ ನೀವು ಹೊಸ ಸ್ನೇಹಿತರನ್ನು ಗಳಿಸಲು ಸಹಾಯ ಮಾಡುತ್ತದೆ. ನಿಮ್ಮ ಪ್ರೇಮಮಯ ವಿಲಕ್ಷಣಗಳನ್ನು ಅಭಿವ್ಯಕ್ತಿಗೊಳಿಸಿ. ನಿಮ್ಮ ಕಲಾತ್ಮಕ ಮತ್ತು ಸೃಜನಶೀಲ ಸಾಮರ್ಥ್ಯ ಬಹಳಷ್ಟು ಮೆಚ್ಚುಗೆ ತರುತ್ತದೆ.

**ಸಿಂಹ** ಒಬ್ಬಹಿರಿಯ ವ್ಯಕ್ತಿಯ ಆರೋಗ್ಯ ಕೊಂಚ ಆತಂಕಕ್ಕೆ ಕಾರಣವಾಗುತ್ತದೆ. ಪ್ರಣಯದ ನೆನಪುಗಳು ನಿಮ್ಮ ದಿನವನ್ನು ಆಕ್ರಮಿಸುತ್ತವೆ. ನೀವು ಕಲ ಸದಲ್ಲಿ ಸಂಭವಿಸುವ ಬದಲಾವಣೆಗಳಿಂದ ಪ್ರಯೋಜನ ಪಡೆಯುತ್ತೀರಿ.

**ಕನ್ಯಾ** ಈ ದಿನವು ನಿಮ್ಮ ಪ್ರೀತಿಪಾತ್ರರ ನಗುವಿನಿಂದ ಪ್ರಾರಂಭವಾಗುತ್ತದೆ, ಮತ್ತು ಪರಸ್ಪರರ ಕನಸಿನಲ್ಲಿ ಕೊನೆಗೊಳ್ಳುತ್ತದೆ. ಹೊಸ ಪಾಲುದಾರಿಕೆ ಇಂದು ಭರವಸೆಯಿಂದ ಕೂಡಿರುತ್ತದೆ.

**ತುಲಾ** ಮಕ್ಕಳು ನಿಮ್ಮ ದಿನವನ್ನು ಕಠಿಣಗೊಳಿಸುತ್ತಾರೆ. ಅವರ ಆಸಕ್ತಿ ಕಾಯ್ದುಕೊಳ್ಳಲು ಪ್ರೀತಿಯ ಅಸ್ತ್ರ ಬಳಸಿ ಮತ್ತು ಯಾವುದೇ ಅನಗತ್ಯ ಒತ್ತಡ ತಪ್ಪಿಸಿ. ಪ್ರೀತಿಯಿಂದ ಪ್ರೀತ ಜನಿಸುತ್ತದೆಂದು ನೆನಪಿಡಿ.

**ವೃಶ್ಚಿಕ** ನಿಮ್ಮ ಸಕಾರಾತ್ಮಕ ದೃಷ್ಟಿಕೋನ ನಿಮ್ಮ ಸುತ್ತಲಿನವರನ್ನು ಆಕರ್ಷಿಸಬಹುದು. ದಿನದ ಆರಂಭದಲ್ಲಿ ಇಂದು ನೀವು ಯಾವುದೇ ಆರ್ಥಿಕ ನಷ್ಟವನ್ನು ಹೊಂದಿರಬಹುದು.ಇದರಿಂದ ನಿಮ್ಮ ಪೂರ್ತಿ ದಿನ ಹದಗೆಡಬಹುದು.

**ಧನಸ್ಸು** ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ. ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮ ಸುತ್ತಮುತ್ತಲಿನ ಪರಿಸರವನ್ನು ಬೆಳಗಿಸುತ್ತದೆ. ಪ್ರೀತಿ ನಿಮಗಾಗಿ ಗಾಳಿಯಲ್ಲಿದೆ.

**ಮಕರ** ಪ್ರೀತಿಯಲ್ಲಿ ನಿರಾಶೆಯಾಗಬಹುದಾದರೂ ಪ್ರೇಮಿಗಳು ಯಾವತ್ತೂ ಮುಖಸ್ತುತಿ ಮಾಡುವವರಾದ್ದರಿಂದ ನೀವು ಧೃತಿಗೆಡಬೇಡಿ. ನಿಮ್ಮ ಕೌಶಲ್ಯಗಳನ್ನು ತೋರಿಸಲು ಅವಕಾಶಗಳು ಇಂದು ನಿಮ್ಮೊಂದಿಗಿವೆ.

**ಕುಂಭ** ಸಾಮಾಜಿಕ ಜೀವನಕ್ಕಿಂತ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ಇಂದು ಷೇರು ಮಾರುಕಟ್ಟೆಯಲ್ಲಿ ಹಣವನ್ನು ಹೂಡಿಕೆ ಮಾಡುವವರು ತಮ್ಮ ಹಣವನ್ನು ಕಳೆದುಕೊಳ್ಳಬಹುದು.

**ಮೀನ** ನಿಮ್ಮ ದೊಡ್ಡ ಆಸ್ತಿಯಿಂದರೆ ನಿಮ್ಮ ಹಾಸ್ಯಪ್ರಜ್ಞೆ, ಇದನ್ನು ನಿಮ್ಮ ಅನಾರೋಗ್ಯ ಗುಣಪಡಿಸಲು ಬಳಸಲು ಪ್ರಯತ್ನಿಸಿ. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ.

# ಸ್ಮಾರ್ಟ್ ಊರಿನಲ್ಲಿ ಅವ್ಯವಸ್ಥೆಯ ಆಗರ: ಸಾರ್ವಜನಿಕರ ಆಕ್ರೋಶ

## ಇಲ್ಲಿನ ಪರಿಸ್ಥಿತಿ ಹಿಂದಿನಿಂದಲೂ ಹೀಗೇ ಇದೆ, ಮುಂದೆಯೂ ಹೀಗೆಯೇ ಇರುತ್ತದೆ, ಜನರ ಸಮಸ್ಯೆಯನ್ನು ಯಾರೂ ಕೇಳುವುದಿಲ್ಲ

• ಉದಯವಾಹಿನಿ ಹುಬ್ಬಳ್ಳಿ

ಇದು ಸ್ಮಾರ್ಟ್‌ಸಿಟಿ ಅಂತೆ. ಇಲ್ಲಿನ ರಸ್ತೆಗಳಲ್ಲಿ ಓಡಾಡಿದ್ರೆ, ಗೊತ್ತಾಗುತ್ತೆ, ಎಷ್ಟು ಸ್ಮಾರ್ಟ್ ಅಂತಾ... ಸ್ಟೇಷನ್ ರಸ್ತೆಯಲ್ಲಿ ಬೈಕ್‌ನಲ್ಲಿ ಹೋಗುತ್ತಿದ್ದ ವಿಜಯಕುಮಾರ್ ಎಂಬುವರು ಆಕ್ರೋಶ ವ್ಯಕ್ತಪಡಿಸಿದ ಪರಿ ಇದು. ಇಲ್ಲಿನ ರಸ್ತೆಗಳ ಬಗೆಗಿರುವ ಅತೀವ ಬೇಸರ ಅವರ ಪ್ರತಿ ಮಾತಿನಲ್ಲೂ ಕಂಡುಬರುತ್ತಿತ್ತು.

'ಹೊಸ ರಸ್ತೆ ಮಾಡ್ತೀವಿ ಅಂತಾರೆ. ಇರೋ ರಸ್ತೆ ಹಾಳು ಮಾಡ್ತಾರೆ. ಅದಕ್ಕೆ ವರ್ಷಗಟ್ಟಲೆ ಸಮಯ ತೆಗೆದುಕೊಳ್ತಾರೆ. ನಡುವೆ ಮತ್ಯಾವುದೋ ಕಾಮಗಾರಿಗಾಗಿ ರಸ್ತೆ ಅಗೀತಾರೆ. ಅದನ್ನು ಹಾಗೇ ಬಿಟ್ಟು ಹೋಗ್ತಾರೆ. ಮತ್ತೆ ರಸ್ತೆ ಹಾಳು. ಇದು ಮುಗಿಯದ ಕಥೆ. ಹುಬ್ಬಳ್ಳಿ ನಿವಾಸಿಗಳ, ವಾಹನ ಸವಾರರ ಗೋಳು ಹೇಳತೀರದು' ಎಂದು ಬೈಕ್ ಸ್ಟಾರ್ಟ್ ಮಾಡಿ ತೆರಳಿದರು. ಮುಂದೆಯೇ ಇದ್ದ ಗುಂಡಿಯಲ್ಲಿ ಬೈಕ್ ಇಳಿದು, ಮೇಲೆ ಹತ್ತಿ ಸಾಗಿತು. ಹುಬ್ಬಳ್ಳಿಯ ನಿವಾಸಿಗಳು ಹಾಗೂ ಇಲ್ಲಿ ವಾಹನ ಚಲಾಯಿಸುವ ಯಾರನ್ನೇ ಮಾತನಾಡಿಸಿದರೂ ಇಂತಹ ಆಕ್ರೋಶದ ಮಾತುಗಳೇ ಕೇಳಿಬರುತ್ತವೆ. 'ಇಲ್ಲಿನ ಪರಿಸ್ಥಿತಿ ಹಿಂದಿನಿಂದಲೂ ಹೀಗೇ ಇದೆ, ಮುಂದೆಯೂ ಹೀಗೆಯೇ ಇರುತ್ತದೆ. ಜನರ ಸಮಸ್ಯೆಯನ್ನು ಯಾರೂ ಕೇಳುವುದಿಲ್ಲ' ಎಂಬ ನಿರಾಶಾವಾದವೂ ಬಹುತೇಕರಲ್ಲಿದೆ.

**ವ್ಯವಸ್ಥಿತ ಕಾಮಗಾರಿಗೆ ಆಗ್ರಹ**

ನಗರದ ಚನ್ನಮ್ಮ ವೃತ್ತದಿಂದ ರೈಲ್ವೆ ನಿಲ್ದಾಣ ಸಂಪರ್ಕಿಸುವ ರಸ್ತೆ, ಸ್ಟೇಷನ್ ರಸ್ತೆ, ಧಾರವಾಡಕ್ಕೆ ಹೋಗುವ ರಸ್ತೆ, ಕೊಪ್ಪಿಕರ್ ರಸ್ತೆ, ಜನತಾ ಬಜಾರ್, ದುರ್ಗದಬೈಲ್, ಶಾ ಬಜಾರ್, ಗಾಂಧಿ ಮಾರುಕಟ್ಟೆಯಲ್ಲಿರುವ ಪ್ರಮುಖ ರಸ್ತೆಗಳಲ್ಲೇ ಗುಂಡಿಗಳಿವೆ, ಎತ್ತರದ ಒಳಚರಂಡಿ ಚೇಂಬರ್‌ಗಳೂ ಇವೆ. ಜೆಜೆಎಂ ಪೈಪ್‌ಲೈನ್, ಒಳಚರಂಡಿ, ಕೇಬಲ್ ಅಳವಡಿಕೆಗಾಗಿ ರಸ್ತೆ ಅಗೆದಿದ್ದರಿಂದ ಉಂಟಾಗಿದ್ದ ತೊಂದರೆ ಇನ್ನೂ ಪರಿಹಾರವಾಗಿಲ್ಲ. ವಿವಿಧೆಡೆ ರಸ್ತೆಗಳನ್ನು ಇನ್ನೂ ಅಗೆಯಲಾಗುತ್ತಿದೆ. ಒಂದಿಲ್ಲೊಂದು ಕಾಮಗಾರಿ ನಡೆಯುತ್ತಲೇ ಇರುವುದರಿಂದ ಸಂಚಾರಯೋಗ್ಯ ರಸ್ತೆಗಳನ್ನು ದೀರ್ಘ ಕಾಲದವರೆಗೆ ಕಾಣಲು ಸಾಧ್ಯವಾಗುವುದೇ ಇಲ್ಲ. 'ಹಾಳಾದ ರಸ್ತೆಗಳಲ್ಲಿ ಸಂಚರಿಸುವುದರಿಂದ ಆಟೊಗಳಿಗೆ ಹಾನಿಯಾಗುತ್ತಿದೆ. ಒಳ ರಸ್ತೆಗಳು ತೀರಾ ಹದಗೆಟ್ಟಿರುವುದರಿಂದ ಸುತ್ತಿ ಬಳಸಿ ಹೋಗಬೇಕು. ಮಳೆಗಾಲದಲ್ಲಿ ರಸ್ತೆಯಲ್ಲಿ ನೀರು ತುಂಬಿದ್ದಾಗ ಆಟೊಗಳು ಉರುಳಿಬಿದ್ದ ಉದಾಹರಣೆಗಳಿವೆ. ರಸ್ತೆಗಳು ಸರಿಹೋಗುವವರೆಗೂ ಅಪಾಯದ ಆತಂಕವಂತೂ ಇದೆ' ಎನ್ನುತ್ತಾರೆ ಶ್ರಮಜೀವಿ ಆಟೊರಿಕ್ಷಾ ಚಾಲಕರ ಸಂಘದ ಪ್ರಧಾನ ಕಾರ್ಯದರ್ಶಿ ಪುಂಡಲೀಕ ಬಡಿಗೇರ. ವಾಹನ ಸವಾರರೂ ಬಿದ್ದು ಗಾಯಗೊಂಡ ನಿದರ್ಶನವಿದೆ-ವಿಶ್ವನಾಥ ಕುಲಕರ್ಣಿ ವಿದ್ಯಾ ನಗರ ನಿವಾಸಿ 'ಸ್ಮಾರ್ಟ್ ಸಿಟಿ' ಹುಬ್ಬಳ್ಳಿಯ ರಸ್ತೆಗಳೂ ಸ್ಮಾರ್ಟ್ ಆಗಬೇಕಿದೆ. ಅಧಿಕಾರಿಗಳು ಜನಪ್ರತಿನಿಧಿಗಳು ಈ ಬಗ್ಗೆ ಗಮನಹರಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ರವೀಶ್ ಸಿ.ಆರ್.ಡಿಸಿಪಿ ಅಪರಾಧ ಹಾಗೂ ಸಂಚಾರ ವಿಭಾಗ,ರಸ್ತೆಗಳಲ್ಲಿ ಸಾಗುವಾಗ ವಾಹನ ಚಾಲಕರು ಸಂಚಾರ ನಿಯಮ ಪಾಲಿಸಬೇಕು. ಕಾನೂನು-ನಿಯಮ ಪಾಲನೆ ಜಾಗೃತಿ ನಮ್ಮ ಸಂಸ್ಕೃತಿ ಆಗಬೇಕು ಪ್ರಮುಖ ರಸ್ತೆಗಳೇ ಹಾಳಾಗಿರುವಾಗ ಒಳ ರಸ್ತೆಗಳ ಸ್ಥಿತಿ ಊಹೆಗೂ ನಿಲುಕದಾಗಿದೆ. ಹಲವು ವರ್ಷಗಳ ನಿರಂತರ ಹೋರಾಟದ ಫಲವಾಗಿ ಕೆಲವು ಬಡಾವಣೆಯ ರಸ್ತೆಗಳು ಡಾಂಬರು ಕಾಂಕ್ರೀಟ್ ಕಂಡಿವೆ. ಬಹುತೇಕ ರಸ್ತೆಗಳು ಇನ್ನೂ ಅಸ್ಥಿಪಂಜರದಂತಿವೆ. ಮೋಹನ ಏಕಬೋಟೆ ರಸ್ತೆ ಕಾರವಾರ ರಸ್ತೆ ಸಮೀಪದಲ್ಲೇ ಇರುವ ಓಣಿಗಳ ರಸ್ತೆಗಳು ಕೇಶ್ವಾಪುರದ ಒಳರಸ್ತೆಗಳು ಸೇರಿದಂತೆ ಬಹುತೇಕ ರಸ್ತೆಗಳು ಹದಗೆಟ್ಟಿವೆ. ಇನ್ನೂ ಕೆಲವೆಡೆ ಮಣ್ಣಿನ ರಸ್ತೆಗಳೇ ಇವೆ.


ಉದಯವಾಹಿನಿ ಚಿತ್ರ

**ಇದು ಸ್ಮಾರ್ಟ್‌ಸಿಟಿ ಅಂತೆ, ಇಲ್ಲಿನ ರಸ್ತೆಗಳಲ್ಲಿ ಓಡಾಡಿದ್ರೆ ಗೊತ್ತಾಗುತ್ತೆ, ಎಷ್ಟು ಸ್ಮಾರ್ಟ್ ಅಂತಾ**

> ವಿದ್ಯಾನಗರ-ತೋಳನಕೆರೆ, ಉಣಕಲ್ ಕ್ರಾಸ್-ಹೊಸೂರು ಕ್ರಾಸ್, ಓಲ್ಡ್ ಇನ್‌ಕಂಟ್ಯಾಕ್ಸ್ ರಸ್ತೆ-ಕಿಮ್ಸ್ ಹಿಂದೆ, ಕೋಟಿಲಿಂಗನಗರ, ಲೋಹಿಯಾನಗರದಲ್ಲಿ ಟೆಂಡರ್‌ಶ್ಯೂರ್ ರಸ್ತೆಗಳನ್ನು ಮಾಡಲಾಗಿದೆ. ಆದರೆ ನಡುವೆ ಅಂತರವಿರಿಸಿ, ಪೇವರ್ಸ್ ಹಾಕಿದ್ದಾರೆ. ಎಷ್ಟೋ ಕಡೆ ಪೇವರ್ಸ್ ಒಡೆದಿವೆ. ರಸ್ತೆ ಇಕ್ಕೆಲದ ಎತ್ತರ ಒಂದೇ ಸಮನಾಗಿಲ್ಲ
>
> -ಲಿಂಗರಾಜ ಧಾರವಾಡಶೆಟ್ಟರ
> ವಾರ್ಡ್ ಸಮಿತಿ ಬಳಗದ ಸಂಚಾಲಕ
> ಲಿಂಗರಾಜ ಧಾರವಾಡಶೆಟ್ಟರ

**ರಸ್ತೆಗಳ ತಿರುವಿನಲ್ಲೂ ಅಪಾಯ**


ಈ ಅಂತರದಲ್ಲಿ ಬೈಕ್‌ಗಳ ಸಿಲುಕುತ್ತವೆ. ಇದು ಪ್ರಾಣಕ್ಕೆ ಕುತ್ತು ತರಬಹುದು. ರಸ್ತೆಗಳ ತಿರುವಿನಲ್ಲೂ ಅಪಾಯ ಎದುರಾಗುವಂತಹ ಸ್ಥಿತಿ ಇದೆ. ವಾರ್ಡ್ ಸಮಿತಿ ರಚನೆಯಾದರೆ ಇಂತಹುದೆಲ್ಲವನ್ನೂ ಪ್ರಶ್ನಿಸಿ, ವ್ಯವಸ್ಥಿತ ಕಾಮಗಾರಿಗೆ ಆಗ್ರಹಿಸಬಹುದು' ಎಂದರು.

## ತ್ಯಾಗ ಬಲಿದಾನದ ಸಂಕೇತವಾದ ಬಕ್ರೀದ್ ಹಬ್ಬದ ಸಡಗರ ಸಂಭ್ರಮ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನಾದ್ಯಂತ ತ್ಯಾಗ ಬಲಿದಾನದ ಬಕ್ರೀದ್ ಹಬ್ಬವು ಅತ್ಯಂತ ಸಡಗರ ಸಂಭ್ರಮದಿಂದ ಈದ್ಗಾಗಳಲ್ಲಿ,ಮಸೀದಿಗಳಲ್ಲಿ ಹಬ್ಬದ ನಿಮಿತ್ತ ಮುಸ್ಲಿಂ ಬಾಂಧವರು ಸಾಮೂಹಿಕ ನಮಾಜ್ ಪ್ರಾರ್ಥನೆ ಮಾಡಿ ಸಮೂದಾಯದ ಏಳಿಗೆಗಾಗಿ,ದೇಶದ ಏಕತೆ ಸುಭದ್ರತೆಗಾಗಿ ಪ್ರಾರ್ಥನೆ ಸಲ್ಲಿಸಿದರು.

ತಾಲ್ಲೂಕಿನ ಅಣವಾರ, ಪೋಲಕಪಳ್ಳಿ, ದಸ್ತಾಪುರ, ಐನೋಳ್ಳಿ, ನೀಮಾಹೋಸಳ್ಳಿ, ದೇಗಲಮಡಿ, ಚಿಮ್ಮನಚೋಡ, ಕನಕಪುರ, ಸುಲೇಪೇಟ, ನಿಡಗುಂದಾ, ಗಣಾಪುರ,ಭಕ್ತಂಪಳ್ಳಿ,ಹೊಡೆಬೀರನಳ್ಳಿ, ಗಡಿಕೇಶ್ವಾರ, ನಾಗಾಯಿದ್ಲಾಯಿ, ತುಮಕುಂಟಾ, ಐನಾಪೂರ, ಕುಂಚಾವಜಂ, ಕೋಳ್ಳೂರ, ಕಲ್ಲೂರ, ಮೀರಿಯಾಣ, ಎಂಪಳ್ಳಿ, ಪಟಪಳ್ಳಿ, ಹಸರಗುಂಡಗಿ, ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಮಸೀದಿ ಮತ್ತು ಈದ್ಗಾಗಳಲ್ಲಿ ಚಿಕ್ಕಮಕ್ಕಳು ಹಿರಿಯರು ಯುವಕರು ಸಹಿಚ ಹೊಸ ಹೊಸ ಬಣ್ಣ ಬಣ್ಣದ ಮತ್ತು ಬಿಳುಪು ಬಟ್ಟೆ ಧರಿಸಿ ಅತ್ತರ,ಟೋಪಿ ಹಚ್ಚಿಕೊಂಡು ಮಸೀದಿ ಹಾಗೂ ಈದ್ಗಾಗೆ ತೆರಳಿ ಭಕ್ತಿ ಶ್ರದ್ಧೆಯಿಂದ ಬಕ್ರೀದ್ ಹಬ್ಬದ ನಮಾಜ್ ಮಾಡಿ ಸಮೂದಾಯದ ಏಳಿಗೆಗೆ ಹಾಗೂ ದೇಶದ ಏಕತೆಗೆ ಸುಭದ್ರತೆಗಾಗಿ ಪ್ರಾರ್ಥನೆ ಮಾಡಿದರು.


ಉದಯವಾಹಿನಿ ಚಿತ್ರ

**ಪಟ್ಟಣ:** ಚಿಂಚೋಳಿ-ಚಂದಾಪೂರ ಅವಳಿ ಪಟ್ಟಣದ ಬಡಿದರ್ಗಾ,ಜಾಮೀಯಾ ಮಸೀದಿ,ಮದೀನಾ ಕಾಲೋನಿ,ಪಟೇಲ ಕಾಲೋನಿ,ಗಡಿ ಏರಿಯಾ,ಐಷೀಯಾ ಮಸೀದಿ,ಜಬ್ಬಾರ್ ಮಸೀದಿ,ಮಕ್ಕಾ ಮಸೀದಿ, ಮತ್ತು ಚಂದಾಪೂರದ ಈದ್ಗಾ ಮೈದಾನ 9ಗಂಟೆಗೆ ಸೇರಿದಂತೆ ಮಸೀದಿಗಳಲ್ಲಿ ಬೆಳಿಗ್ಗೆ 6.45ರಿಂದ ಪ್ರಾರಂಭವಾಗಿ 8.30ಗಂಟೆಯವರೆಗೆ ನಮಾಜ್ ಮಾಡಲು ಸಮಯ ನಿಗಧಿ ಮಾಡಿದರು ಮುಸ್ಲಿಂ ಭಾಂದವರಿಗೆ ಸಮಯಕ್ಕೆ ಅನುಗುಣವಾಗಿ ಹಿರಿಯರು ಯುವಕರು ಚಿಣ್ಣರು ಅತ್ಯಂತ ಸಂಭ್ರಮ ಸಡಗರದಿಂದ ಬಕ್ರೀದ್ ಹಬ್ಬದ ನಿಮಿತ್ತ ಹೊಸ ಉಡುಪುಗಳನ್ನು ತೊಟ್ಟು ಅತ್ತರ ಟೋಪಿ ತೊಟ್ಟು ನಮಾಜ್ ಮಾಡಿ ದೇಶದ ಏಕತೆಗೆ ಸುಭದ್ರತೆಗಾಗಿ ಪ್ರಾರ್ಥನೆ ಸಲ್ಲಿಸಿ ಒಬ್ಬರನ್ನೊಬ್ಬರನ್ನು ಪರಸ್ಪರ ಆಲಿಂಗನದ ಮೂಲಕ ಶುಭಾಶಯ ವಿನಿಮಯ ಮಾಡಿದರು. ಅನೇಕ ಮುದ್ದು ಮಕ್ಕಳು ಹಿರಿಯರು,ಯುವಕರು,ರಾಜಕೀಯ ಮುಖಂಡರು ಇದ್ದರು.

## ರಾಜ್ಯ ಸರ್ಕಾರದ ತೈಲ ಬೆಲೆ ಏರಿಕೆ ಖಂಡಿಸಿ ಪ್ರತಿಭಟನೆ

• ಉದಯವಾಹಿನಿ, ಯಾದಗಿರಿ

ಸಾಮಾಜಿಕ ಹೋರಾಟಗಾರರಾದ ಉಮೇಶ್ ಕೆ ಮುದ್ನಾಳ್ ಅವರು ರಾತ್ರೋರಾತ್ರಿ ಸರ್ಕಾರದ ಪೆಟ್ರೋಲ್ ಮತ್ತು ಡಿಸೇಲ್ ಬೆಲೆ ಏರಿಕೆ ಖಂಡಿಸಿ ಗಿರಿನಾಡು ಟ್ಯಾಕ್ಸಿ ಚಾಲಕರೊಂದಿಗೆ ಬೃಹತ್ ಪ್ರತಿಭಟನೆ ನಡೆಸಿದರು.

ಟ್ಯಾಕ್ಸಿ ಚಾಲಕರು ಕಾರುಗಳನ್ನ ಮಾನವ ಸರಪಳ್ಳಿಯಂತೆ ವಾಹನಗಳನ್ನು ಸರಪಳಿಯನ್ನಾಗಿ ನಗರದ ಸುಭಾಷ್ ವೃತ್ತದಲ್ಲಿ ರಸ್ತೆ ತಡೆದು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ತೈಲ ಬೆಲೆ ಏರಿಕೆಯಿಂದ ರೈತರಿಗೆ, ಬಡವರಿಗೆ ಟ್ಯಾಕ್ಸಿ, ಆಟೋ ಚಾಲಕರ ಮೇಲೆ ಹೊರೆಯಾಗುತ್ತಿದ್ದು, ತಕ್ಷಣ ರಾಜ್ಯ ಸರ್ಕಾರದ ತೈಲ ಬೆಲೆ ಏರಿಕೆ ಆದೇಶ ಹಿಂಪಡೆಯುವಂತೆ ಒತ್ತಾಯಿಸಿದರು. ಜನರಿಗೆ ಅನುಕೂಲ ಮಾಡಿ ಕೊಡಬೇಕಾದ್ರೇ ಸರ್ಕಾರದ ಜನಪ್ರತಿನಿಧಿಗಳು ಪಡೆಯುವ ಸೌಲತ್ತುಗಳನ್ನ ತ್ಯಾಗ ಮಾಡಿ ಅಂತ ಜನಪ್ರತಿನಿಧಿಗಳ ವಿರುದ್ಧ ಕಿಡಿ ಕಾರಿದರು.


ಉದಯವಾಹಿನಿ ಚಿತ್ರ

ಈ ವೇಳೆ ರಫೀಕ್ ಪಟೇಲ್, ಬಾಬಾ ಖಾನ್, ನೈಮ್ ಶೇಕ್, ಮರೆಪ್ಪ, ರಫೀಕ್ ಅಫ್ಸರ್, ವೆಂಕಟರೆಡ್ಡಿ, ಚಂದ್ರಶೇಖರ, ಬನಶೆಂಕರ್, ಮಹಿಬೂಬ್, ಮುತ್ತು, ಬನ್ನಪ್ಪ, ಜಮಾಲ್ ಬಾಬಾ ಸಾಬನ್ನ, ಬಸ್ಸು, ನವೀನ್, ಖಂಡಪ್ಪ, ಅಯ್ಯನ, ಶೀವು, ಶರಣು, ಅಶೋಕ್ ಪಾಟೀಲ್, ರಶೀದ್ ಪಾಷಾ, ಸಲೀಮ್ ಸೇರಿ ಮಲ್ಲನಗೌಡ ಪ್ರತಿಭಟನೆಯಲ್ಲಿ ಉಪಸ್ಥಿತರಿದ್ದರು

## ಶಿಕ್ಷಣ ಇಲಾಖೆ ಆದೇಶ ರದ್ದುಗೊಳಿಸಲು ಆಗ್ರಹ

• ಉದಯವಾಹಿನಿ ಪುತ್ತೂರು

ಪಿಯುಸಿ ಅತಿಥಿ ಉಪನ್ಯಾಸಕರ ನೇಮಕಾತಿ ಸಂದರ್ಭದಲ್ಲಿ ಬಿಇಡಿ ಕಡ್ಡಾಯಗೊಳಿಸಿ ಶಿಕ್ಷಣ ಇಲಾಖೆ ಸುತ್ತೋಲೆ ಹೊರಡಿಸಿದ್ದು ಇದನ್ನು ರದ್ದುಗೊಳಿಸಬೇಕು ಎಂದು ಒತ್ತಾಯಿಸಿ ಅತಿಥಿ ಉಪನ್ಯಾಸಕರು ಶಾಸಕ ಅಶೋಕ್ ಕುಮಾರ್ ರೈ ಅವರಿಗೆ ಮನವಿ ಸಲ್ಲಿಸಿದರು. ಉಪನ್ಯಾಕರಾದ ತನುಜಾಕ್ಷಿ ಶೆಟ್ಟಿ, ಪ್ರಜ್ಞಾ, ಸಾಧನಾ, ಶೋಭಿತಾ, ಅಕ್ಷತಾ, ನವ್ಯಶ್ರೀ, ಜ್ಯೋತಿ, ಮಮತಾ, ಸಹನಾ, ಆಯಿಷತ್ ಮರ್ವ, ಮಹಮ್ಮದ್ ಜುಬೈರ್, ಪ್ರಸಾದ್, ತುಷಾರ, ಶ್ರುತಿ,ಅಶ್ವಿತಾ, ಉಷಾ, ಚಂದ್ರಿಕಾ, ಯೋಗೀಶ್ವರಿ, ದಿವ್ಯ ಬೇಬಿ, ಮತ್ತು ದೀಕ್ಷಿತಾ ಅವರು ಶಾಸಕರನ್ನು ಭೇಟಿಯಾದರು.

'ಈಗಾಗಲೇ ಪಿಜಿ ಪದವಿಧರರು ಅತಿಥಿ ಉಪನ್ಯಾಸಕರಾಗಿದ್ದಾರೆ. ನಾವು ಹಲವು ವರ್ಷಗಳಿಂದ ಉಪನ್ಯಾಸ ಮಾಡುತ್ತಿದ್ದು, ಅದನ್ನು ಮುಂದುವರಿಸಬೇಕಾದರೆ ಶಿಕ್ಷಣ ಇಲಾಖೆಯ ಆದೇಶದ ಪ್ರಕಾರ ಕಡ್ಡಾಯವಾಗಿ ಬಿಇಡಿ ಮಾಡಬೇಕಿದೆ. ಈ ಆದೇಶ ಜಾರಿಯಾದರೆ ಹಲವರು ಕೆಲಸ ಕಳೆದುಕೊಳ್ಳಲಿದ್ದೇವೆ. ಹೊಸ ಆದೇಶ ಸಂಕಷ್ಟ ತಂದೊಡ್ಡಿದೆ' ಎಂದು ಹೇಳಿದರು. ಪಿಯು ಅತಿಥಿ ಶಿಕ್ಷಕರಿರುವಲ್ಲಿ ಖಾಯಂ ಶಿಕ್ಷಕರನ್ನು ನಿಯೋಜನೆ ಮಾಡುತ್ತಿದ್ದು, ಇದರಿಂದ ಅತಿಥಿ ಉಪನ್ಯಾಸಕರಿಗೆ ತೊಂದರೆಯಾಗುತ್ತಿದೆ. ಅತಿಥಿ ಉಪನ್ಯಾಕರು ಇರುವಲ್ಲಿ ಖಾಯಂ ಶಿಕ್ಷಕರನ್ನು ನಿಯೋಜನೆ ಮಾಡಬಾರದು ಎಂದು ಮನವಿ ಮಾಡಿದರು. ಅಧಿಕಾರಿಗಳ ಜೊತೆ ಮಾತನಾಡಿದ ಶಾಸಕರು ಅತಿಥಿ ಉಪನ್ಯಾಸಕರಿರುವ ಕಾಲೇಜುಗಳಲ್ಲಿ ಖಾಯಂ ಶಿಕ್ಷಕರನ್ನು ನಿಯೋಜನೆ ಮಾಡದಂತೆ ತಿಳಿಸಿದರು.


ಉದಯವಾಹಿನಿ ಚಿತ್ರ

## ಅನಧಿಕೃತ ಕೋಚಿಂಗ್ ಕೇಂದ್ರಗಳ ಹಾವಳಿ: ಕ್ರಮಕ್ಕೆ ಒತ್ತಾಯ

• ಉದಯವಾಹಿನಿ, ಕುಷ್ಟಗಿ

ತಾಲ್ಲೂಕಿನಲ್ಲಿ ನಾಯಿಕೊಡೆಗಳಂತೆ ನಿಯಮಬಾಹಿರವಾಗಿ ಬೆಳೆಯುತ್ತಿರುವ ಅನಧಿಕೃತ ಕೋಚಿಂಗ್ ಕೇಂದ್ರಗಳು ಹಾಗೂ ಮನೆ ಪಾಠದ ಹಾವಳಿ ನಿಯಂತ್ರಿಸುವಂತೆ ಶಾಲಾ ಶಿಕ್ಷಣ ಇಲಾಖೆಯನ್ನು ಒತ್ತಾಯಿಸಲಾಗಿದೆ.

ಈ ಕುರಿತು ಕಲ್ಯಾಣ ಕರ್ನಾಟಕ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ತಾಲ್ಲೂಕು ಘಟಕದ ಕ್ಷೇತ್ರ ಶಿಕ್ಷಣಾಧಿಕಾರಿಗೆ ದೂರು ಸಲ್ಲಿಸಿದೆ. ಶಿಕ್ಷಣ ಇಲಾಖೆಯ ಅನುಮತಿ ಪಡೆಯದೆ ತಾಲ್ಲೂಕಿನಲ್ಲಿ ಅನಧಿಕೃತ ಕೋಚಿಂಗ್ ಕೇಂದ್ರಗಳು ರಾಜಾರೋಷವಾಗಿ ನಡೆಯುತ್ತಿವೆ.

ಯಾವುದೇ ಸೌಲಭ್ಯಗಳ ಇಲ್ಲದಿದ್ದರೂ ಕೇಂದ್ರಗಳನ್ನು ನಡೆಸುವವರು ದಾಖಲಾಗುವ ಮಕ್ಕಳ ಪಾಲಕರಿಂದ 50ರಿಂದ60-ಸಾವಿರ ವಸೂಲಿ ಮಾಡುತ್ತಿದ್ದಾರೆ. ಇಂಥ ಕೇಂದ್ರಗಳ ಮೇಲೆ ಇಲಾಖೆಯಿಂದ ಯಾವುದೇ ಕ್ರಮ ಇಲ್ಲದಿರುವ ಬಗ್ಗೆ ಅಸಮಾಧಾನ ವ್ಯಕ್ತವಾಗಿದೆ.

ಈ ಕುರಿತು ಬಳಿ ಮಾತನಾಡಿದ ಒಕ್ಕೂಟದ ಪ್ರಮುಖರು 'ಪ್ರತಿವರ್ಷವೂ ಹೊಸ ನಿಯಮಗಳನ್ನು ಹೇರುವ ಇಲಾಖೆ ಅಕ್ರಮವಾಗಿ ನಡೆಯುತ್ತಿರುವ ಕೋಚಿಂಗ್ ಕೇಂದ್ರಗಳ ಮೇಲೆ ಯಾವುದೇ ಕ್ರಮ ಜರುಗಿಸದಿರುವುದು ಅನುಮಾನಗಳಿಗೆ ಎಡೆಮಾಡಿಕೊಡುತ್ತಿದೆ. ಅಷ್ಟೇ ಅಲ್ಲದೆ ಅನೇಕ ಸರ್ಕಾರಿ ಶಾಲೆಗಳ ಶಿಕ್ಷಕರೇ ಬೇನಾಮಿ ಹೆಸರಿನಲ್ಲಿ ಇಂಥ ಕೇಂದ್ರಗಳನ್ನು ನಡೆಸುತ್ತಿರುವುದು ಗುಟ್ಟಾಗಿ ಉಳಿದಿಲ್ಲ.

ಬೇರೆ ಬೇರೆ ಶಾಲೆಗಳಲ್ಲಿ ದಾಖಲಾತಿ ಹೊಂದಿರುವ ಮಕ್ಕಳೇ ಈ ಕೇಂದ್ರಗಳಲ್ಲಿ ಪ್ರವೇಶ ಪಡೆದಿದ್ದು ಸರ್ಕಾರಿ ಶಾಲೆಗಳ ಶಿಕ್ಷಕರು ಗೈರಾಗುವ ಮಕ್ಕಳಿಗೂ ಹಾಜರಾತಿ ನೀಡುವ ಮೂಲಕ ಶಿಕ್ಷಣ ಇಲಾಖೆಯನ್ನು ವಂಚಿಸುತ್ತಿದ್ದಾರೆ' ಎಂದು ದೂರಿದರು.

**ಉಗ್ರ ಪ್ರತಿಭಟನೆ ಅನಿವಾರ್ಯ**

ಇಷ್ಟಾದರೂ ಶಿಕ್ಷಣ ಇಲಾಖೆ ವಿವಿಧ ಹಂತದ ಅಧಿಕಾರಿಗಳು ಅಕ್ರಮಕ್ಕೆ ಕಡಿವಾಣ ಹಾಕಲು ಮುಂದಾಗಿಲ್ಲ. ಈಗಲಾದರೂ ತಾಲ್ಲೂಕಿನಲ್ಲಿರುವ ಅನಧಿಕೃತ ಕೋಚಿಂಗ್ ಕೇಂದ್ರಗಳನ್ನು ಮುಚ್ಚಿಸಲು ಅಧಿಕಾರಿಗಳು ಮುಂದಾಗಬೇಕು. ಇಲ್ಲದಿದ್ದರೆ ಒಕ್ಕೂಟದ ಮೂಲಕ ಉಗ್ರ ಪ್ರತಿಭಟನೆ ನಡೆಸುವುದು ಅನಿವಾರ್ಯವಾಗುತ್ತದೆ ಎಂದು ಹೆಸರು ಹೇಳಲು ಬಯಸದ ಒಕ್ಕೂಟದ ಪ್ರತಿನಿಧಿಗಳು ಹೇಳಿದರು.

## ನಿರ್ವಹಣೆ ಇಲ್ಲದ ಸೇತುವೆ: ವಾಹನ ಸವಾರರಿಗೆ ಸಂಕಷ್ಟ

• ಉದಯವಾಹಿನಿ, ಹರಿಹರ

ನಗರ ಹೊರವಲಯದ ದಾವಣಗೆರೆ ಮಾರ್ಗದ ಅಮರಾವತಿಯ ರೈಲ್ವೆ ಹಳಿಗಳ ಬಳಿ 4 ವರ್ಷಗಳ ಹಿಂದೆ ನಿರ್ಮಿಸಿದ್ದ ಮೇಲ್ಸೇತುವೆ ಹಾಗೂ ಕೆಳ ಸೇತುವೆಗಳು ನಿರ್ವಹಣೆ ಇಲ್ಲದೆ ನಲುಗುತ್ತಿದ್ದು, ವಾಹನ ಸವಾರರಿಗೆ ದುಃಸ್ವಪ್ನವಾಗಿ ಕಾಡುತ್ತಿವೆ. ಬೀರೂರು-ಸಮ್ಮಸಗಿ ಹೆದ್ದಾರಿಯಲ್ಲಿ ರೈಲ್ವೆ ಲೆವೆಲ್ ಕ್ರಾಸಿಂಗ್ ಬರುತ್ತದೆ.

ರೈಲು ಸಂಚರಿಸುವಾಗ ದಿನಕ್ಕೆ ಅನೇಕ ಬಾರಿ ಗೇಟು ಹಾಕಲಾಗುತ್ತದೆ. ಇದರಿಂದ ವಾಹನ ಸವಾರರಿಗೆ ಕಿರಿಕಿರಿ ಉಂಟಾಗುತ್ತಿತ್ತು. ಇದನ್ನು ತಪ್ಪಿಸಲು ಈ ಗೇಟಿನ ಮೇಲ್ಭಾಗದಲ್ಲಿ ರೈಲ್ವೆ ಇಲಾಖೆ ಮತ್ತು ರಾಜ್ಯ ಸರ್ಕಾರದ ಅನುದಾನದಲ್ಲಿ 2016-17ರಲ್ಲಿ ಮೇಲ್ಸೇತುವೆ ಹಾಗೂ ರೈಲ್ವೆ ಹಳಿಗಳ ಅಡಿಯಲ್ಲಿ ಕೆಳ ಸೇತುವೆ ನಿರ್ಮಿಸಲಾಗಿತ್ತು. ಈ ಎರಡೂ ಸೇತುವೆಗಳೂ 2020ರಲ್ಲಿ ವಾಹನ ಸಂಚಾರಕ್ಕೆ ಮುಕ್ತವಾಗಿದ್ದವು. ಈಗ ಇವು ನಿರ್ವಹಣೆಯ ಸಮಸ್ಯೆಯಿಂದ ಬಳಲಿವೆ. ರೈಲ್ವೆ ಇಲಾಖೆಯು ಇವುಗಳ ನಿರ್ವಹಣೆಯನ್ನೇ ಮರೆತಂತಿದೆ.

ಇವು ವಾಹನ ಸಂಚಾರಕ್ಕೆ ಯೋಗ್ಯವಾಗಿಲ್ಲ. ಅರ್ಧ ಗಂಟೆ ಮಳೆ ಬಂದರೆ ಸಾಕು ಕೆಳ ಸೇತುವೆಯಲ್ಲಿ 15 ದಿನಗಳವರೆಗೂ ನೀರು ನಿಂತುಬಿಡುತ್ತದೆ. ಇದರಿಂದ ವಾಹನ ಸಂಚಾರ ದುಸ್ತರವಾಗುತ್ತದೆ. ಮಳೆ ನೀರು ಸರಾಗವಾಗಿ ಹರಿದು ಹೋಗಲು ಯಾವುದೇ ವ್ಯವಸ್ಥೆ ಮಾಡಿಲ್ಲ. ಇಲ್ಲಿನ ರಸ್ತೆಯೂ ಗುಂಡಿಮಯವಾಗಿದೆ.


ಉದಯವಾಹಿನಿ ಚಿತ್ರ

**ಕಳಪೆ ಕಾಮಗಾರಿ**

ಮೇಲ್ಸೇತುವೆಯ ಮೇಲಿನ ರಸ್ತೆಯಲ್ಲಿ ಡಾಂಬರು ಕಿತ್ತು ಹೋಗಿ ಸಾಕಷ್ಟು ಗುಂಡಿಗಳು ಬಿದ್ದಿವೆ. ಸೇತುವೆಯ ಇಕ್ಕೆಲಗಳಲ್ಲಿ ಅಡಿಗಟ್ಟಲೆ ಮಣ್ಣು ಶೇಖರಣೆಗೊಂಡಿದೆ. ಈ ಸೇತುವೆಯ ಇಬ್ಬದಿಯಲ್ಲಿ ನಿರ್ಮಿಸಿರುವ ಸರ್ವಿಸ್ ರಸ್ತೆಗಳೂ ಕಳಪೆ ಕಾಮಗಾರಿಯಿಂದಾಗಿ ಸೊರಗಿವೆ.

## ಸಾಮೂಹಿಕ ಪ್ರಾರ್ಥನೆ: ತ್ಯಾಗ, ಬಲಿದಾನ ಸ್ಮರಣೆ

• ಉದಯವಾಹಿನಿ, ಬೀದರ್

ತ್ಯಾಗ, ಬಲಿದಾನದ ಸಂಕೇತವಾದ ಬಕ್ರೀದ್ ಹಬ್ಬವನ್ನು ಮುಸ್ಲಿಮರು ನಗರ ಸೇರಿದಂತೆ ಜಿಲ್ಲೆಯಾದ್ಯಂತ ಸಡಗರ, ಸಂಭ್ರಮದಿಂದ ಸೋಮವಾರ ಆಚರಿಸಿದರು.ಬಿಳಿವಸ್ತ್ರಗಳನ್ನು ಧರಿಸಿ, ತಲೆಯ ಮೇಲೆ ಟೋಪಿ ಧರಿಸಿದ ನೂರಾರು ಮುಸ್ಲಿಮರು ಈದ್ಗಾ ಮೈದಾನಗಳಿಗೆ ತೆರಳಿ ಸಾಮೂಹಿಕ ಪ್ರಾರ್ಥನೆ ಮಾಡಿ, ನಾಡಿನಲ್ಲಿ ಮಳೆ, ಬೆಳೆಯಾಗಲೆಂದು ಸಮೃದ್ಧಿಗೆ ಪ್ರಾರ್ಥಿಸಿದರು.

ನಗರದ ವಿವಿಧ ಬಡಾವಣೆಗಳಲ್ಲಿ ನೆಲೆಸಿರುವ ಮುಸ್ಲಿಮರು ನಗರದ ಕೇಂದ್ರ ಬಸ್ ನಿಲ್ದಾಣ ಎದುರಿನ ಈದ್ಗಾ ಮೈದಾನಕ್ಕೆ ತೆರಳಿ, ಸಾಮೂಹಿಕ ಪ್ರಾರ್ಥನೆಯಲ್ಲಿ ಪಾಲ್ಗೊಂಡರು. ಮುಸ್ಲಿಂ ಧರ್ಮಗುರುಗಳ ಪ್ರವಚನ ಆಲಿಸಿದರು. ನಗರ ಹೊರವಲಯದ ಶಹಾಪುರ ಗೇಟ್, ಅಮಲಾಪುರ, ಚಿಟ್ಟಾವಾಡಿ ಸೇರಿದಂತೆ ಜಿಲ್ಲೆಯಾದ್ಯಂತ ಇದೇ ದೃಶ್ಯ ಕಂಡು ಬಂತು. ಸಾಮೂಹಿಕ ಪ್ರಾರ್ಥನೆ ನಂತರ ಪರಸ್ಪರ ಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡರು. ಪೌರಾಡಳಿತ ಸಚಿವ ರಹೀಂ ಖಾನ್, ನಗರಸಭೆ ಸದಸ್ಯ ಮೊಹಮ್ಮದ್ ಗೌಸ್ ಸೇರಿದಂತೆ ಮತ್ತಿತರರು ಪಾಲ್ಗೊಂಡಿದ್ದರು. ಇತರೆ ಸಮುದಾಯದ ಗಣ್ಯರು ಮುಸ್ಲಿಮರಿಗೆ ಶುಭ ಕೋರಿದರು. ಪ್ರಾರ್ಥನೆ ಹಿನ್ನೆಲೆಯಲ್ಲಿ ಈದ್ಗಾ ಸುತ್ತ ಬಿಗಿ ಭದ್ರತೆ ಕಲ್ಪಿಸಲಾಗಿತ್ತು. ಪ್ರಾರ್ಥನೆಗೆ ತೆರಳುವ ವೇಳೆ ಹಾಗೂ ಮುಗಿಸಿಕೊಂಡು ಹಿಂತಿರುಗುವ ವೇಳೆ ಪ್ರಮುಖ ರಸ್ತೆಗಳಲ್ಲಿ ಕೆಲಕಾಲ ಸಂಚಾರ ಅಸ್ತವ್ಯಸ್ತಗೊಂಡಿತು.


ಉದಯವಾಹಿನಿ ಚಿತ್ರ

## ಯೋಗಾಸನ ಕ್ರೀಡಾ ಸ್ಪರ್ಧೆ

• ಉದಯವಾಹಿನಿ ಚಿತ್ರದುರ್ಗ

ಎಸ್ ಜಿ ಎಸ್ ಅಂತರರಾಷ್ಟ್ರೀಯ ಯೋಗ ಪ್ರತಿಷ್ಠಾನವು ಕರ್ನಾಟಕ ಸರ್ಕಾರದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಭಾರತ ಸರ್ಕಾರದ ನೆಹರು ಯುವ ಕೇಂದ್ರ, ಹಾಗೂ ಕರ್ನಾಟಕ ಯೋಗಾಸನ ಕ್ರೀಡಾ ಸಂಸ್ಥೆ ಮತ್ತು ವರ್ಲ್ಡ್ ಯೋಗಾಸನ ಇವರುಗಳ ಸಹಕಾರದಲ್ಲಿ ಜುಲೈ ತಿಂಗಳಲ್ಲಿ ಬೆಂಗಳೂರಿನ ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ಯೋಗಾಸನ ಕ್ರೀಡಾ ಸ್ಪರ್ಧೆಯನ್ನು ನಡೆಸುತ್ತಿದೆ. ಈ ಸ್ಪರ್ಧೆಯಲ್ಲಿ ಆಯ್ಕೆಯಾದ ಯೋಗಾಸನ ಕ್ರೀಡಾಪಟುಗಳನ್ನು ಪೆಸಿಫಿಕ್, ಏಶಿಯನ್ ಹಾಗು ಅಂತರರಾಷ್ಟ್ರೀಯ ಯೋಗಾಸನ ಸ್ಪರ್ಧೆಗಳಿಗೆ ಯೋಗಾಸನ ಕ್ರೀಡಾಪಟುಗಳನ್ನು ಆಯ್ಕೆ ಮಾಡಲಾಗುತ್ತದೆ. ಆಸಕ್ತರು 21-06-2024 ಸಂಜೆ 05:00 ಗಂಟೆಯ ಒಳಗಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಅಂತರ ರಾಷ್ಟ್ರೀಯ ಯೋಗಾಸನ ಸಂಯೋಜಕರಾಗಿರುವ ಡಾ. ಎಂ. ನಿರಂಜನ ಮೂರ್ತಿ ರವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ವಿವರಗಳಿಗಾಗಿ ಡಾ. ತಿಮ್ಮಪ್ಪ ನರಸಪ್ಪ - 9900778049 ಇವರನ್ನು ಸಂಪರ್ಕಿಸಲು ಕೋರಲಾಗಿದೆ.

## ಶ್ರದ್ಧಾ-ಭಕ್ತಿಯ ಬಕ್ರೀದ್ ಆಚರಣೆ

• ಉದಯವಾಹಿನಿ, ದಾವಣಗೆರೆ

ತ್ಯಾಗ ಮತ್ತು ಬಲಿದಾನದ ಸಂಕೇತವಾದ ಬಕ್ರೀದ್ ಹಬ್ಬವನ್ನು ಮುಸ್ಲಿಮರು ಸೋಮವಾರ ಜಿಲ್ಲೆಯಲ್ಲಿ ಶ್ರದ್ಧಾ-ಭಕ್ತಿಯಿಂದ ಆಚರಿಸಿದರು. ನಗರದ ಮದೀನ ಮಸೀದಿ ಸಮೀಪದ ಪಿಬಿ ರಸ್ತೆಯಲ್ಲಿ ಸೋಮವಾರ ಬೆಳಿಗ್ಗೆ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಸಕಲ ಜೀವರಾಶಿಗೆ ಒಳಿತಾಗುವಂತೆ ದೇವರಿಗೆ ಮೊರೆಯಿಟ್ಟರು.


ಉದಯವಾಹಿನಿ ಚಿತ್ರ

ಹಬ್ಬದ ಅಂಗವಾಗಿ ಶ್ವೇತವಸ್ತ್ರ ಧರಿಸಿದ ಮುಸ್ಲಿಮರು, ರಂಗು ರಂಗಿನ ಟೋಪಿಗಳನ್ನು ತೊಟ್ಟು ಪ್ರಾರ್ಥನೆಗೆ ಪಿಬಿ ರಸ್ತೆಗೆ ಆಗಮಿಸಿದರು. ಸಾವಿರಾರು ಜನರು ಏಕಕಾಲಕ್ಕೆ ಪ್ರಾರ್ಥನೆ ಸಲ್ಲಿಸುವುದು ಹಬ್ಬದ ವಾಡಿಕೆ. ಮೌಲ್ವಿ, ಧರ್ಮಗುರುಗಳ ಉಪದೇಶ ಆಲಿಸಿ ಹಬ್ಬ ಆಚರಿಸಿದರು. ಪ್ರಾರ್ಥನೆ ಬಳಿಕ ಓರೆಗೆಯವರನ್ನು ಆಲಿಂಗಿಸಿ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು. ಸಾಮೂಹಿಕ ಪ್ರಾರ್ಥನೆ ಅಂಗವಾಗಿ ಪಿಬಿ ರಸ್ತೆಯಲ್ಲಿ ವಾಹನ ಸಂಚಾರ ನಿರ್ಬಂಧಿಸಲಾಗಿತ್ತು. ನಗರದ ಪ್ರಮುಖ ಸ್ಥಳಗಳಲ್ಲಿ ಬಿಗಿ ಪೊಲೀಸ್ ಭದ್ರತೆ ಕಲ್ಪಿಸಲಾಗಿದೆ.

## ಜಿಲ್ಲೆಯಲ್ಲಿ ಸಿಸಿಟಿವಿ ಕ್ಯಾಮೆರಾ ಮ್ಯಾಪಿಂಗ್

• ಉದಯವಾಹಿನಿ ಬೀದರ್

ಅಪರಾಧ ಪ್ರಕರಣಗಳನ್ನು ತ್ವರಿತ ಗತಿಯಲ್ಲಿ ಪತ್ತೆ ಹಚ್ಚಿ ಆರೋಪಿಗಳನ್ನು ಕಂಬಿ ಹಿಂದೆ ಕಳಿಸುವ ಉದ್ದೇಶದಿಂದ ಬೀದರ್ ಜಿಲ್ಲಾ ಪೊಲೀಸರು ಜಿಲ್ಲೆಯಾದ್ಯಂತ 'ಸಿಸಿಟಿವಿ ಕ್ಯಾಮೆರಾಗಳ ಮ್ಯಾಪಿಂಗ್'ಗೆ ಮುಂದಾಗಿದ್ದಾರೆ. ಬೀದರ್ ನಗರದ ಪ್ರಮುಖ ವೃತ್ತಗಳು, ರಸ್ತೆಗಳು, ಆಯಕಟ್ಟಿನ ಸ್ಥಳಗಳು, ಸೂಕ್ಷ್ಮ ಪ್ರದೇಶಗಳಲ್ಲಿ ಬೀದರ್ ಜಿಲ್ಲಾ ಪೊಲೀಸರು 150 ಅತ್ಯಾಧುನಿಕ ಸಿ.ಸಿ.ಟಿ.ವಿ ಕ್ಯಾಮೆರಾಗಳನ್ನು ಅಳವಡಿಸಿದ್ದಾರೆ.



ಉದಯವಾಹಿನಿ ಚಿತ್ರ

ಇದೇ ರೀತಿ ಜಿಲ್ಲೆಯ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲೂ ಮಾಡಿದ್ದಾರೆ. ಇದರೊಂದಿಗೆ ನಗರದ ಪ್ರಮುಖ ವಾಣಿಜ್ಯ ಮಳಿಗೆಗಳು, ಮಾಲ್‌ಗಳು, ಹೋಟೆಲ್‌ಗಳು, ಸಾರ್ವಜನಿಕರ ಮನೆಗಳ ಎದುರು ಅಳವಡಿಸಿರುವ 5,200 ಸಿ.ಸಿ.ಟಿ.ವಿ ಕ್ಯಾಮೆರಾಗಳನ್ನು ಗುರುತಿಸಿ, 'ಮ್ಯಾಪಿಂಗ್' ಮಾಡಿದ್ದಾರೆ. ಈಗ ಒಂದು ಹೆಜ್ಜೆ ಮುಂದೆ ಹೋಗಿರುವ ಬೀದರ್ ಜಿಲ್ಲಾ ಪೊಲೀಸರು, ಸಿ.ಸಿ.ಟಿ.ವಿ ಕ್ಯಾಮೆರಾ ಅಳವಡಿಕೆ ಕುರಿತು ದೊಡ್ಡ ಮಟ್ಟದಲ್ಲಿ ಸಾರ್ವಜನಿಕರಲ್ಲಿ ಅರಿವು ಮೂಡಿಸಿ, ಆ ಕ್ಯಾಮೆರಾಗಳ ಮೂಲಕ ಇಡೀ ಜಿಲ್ಲೆಯ ಚಲನವಲನಗಳ ಮೇಲೆ ನಿಗಾವಹಿಸಿ, ಅಪರಾಧ ಪ್ರಕರಣಗಳಾಗದಂತೆ ನೋಡಿಕೊಳ್ಳಲು ದೊಡ್ಡ ಯೋಜನೆ ರೂಪಿಸಿದ್ದಾರೆ.

# ಶಾಲೆ ಆರಂಭವಾದರೂ ದೊರೆಯದ ಪಠ್ಯಪುಸ್ತಕಗಳು

## ಶಿಕ್ಷಣ ಇಲಾಖೆ ಬೇಜವಾಬ್ದಾರಿಯಿಂದ ವಿದ್ಯಾರ್ಥಿಗಳ ಪರದಾಟ, ಶಾಲೆಗೆ ಬಂದರೂ ದೊರೆತಿಲ್ಲ ಕಲಿಯುವ ಭಾಗ್ಯ

• ಉದಯವಾಹಿನಿ ಜೇವರ್ಗಿ

ಪ್ರತಿ ಬಾರಿಯಂತೆ ಈ ಶೈಕ್ಷಣಿಕ ಸಾಲಿನಲ್ಲಿಯೂ ಸಹ ಸಾಂಪ್ರದಾಯಿಕವಾಗಿ ಎಂದಿನಂತೆ ಶಿಕ್ಷಣ ಇಲಾಖೆ ಶಾಲೆ ಪ್ರಾರಂಭೋತ್ಸವವನ್ನು ಅದ್ದೂರಿಯಾಗಿ ಆಚರಿಸಿ ಮಕ್ಕಳನ್ನು ಶಾಲೆಗೆ ಬರುವಂತೆ ಮನವೊಲಿಸುವ ಪ್ರಯತ್ನವನ್ನು ನಡೆಸಿದೆ. ಶಿಕ್ಷಣ ಇಲಾಖೆ ಪ್ರತಿಬಾರಿ ಒಂದಲ್ಲ ಒಂದು ಅವಾಂತರ ಸೃಷ್ಟಿ ಮಾಡಿಕೊಂಡು ವಿದ್ಯಾರ್ಥಿಗಳ ಪೋಷಕರು ಹಾಗೂ ಶಿಕ್ಷಕರ ಜೊತೆಯಲ್ಲಿ ಆಟ ಆಡುತ್ತಿದ್ದು ಈ ವರ್ಷವೂ ಸಹ ಸರಿಯಾದ ಸಮಯದಲ್ಲಿ ಸರಿಯಾದ ರೀತಿಯಲ್ಲಿ ಪಠ್ಯಪುಸ್ತಕಗಳನ್ನು ವಿತರಿಸದೆ ಮತ್ತೆ ತನ್ನ ಹಳೆ ಚಾಳಿಯನ್ನೇ ಆರಂಭಿಸಿದೆ.

ಮಕ್ಕಳ ಶಾಲೆಗೆ ಕಾಲಿಡುವ ಪರ್ವದಲ್ಲಿಯೇ ವ್ಯವಸ್ಥಿತ ರೀತಿಯಲ್ಲಿ ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಆದರೆ ಪ್ರಸ್ತುತ 2024 - 25ನೇ ಶೈಕ್ಷಣಿಕ ವರ್ಷದ ಶಾಲೆ ಆರಂಭವಾಗಿ 15 ದಿನಗಳು ಕಳೆದರೂ ಸಹ ಪಠ್ಯಕ್ರಮಗಳಂತೆ ಎಲ್ಲಾ ಪ್ರಾಥಮಿಕ ಹಾಗೂ ಪ್ರೌಢ, ಕನ್ನಡ ಮಾಧ್ಯಮ ಮತ್ತು ಆಂಗ್ಲ ಮಾಧ್ಯಮ ಸೇರಿದಂತೆ ಉರ್ದು ಮಾಧ್ಯಮ ಶಾಲೆಗಳಿಗೆ ಸೂಕ್ತ ರೀತಿಯಲ್ಲಿ ಪಠ್ಯ ಪುಸ್ತಕ ಪೂರೈಸಿಲ್ಲ. ಈ ರೀತಿಯಾಗಿ ಪೂರ್ವ ಸಿದ್ಧತೆ ಇಲ್ಲದೆ ಬೇಜವಾಬ್ದಾರಿತನದ ಧೋರಣೆಯನ್ನು ತಾಳಿರುವುದು ನಿಜಕ್ಕೂ ಸೂಚನೀಯ ಸಂಗತಿಯಾಗಿದೆ. ಈ ವರ್ಷವೂ ಸಹ ಎಲ್ಲಾ ಸರಕಾರಿ ಶಾಲೆಗಳು ಹಾಗೂ ಅನುದಾನಿತ, ಅನುದಾನ ರಹಿತ ಶಾಲೆಗಳಿಗೆ ಪೂರೈಸಬೇಕಾದ ಪಠ್ಯ ಪುಸ್ತಕಗಳನ್ನು ತರಗತಿ ವಾರು, ವಿಷಯವಾರು ಮುದ್ರಿಸಿ ಕಳುಹಿಸಿಕೊಡದೆ ಬೇಜವಾಬ್ದಾರಿತನತೋರಿದೆ.

ಇಲಾಖೆಯು ಕೆಲವೊಂದು ವಿಷಯಗಳ ಪಠ್ಯ ಪುಸ್ತಕ ಗಳನ್ನು ನೀಡಿ ಇನ್ನೂ ಕೆಲವು ಪಠ್ಯ ಪುಸ್ತಕಗಳನ್ನು ವಿತರಿಸಿದ ವಿದ್ಯಾರ್ಥಿಗಳು ಪಾಲಕರು ಹಾಗೂ ಶಿಕ್ಷಕರು ಪರದಾಡುವಂತಹ ಸ್ಥಿತಿಯನ್ನು ನಿರ್ಮಾಣ ಮಾಡಿದೆ. ಇದು ಒಂದೇ ವರ್ಷದ ಗೋಳಲ್ಲ ಪ್ರತಿ ವರ್ಷದ ಪರದಾಟ, ಇಲಾಖೆ ಹೀಗೆ ಆಲಸ್ಯತನದ ಧೋರಣೆಯನ್ನು ತಾಳುತ್ತಿದ್ದು ಮತ್ತದೆ ಹಿಂದಿನ ಚಾಳಿಯು ಮುಂದುವರಿಸುತ್ತಿದೆ. ಜವಾಬ್ದಾರಿಯನ್ನು ಹೊಂದಿರುವ ಶಿಕ್ಷಣ ಇಲಾಖೆ ಅಧಿಕಾರಿಗಳ ಕಾರ್ಯವೈಖರಿಗೆ ಹಿಡಿದ ಕನ್ನಡಿಯಾಗಿದೆ.

ಈ ಬಾರಿ ಕರ್ನಾಟಕ ರಾಜ್ಯದಾದ್ಯಂತ ವಿತರಿಸಲಾದ ಪಠ್ಯಪುಸ್ತಕ ವಿತರಣೆಯಲ್ಲಿ ಹಾಗೂ ಇವುಗಳನ್ನು ತಲುಪಿಸುವ ಜವಾಬ್ದಾರಿ ವಹಿಸಿದ ವಿತರಕರು ಈ ರೀತಿ ಅನವಶ್ಯಕ ಸಮಸ್ಯೆಯನ್ನು ಸೃಷ್ಟಿ ಮಾಡುತ್ತಿದ್ದು ಇದಕ್ಕೆ ಹೊಣೆ ಯಾರು? ಎಂದು ಪೋಷಕರು ಪ್ರಶ್ನಿಸುತ್ತಿದ್ದಾರೆ. ದಲಿತ ಸಂಘರ್ಷ ಸಮಿತಿ(ರಿ) ಜೇವರ್ಗಿ ಸಂಚಾಲಕರಾದ ಸಿದ್ದರಾಮ ಕಟ್ಟಿ, ಸೇರಿದಂತೆ ಸಂಚಾಲಕರಾದ ಶಿವಕುಮಾರ್ ಹೆಗಡೆ, ಸಂಗಣ್ಣ ಹೊಸಮನಿ ಹಾಗೂ ಜಟ್ಟೆಪ್ಪ ಮಂದಾರವಾಡ ಮುಂತಾದವರು ಜೇವರ್ಗಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪನವರಿಗೆ ಈ ಕುರಿತು ಮನವಿ ಪತ್ರವನ್ನು ಸಲ್ಲಿಸಿ ತರಗತಿವಾರು ಲಭ್ಯವಿರದ ಪುಸ್ತಕಗಳ ಮಾಹಿತಿಯನ್ನು ನೀಡಿ ಪಠ್ಯ ಪುಸ್ತಕಗಳನ್ನು ಕೂಡಲೇ ಪೂರೈಸಿ ವಿದ್ಯಾರ್ಥಿಗಳಿಗೆ ಅನುಕೂಲ ಮಾಡುವಂತೆ ಕೋರಿದ್ದಾರೆ.

**ಮಕ್ಕಳ ಭವಿಷ್ಯದ ಕಥೆ ಏನು?**


ಸರಿಯಾದ ಸಮಯಕ್ಕೆ ಮಾಹಿತಿ ನೀಡಿ ಪುಸ್ತಕಗಳನ್ನು ತರಿಸಿಕೊಳ್ಳದ ಸ್ಥಳೀಯ ಶಿಕ್ಷಣಾಧಿಕಾರಿಗಳ ಹಾಗೂ ಶಿಕ್ಷಣ ಸಂಯೋಜಕರ ಮಧ್ಯದಲ್ಲಿನ ಸಂಯೋಜನೆ ಕೊರತೆ ಇದಕ್ಕೆ ಕಾರಣವಾಗಿದೆ. ಹೀಗಾದರೆ ಮಕ್ಕಳ ಭವಿಷ್ಯದ ಕಥೆ ಏನು? ಗುರುತರವಾದ ಜವಾಬ್ದಾರಿಯನ್ನು ಹೊಂದಿರುವ ಇಲಾಖೆ ಈ ರೀತಿಯಾಗಿ ನಿರ್ಲಕ್ಷ್ಯತನದ ಧೋರಣೆ ತೋರಿದರೆ ಹೇಗೆ ? ಎಂದು ಸಾರ್ವಜನಿಕರು ಪ್ರಶ್ನೆ ಮಾಡುತ್ತಿದ್ದಾರೆ.


ಉದಯವಾಹಿನಿ ಚಿತ್ರ

**ಧ್ವನಿ ಎತ್ತದಿರುವುದು ನಿಜಕ್ಕೂ ಸೊಚನೀಯ ಸಂಗತಿ**

ಈ ಕುರಿತು ಯಾವುದೇ ಪ್ರಗತಿಪರ ಸಂಘಟನೆಗಳು ಹಾಗೂ ವಿಚಾರವಂತರು ಮಾತನಾಡದೆ ಮೌನ ವಹಿಸಿರುವುದು ಸರಿಯಲ್ಲ. ಅಲ್ಲದೆ ಅನೇಕ ಶಾಲಾ ಶಿಕ್ಷಕರ ಸಂಘಟನೆಗಳು ಖಾಸಗಿ ಶಾಲೆ ಸಂಸ್ಥೆಗಳು ಒಕ್ಕೂಟದವರು ಹಾಗೂ ಕನ್ನಡ ಪರ ಸಂಘಟನೆಗಳು ಸೇರಿದಂತೆ ಸ್ವಯಂಘೋಷಿತ ಸಂಘಟಕರು ಧ್ವನಿ ಎತ್ತದಿರುವುದು ನಿಜಕ್ಕೂ ಸೂಚನೆಯ ಸಂಗತಿಯಾಗಿದೆ.

**ಪ್ರತಿ ವರ್ಷದ ಪರದಾಟ**






## ಮೂವರು ಎದುರಾಳಿಗಳ ವಿರುದ್ಧ ಭಾರತದ ದಾಖಲೆ ಹೇಗಿದೆ?

ಸೂಪರ್-8 ಪಂದ್ಯದ ನೆಪದಲ್ಲಿ ಭಾರತ ಮತ್ತು ಅಫ್ಘಾನಿಸ್ತಾನ 9ನೇ ಬಾರಿ ಟಿ20 ಕ್ರಿಕೆಟ್‌ನಲ್ಲಿ ಮುಖಾಮುಖಿಯಾಗಲಿವೆ. ಭಾರತ ಇದಕ್ಕೂ ಮುನ್ನ ಆಡಿದ 8 ಪಂದ್ಯಗಳಲ್ಲಿ 6ರಲ್ಲಿ ಗೆಲುವು ಸಾಧಿಸಿದೆ. 1 ಪಂದ್ಯ ಟೈ ಆಗಿದ್ದರೆ 1 ಪಂದ್ಯ ಫಲಿತಾಂಶವಿಲ್ಲದೆ ಕೊನೆಗೊಂಡಿದೆ. ಅಂದರೆ ಅಫ್ಘಾನಿಸ್ತಾನ ತಂಡ ಇದುವರೆಗೆ ಭಾರತದ ವಿರುದ್ಧ ಯಾವುದೇ ಟಿ20 ಪಂದ್ಯವನ್ನು ಗೆದ್ದಿಲ್ಲ. ಭಾರತ ತನ್ನ ಎರಡನೇ ಪಂದ್ಯದಲ್ಲಿ ಬಾಂಗ್ಲಾದೇಶವನ್ನು ಎದುರಿಸಲಿದೆ. ಇದು ಟಿ20 ಕ್ರಿಕೆಟ್‌ನಲ್ಲಿ ಉಭಯ ತಂಡಗಳ 14ನೇ ಮುಖಾಮುಖಿಯಾಗಿದೆ. ಭಾರತ ಈ ಮೊದಲು ಆಡಿದ 13 ಪಂದ್ಯಗಳಲ್ಲಿ 12 ಪಂದ್ಯಗಳಲ್ಲಿ ಗೆದ್ದಿದೆ. ಉಳಿದಂತೆ 1 ಪಂದ್ಯದಲ್ಲಿ ಬಾಂಗ್ಲಾದೇಶ ಗೆದ್ದಿದೆ.

ಮೂರನೇ ಪಂದ್ಯದಲ್ಲಿ ಭಾರತ, ಆಸ್ಟ್ರೇಲಿಯಾವನ್ನು ಎದುರಿಸುತ್ತಿದೆ. ಇದು ಟಿ20 ಕ್ರಿಕೆಟ್‌ನಲ್ಲಿ ಉಭಯ ತಂಡಗಳ 32ನೇ ಮುಖಾಮುಖಿಯಾಗಿದೆ. ಇದಕ್ಕೂ ಮುನ್ನ ಆಡಿದ 31 ಪಂದ್ಯಗಳಲ್ಲಿ ಭಾರತ 19 ಪಂದ್ಯಗಳನ್ನು ಗೆದ್ದಿದ್ದರೆ, ಆಸ್ಟ್ರೇಲಿಯಾ 11 ಪಂದ್ಯಗಳನ್ನು ಗೆದ್ದಿದೆ. 1 ಪಂದ್ಯ ಫಲಿತಾಂಶವಿಲ್ಲದೆ ಅಂತ್ಯಗೊಂಡಿದೆ. ಟಿ20 ವಿಶ್ವಕಪ್ ಪಿಚ್‌ನಲ್ಲಿ ಭಾರತ ಮತ್ತು ಆಸ್ಟ್ರೇಲಿಯಾ ನಡುವೆ ನಡೆದ ಪಂದ್ಯದ ಬಗ್ಗೆ ನಾವು ಮಾತನಾಡುವುದಾದರೆ, ಇಲ್ಲಿಯವರೆಗೆ ನಡೆದ 5 ಮುಖಾಮುಖಿಗಳಲ್ಲಿ ಟೀಮ್ ಇಂಡಿಯಾ ಇಲ್ಲಿಯೂ 3-2 ರಿಂದ ಮೇಲುಗೈ ಸಾಧಿಸಿದೆ. ಆದಾಗ್ಯೂ, ಆಸ್ಟ್ರೇಲಿಯಾ ವಿರುದ್ಧದ ಪಂದ್ಯದಲ್ಲಿ ಭಾರತದ ವಿರುದ್ಧ ಹೋಗುವ ಒಂದು ವಿಷಯವೆಂದರೆ ಅದು ಈ ಪಂದ್ಯ ನಡೆಯುತ್ತಿರುವುದು ವೆಸ್ಟ್ ಇಂಡೀಸ್ ನೆಲದಲ್ಲಿ.

ವೆಸ್ಟ್ ಇಂಡೀಸ್‌ನಲ್ಲಿ ಎರಡೂ ತಂಡಗಳು ಟಿ20 ಪಂದ್ಯದಲ್ಲಿ ಮುಖಾಮುಖಿಯಾಗುತ್ತಿರುವುದು ಇದು ಎರಡನೇ ಬಾರಿ. ಇದಕ್ಕೂ ಮುನ್ನ ಆಡಿದ ಏಕೈಕ ಪಂದ್ಯದಲ್ಲಿ ಆಸ್ಟ್ರೇಲಿಯಾ ಗೆಲುವು ಸಾಧಿಸಿತ್ತು. ಅಂದರೆ ಭಾರತ ಸೋಲನ್ನು ಎದುರಿಸಬೇಕಾಯಿತು. ಹೀಗಾಗಿ ವಿಂಡೀಸ್ ನಾಡಲ್ಲಿ ಆಸೀಸ್ ವಿರುದ್ಧ ಗೆಲುವಿನ ಖಾತೆ ತೆರೆಯಲು ಭಾರತ ಎದುರು ನೋಡುತ್ತಿದೆ.

# ಕೆಟ್ಟ ದಾಖಲೆ ಬರೆದ ಆಸ್ಟ್ರೇಲಿಯಾ!

## ಸ್ಕಾಟ್ಲೆಂಡ್ ವಿರುದ್ಧ ಪಂದ್ಯದಲ್ಲಿ ಬರೋಬ್ಬರಿ 6 ಕ್ಯಾಚ್‌ಗಳನ್ನು ಕೈಚೆಲ್ಲಿದ ಆಸೀಸ್ ಆಟಗಾರರು

ವಿಶ್ವ ಕ್ರಿಕೆಟ್‌ನಲ್ಲಿ ಅತ್ಯುತ್ತಮ ಫೀಲ್ಡಿಂಗ್ ಮಾಡುವ ತಂಡಗಳಲ್ಲಿ ಆಸ್ಟ್ರೇಲಿಯಾ ತಂಡ ಅಗ್ರಪಂಕ್ತಿಯಲ್ಲಿ ನಿಲ್ಲುತ್ತದೆ. ಆದರೆ ಇದೇ ತಂಡ ಸ್ಕಾಟ್ಲೆಂಡ್ ವಿರುದ್ಧದ ಪಂದ್ಯದಲ್ಲಿ ಒಂದಲ್ಲ, ಎರಡಲ್ಲ ಬರೋಬ್ಬರಿ 6 ಕ್ಯಾಚ್‌ಗಳನ್ನು ಕೈಚೆಲ್ಲಿತು. ವೀಕ್ಷಕ ವಿವರಣೆಗಾರರು ಕೂಡ ಆಸೀಸ್ ಆಟಗಾರರ ಈ ಕಳಪೆ ಫೀಲ್ಡಿಂಗ್ ನೋಡಿ ಅಚ್ಚರಿಗೊಂಡರು.



ಆಸ್ಟ್ರೇಲಿಯಾ ತಂಡದ ಈ ಕಳಪೆ ಫೀಲ್ಡಿಂಗ್

ಟಿ20 ವಿಶ್ವಕಪ್‌ನಲ್ಲಿ ಆಸ್ಟ್ರೇಲಿಯಾ ಮತ್ತು ಸ್ಕಾಟ್ಲೆಂಡ್ ನಡುವೆ ಜೂನ್ 16 ರ ಭಾನುವಾರದಂದು ಬಹಳ ಮಹತ್ವದ ಪಂದ್ಯ ನಡೆಯಿತು. ಸೇಂಟ್ ಲೂಸಿಯಾದಲ್ಲಿ ನಡೆದ ಈ ಪಂದ್ಯದಲ್ಲಿ ನಿರೀಕ್ಷೆಯಂತೆ ಆಸ್ಟ್ರೇಲಿಯಾ ತಂಡ, ಸ್ಕಾಟ್ಲೆಂಡ್ ತಂಡವನ್ನು ಮಣಿಸಿ ಅಜೇಯ ತಂಡವಾಗಿ ಸೂಪರ್ 8 ಸುತ್ತಿಗೆ ಅರ್ಹತೆ ಪಡೆಯಿತು. ಇದಲ್ಲದೆ ಆಸ್ಟ್ರೇಲಿಯಾ ತಾನು ಗೆಲ್ಲುವುದಲ್ಲದೆ, ಈ ಗೆಲುವಿನೊಂದಿಗೆ ಇಂಗ್ಲೆಂಡ್ ತಂಡವನ್ನು ಸಹ ಸೂಪರ್ 8 ಸುತ್ತಿಗೆ ಕೊಂಡೊಯ್ಯಿತು. ಆದರೆ ಆಸ್ಟ್ರೇಲಿಯಾ ತಂಡ, ಸ್ಕಾಟ್ಲೆಂಡ್ ವಿರುದ್ಧದ ತನ್ನ ಕೊನೆಯ ಗುಂಪು ಹಂತದ ಪಂದ್ಯದಲ್ಲಿ ಟಿ20 ವಿಶ್ವಕಪ್ ಇತಿಹಾಸದಲ್ಲೇ ಬೇಡದ ಕೆಟ್ಟ ದಾಖಲೆಯೊಂದನ್ನು ತನ್ನ ಖಾತೆಗೆ ಹಾಕಿಕೊಂಡಿದೆ. ಪಂದ್ಯದಲ್ಲಿ ಆಸ್ಟ್ರೇಲಿಯಾದ ನಾಯಕ ಮಿಚೆಲ್ ಮಾರ್ಷ್ ಟಾಸ್ ಗೆದ್ದು ಮೊದಲು ಫೀಲ್ಡಿಂಗ್ ಮಾಡಲು ನಿರ್ಧರಿಸಿದರು. ಆದರೆ ತಂಡದ ಆಟಗಾರರ ಕಳಪೆ ಫೀಲ್ಡಿಂಗ್ ಇಡೀ ಕ್ರಿಕೆಟ್ ಲೋಕವನ್ನೇ ಅಚ್ಚರಿಗೊಳಿಸಿತು. ಏಕೆಂದರೆ ವಿಶ್ವ ಕ್ರಿಕೆಟ್‌ನಲ್ಲಿ ಅತ್ಯುತ್ತಮ ಫೀಲ್ಡಿಂಗ್ ಮಾಡುವ ತಂಡಗಳಲ್ಲಿ ಆಸ್ಟ್ರೇಲಿಯಾ ತಂಡ ಅಗ್ರಪಂಕ್ತಿಯಲ್ಲಿ ನಿಲ್ಲುತ್ತದೆ.

ಆದರೆ ಇದೇ ತಂಡ ಸ್ಕಾಟ್ಲೆಂಡ್ ವಿರುದ್ಧದ ಪಂದ್ಯದಲ್ಲಿ ಒಂದಲ್ಲ, ಎರಡಲ್ಲ ಬರೋಬ್ಬರಿ 6 ಕ್ಯಾಚ್‌ಗಳನ್ನು ಕೈಚೆಲ್ಲಿತು. ವೀಕ್ಷಕ ವಿವರಣೆಗಾರರು ಕೂಡ ಆಸೀಸ್ ಆಟಗಾರರ ಈ ಕಳಪೆ ಫೀಲ್ಡಿಂಗ್ ನೋಡಿ ಅಚ್ಚರಿಗೊಂಡರು. ಅಭಿಮಾನಿಗಳಿಗೂ ಕೂಡ ಇದು ಆಸ್ಟ್ರೇಲಿಯಾ ಬೇಕಂತಲೇ ಮಾಡುತ್ತಿರುವ ಕೆಲಸ ಎಂದು ಭಾಸವಾಗತೊಡಗಿತು. ಆಸ್ಟ್ರೇಲಿಯಾ ತಂಡದ ಈ ಕಳಪೆ ಫೀಲ್ಡಿಂಗ್ ಅನ್ನು ಸದುಪಯೋಗಪಡಿಸಿಕೊಂಡ ಸ್ಕಾಟ್ಲೆಂಡ್‌ನ ಬ್ಯಾಟ್ಸ್‌ಮನ್‌ಗಳು ಬರೋಬ್ಬರಿ 180 ರನ್‌ಗಳನ್ನು ಹಾಕಿದರು. ತಂಡದ ಪರ ಅದ್ಭುತ ಇನ್ನಿಂಗ್ಸ್ ಆಡಿದ ಬ್ರಾಂಡನ್ ಮೆಕ್‌ಮುಲ್ಲನ್ 34 ಎಸೆತಗಳಲ್ಲಿ 60 ರನ್ ಗಳಿಸಿದರು. ನಾಯಕ ರಿಚಿ ಬೆರಿಂಗ್ಟನ್ ಕೂಡ 31 ಎಸೆತಗಳಲ್ಲಿ 42 ರನ್ ಬಾರಿಸಿದರು.

ಆಸ್ಟ್ರೇಲಿಯಾ ಆರಂಭದಲ್ಲೇ ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿತು. ಆಸ್ಟ್ರೇಲಿಯಾದ 3 ವಿಕೆಟ್‌ಗಳು ಕೇವಲ 60 ರನ್‌ಗಳಿಗೆ ಪತನಗೊಂಡವು. ಆಸ್ಟ್ರೇಲಿಯ ತಂಡ 13 ಓವರ್‌ಗಳಲ್ಲಿ 92 ರನ್ ಗಳಿಸಲಷ್ಟೇ ಶಕ್ತವಾಗಿತ್ತು. ಇಲ್ಲಿಂದ 13ರ ಆಸುಪಾಸಿನ ಎಕಾನಮಿಯೊಂದಿಗೆ ತಂಡ 7 ಓವರ್‌ಗಳಲ್ಲಿ 89 ರನ್ ಗಳಿಸಬೇಕಿತ್ತು. ಇದಾದ ನಂತರ ಟ್ರಾವಿಸ್ ಹೆಡ್ 14ನೇ ಓವರ್‌ನಲ್ಲಿ ಸತತ 3 ಸಿಕ್ಸರ್‌ಗಳನ್ನು ಬಾರಿಸುವ ಮೂಲಕ ತಂಡಕ್ಕೆ ವೇಗವನ್ನು ನೀಡಿದರು. ಆದರೆ ಆ ಬಳಿಕ ಅವರು ಔಟಾದರು. ಮಾರ್ಕಸ್ ಸ್ಟೊಯಿನಿಸ್ 29 ಎಸೆತಗಳಲ್ಲಿ 59 ರನ್‌ಗಳ ಬಿರುಸಿನ ಇನ್ನಿಂಗ್ಸ್‌ನೊಂದಿಗೆ ಆಸ್ಟ್ರೇಲಿಯಾವನ್ನು ಗೆಲುವಿನತ್ತ ಕೊಂಡೊಯ್ದರು.

### 6 ಕ್ಯಾಚ್ ಡ್ರಾಪ್

**ಈ ಪಂದ್ಯಕ್ಕೂ ಮುನ್ನ ಆಸ್ಟ್ರೇಲಿಯಾದ ವೇಗದ ಬೌಲರ್ ಜೋಶ್ ಹೇಜಲ್ವುಡ್, ಇಂಗ್ಲೆಂಡ್ ತಂಡವನ್ನು ಟೂರ್ನಿಯಿಂದ ಹೊರಹಾಕಲು ತಮ್ಮ ತಂಡವು ಸ್ಕಾಟ್ಲೆಂಡ್ ವಿರುದ್ಧ ಸೋಲುವ ಬಗ್ಗೆ ಯೋಚಿಸಬಹುದು ಎಂದು ಹೇಳಿದ್ದರು. ಹೀಗಿರುವಾಗ ತಂಡದ ಆಟಗಾರರು ಕ್ಯಾಚ್‌ಗಳನ್ನು ಬಿಡುವುದನ್ನು ನೋಡಿದ ಅಭಿಮಾನಿಗಳಲ್ಲಿ ಉದ್ದೇಶಪೂರ್ವಕವಾಗಿ ಕ್ಯಾಚ್‌ಗಳನ್ನು ಕೈಬಿಡುತ್ತಿದ್ದಾರೆ ಎಂಬ ಅನುಮಾನ ಮೂಡತೊಡಗಿತು. ಅಲ್ಲದೆ ಫೀಲ್ಡಿಂಗ್ ಸಮಯದಲ್ಲಿ, ಆಸ್ಟ್ರೇಲಿಯಾ ಒಟ್ಟು 6 ಕ್ಯಾಚ್‌ಗಳನ್ನು ಬಿಟ್ಟುಕೊಡುವ ಮೂಲಕ ನಾಚಿಕೆಗೇಡಿನ ದಾಖಲೆಯನ್ನು ಮಾಡಿದೆ. ಇದೀಗ ಟಿ20 ವಿಶ್ವಕಪ್‌ನಲ್ಲಿ ಅತಿ ಹೆಚ್ಚು ಕ್ಯಾಚ್‌ಗಳನ್ನು ಕೈಬಿಟ್ಟ ತಂಡ ಎಂಬ ಕುಖ್ಯಾತಿಗೆ ಆಸ್ಟ್ರೇಲಿಯಾ ಪಾತ್ರವಾಗಿದೆ.**




## ಸೂಪರ್-8 ಸುತ್ತಿನಲ್ಲಿ 3 ತಂಡಗಳನ್ನು ಎದುರಿಸಲಿದೆ

ಭಾರತ ತಂಡ ಸೂಪರ್-8ರ ಗುಂಪು-1ರಲ್ಲಿದೆ. ಇಲ್ಲಿ ಟೀಂ ಇಂಡಿಯಾ ಬಾಂಗ್ಲಾದೇಶ, ಅಫ್ಘಾನಿಸ್ತಾನ ಮತ್ತು ಆಸ್ಟ್ರೇಲಿಯಾ ವಿರುದ್ಧ ಪಂದ್ಯಗಳನ್ನು ಆಡಲಿದೆ. ಟೀಂ ಇಂಡಿಯಾ ತನ್ನ ಮೊದಲ ಪಂದ್ಯವನ್ನು ಜೂನ್ 20 ರಂದು ಅಫ್ಘಾನಿಸ್ತಾನ ವಿರುದ್ಧ, ಜೂನ್ 22 ರಂದು ಬಾಂಗ್ಲಾದೇಶ ವಿರುದ್ಧ ಮತ್ತು ಜೂನ್ 24 ರಂದು ಆಸ್ಟ್ರೇಲಿಯಾ ವಿರುದ್ಧ ಆಡಲಿದೆ.

ಬಾಂಗ್ಲಾದೇಶ ಮತ್ತು ನೇಪಾಳ ನಡುವಿನ ಪಂದ್ಯದ ನಂತರ, ಟಿ20 ವಿಶ್ವಕಪ್‌ನಲ್ಲಿ ಸೂಪರ್-8 ಸುತ್ತಿನ ಬಗ್ಗೆ ಚಿತ್ರಣ ಸ್ಪಷ್ಟವಾಗಿದೆ. ಈ ಪಂದ್ಯದ ನಂತರ, ಸೂಪರ್ -8 ಆಡುವ ಎಲ್ಲಾ ತಂಡಗಳನ್ನು ನಿರ್ಧರಿಸಲಾಗಿದೆ. ನೇಪಾಳವನ್ನು ಸೋಲಿಸುವ ಮೂಲಕ ಬಾಂಗ್ಲಾದೇಶ ಸೂಪರ್-8 ಗೆ ಅರ್ಹತೆ ಪಡೆದಿದೆ. ಈ ಬಾರಿ ವಿಶ್ವಕಪ್‌ನಲ್ಲಿ 20 ತಂಡಗಳು ಭಾಗವಹಿಸಿದ್ದು, ಹಲವು ತಂಡಗಳು ಮೊದಲ ಬಾರಿಗೆ ವಿಶ್ವಕಪ್ ಆಡಿದ್ದವು. ಈ 20 ತಂಡಗಳಲ್ಲಿ 12 ತಂಡಗಳು ಮೊದಲ ಸುತ್ತಿನಲ್ಲೇ ತಮ್ಮ ಪ್ರಯಾಣ ಮುಗಿಸಿದರೆ, ಇನ್ನು ಉಳಿದ 8 ತಂಡಗಳ ನಡುವೆ ಸೂಪರ್-8 ಪಂದ್ಯಗಳು ನಡೆಯಲಿವೆ. ಸೂಪರ್-8ರ ಎಲ್ಲಾ ಪಂದ್ಯಗಳು ವೆಸ್ಟ್ ಇಂಡೀಸ್‌ನಲ್ಲಿ ನಡೆಯಲಿವೆ.

**8 ತಂಡಗಳನ್ನು 2 ಗುಂಪುಗಳಾಗಿ ವಿಂಗಡಣೆ**

ಇದೀಗ ಭಾರತ, ಆಸ್ಟ್ರೇಲಿಯಾ, ದಕ್ಷಿಣ ಆಫ್ರಿಕಾ, ಅಮೆರಿಕ, ವೆಸ್ಟ್ ಇಂಡೀಸ್, ಅಫ್ಘಾನಿಸ್ತಾನ, ಇಂಗ್ಲೆಂಡ್, ಬಾಂಗ್ಲಾದೇಶ ತಂಡಗಳು ಸೂಪರ್-8ಸುತ್ತಿಗೆ ಅರ್ಹತೆ ಪಡೆದಿವೆ. ಈ ಎಲ್ಲಾ ತಂಡಗಳನ್ನು ತಲಾ 4ರಂತೆ ಎರಡು ಗುಂಪುಗಳಾಗಿ ವಿಂಗಡಿಸಲಾಗಿದೆ.

ಮೊದಲ ಗುಂಪು: ಭಾರತ, ಆಸ್ಟ್ರೇಲಿಯಾ, ಬಾಂಗ್ಲಾದೇಶ ಮತ್ತು ಅಫ್ಘಾನಿಸ್ತಾನ.
ಎರಡನೇ ಗುಂಪು: ಯುಎಸ್ಎ, ಇಂಗ್ಲೆಂಡ್, ದಕ್ಷಿಣ ಆಫ್ರಿಕಾ, ವೆಸ್ಟ್ ಇಂಡೀಸ್.

**ಭಾರತದ ವೇಳಾಪಟ್ಟಿ:** ಭಾರತ ತಂಡ ಸೂಪರ್-8ರ ಗುಂಪು-1ರಲ್ಲಿದೆ. ಇಲ್ಲಿ ಟೀಂ ಇಂಡಿಯಾ ಬಾಂಗ್ಲಾದೇಶ, ಅಫ್ಘಾನಿಸ್ತಾನ ಮತ್ತು ಆಸ್ಟ್ರೇಲಿಯಾ ವಿರುದ್ಧ ಪಂದ್ಯಗಳನ್ನು ಆಡಲಿದೆ. ಟೀಂ ಇಂಡಿಯಾ ತನ್ನ ಮೊದಲ ಪಂದ್ಯವನ್ನು ಜೂನ್ 20 ರಂದು ಅಫ್ಘಾನಿಸ್ತಾನ ವಿರುದ್ಧ, ಜೂನ್ 22 ರಂದು ಬಾಂಗ್ಲಾದೇಶ ವಿರುದ್ಧ ಮತ್ತು ಜೂನ್ 24 ರಂದು ಆಸ್ಟ್ರೇಲಿಯಾ ವಿರುದ್ಧ ಆಡಲಿದೆ.

ಭಾರತ ವಿರುದ್ಧ ಅಫ್ಘಾನಿಸ್ತಾನ (ಜೂನ್ 20), ರಾತ್ರಿ 8 ಗಂಟೆಗೆ ಆರಂಭ
ಭಾರತ ವಿರುದ್ಧ ಬಾಂಗ್ಲಾದೇಶ (ಜೂನ್ 22), ರಾತ್ರಿ 8 ಗಂಟೆಗೆ ಆರಂಭ
ಭಾರತ ವಿರುದ್ಧ ಆಸ್ಟ್ರೇಲಿಯಾ (ಜೂನ್ 24), ರಾತ್ರಿ 8 ಗಂಟೆಗೆ ಆರಂಭ

**ಟೀಂ ಇಂಡಿಯಾದ ಅಜೇಯ ಓಟ**

ಈ ಟೂರ್ನಿಯಲ್ಲಿ ಟೀಂ ಇಂಡಿಯಾ ಇದುವರೆಗೆ ಅದ್ಭುತ ಪ್ರದರ್ಶನ ನೀಡಿದೆ. ರೋಹಿತ್ ಪಡೆ ಲೀಗ್ ಸುತ್ತಿನಲ್ಲಿ ಆಡಿದ ಎಲ್ಲಾ ಪಂದ್ಯಗಳನ್ನು ಗೆದ್ದಿದೆ. ಆದರೆ ಟೀಂ ಇಂಡಿಯಾದ ಒಂದು ಪಂದ್ಯ ಮಾತ್ರ ಮಳೆಯಿಂದಾಗಿ ರದ್ದಾಗಬೇಕಾಯಿತು. ಇದೀಗ ಟೀಂ ಇಂಡಿಯಾ ಸೂಪರ್-8 ಪಂದ್ಯಗಳಲ್ಲೂ ತನ್ನ ಅಜೇಯ ಓಟವನ್ನು ಮುಂದುವರೆಸಲಿ ಎಂಬುದು ಅಭಿಮಾನಿಗಳ ಆಶಯವಾಗಿದೆ.

# ನಂದಿನಿ ಪ್ರಾಯೋಜಕತ್ವದ ತಂಡದ ವಿರುದ್ಧ ಪಾಕ್‌ಗೆ ಪ್ರಯಾಸದ ಗೆಲುವು

ಟಿ20 ವಿಶ್ವಕಪ್‌ನಲ್ಲಿ ತನ್ನ ಲೀಗ್ ಸುತ್ತಿನ ಕೊನೆಯ ಪಂದ್ಯವನ್ನಾಡಿದ ಪಾಕಿಸ್ತಾನ ತಂಡ, ಐರ್ಲೆಂಡ್ ತಂಡವನ್ನು 3 ವಿಕೆಟ್‌ಗಳಿಂದ ಮಣಿಸಿದೆ. ಇದರೊಂದಿಗೆ ತನ್ನ ಟಿ20 ವಿಶ್ವಕಪ್ ಪಯಣವನ್ನು ಮುಗಿಸಿದೆ. ವಾಸ್ತವವಾಗಿ ಲೀಗ್ ಸುತ್ತಿನ ಮೊದಲ ಎರಡು ಪಂದ್ಯಗಳನ್ನು ಸೋತಿದ್ದ ಪಾಕಿಸ್ತಾನ ತಂಡ ಆರಂಭದಲ್ಲೇ ಟಿ20 ವಿಶ್ವಕಪ್‌ನಿಂದ ಹೊರಬಿದ್ದಿತ್ತು.

ಟಿ20 ವಿಶ್ವಕಪ್‌ನಲ್ಲಿ ತನ್ನ ಲೀಗ್ ಸುತ್ತಿನ ಕೊನೆಯ ಪಂದ್ಯವನ್ನಾಡಿದ ಪಾಕಿಸ್ತಾನ ತಂಡ, ಐರ್ಲೆಂಡ್ ತಂಡವನ್ನು 3 ವಿಕೆಟ್‌ಗಳಿಂದ ಮಣಿಸಿದೆ. ಇದರೊಂದಿಗೆ ತನ್ನ ಟಿ20 ವಿಶ್ವಕಪ್ ಪಯಣವನ್ನು ಮುಗಿಸಿದೆ. ವಾಸ್ತವವಾಗಿ ಲೀಗ್ ಸುತ್ತಿನ ಮೊದಲ ಎರಡು ಪಂದ್ಯಗಳನ್ನು ಸೋತಿದ್ದ ಪಾಕಿಸ್ತಾನ ತಂಡ ಆರಂಭದಲ್ಲೇ ಟಿ20 ವಿಶ್ವಕಪ್‌ನಿಂದ ಹೊರಬಿದ್ದಿತ್ತು. ಹೀಗಾಗಿ ಇಂದು ಔಪಚಾರಿಕ ಪಂದ್ಯವನ್ನಾಡಿದ ಬಾಬರ್ ಪಡೆ, ಈ ಪಂದ್ಯದಲ್ಲೂ ಪ್ರಯಾಸದ ಗೆಲುವು ದಾಖಲಿಸಿದೆ. ಪಾಕಿಸ್ತಾನ ವಿರುದ್ಧದ ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಐರ್ಲೆಂಡ್ ತಂಡ ನಿಗದಿತ 20 ಓವರ್‌ಗಳಲ್ಲಿ 9 ವಿಕೆಟ್ ನಷ್ಟಕ್ಕೆ 106 ರನ್ ಗಳಿಸಿತ್ತು. ಈ ಗುರಿ ಬೆನ್ನಟ್ಟಿದ ಪಾಕಿಸ್ತಾನ ತಂಡ 19ನೇ ಓವರ್‌ನಲ್ಲಿ ಗೆಲುವಿನ ದಡ ಮುಟ್ಟಿತು.




ಟೂರ್ನಿಯಿಂದ ಪಾಕ್ ಔಟ್

**ಗೆಲುವಿನ ದಡ ಮುಟ್ಟಿಸಿದ ಬಾಬರ್**

ಫ್ಲೋರಿಡಾದಲ್ಲಿ ನಡೆದ ಈ ಪಂದ್ಯದಲ್ಲಿ ಪಾಕಿಸ್ತಾನ ತಂಡಕ್ಕೆ 107 ರನ್‌ಗಳ ಗುರಿ ಬೆನ್ನಟ್ಟುವುದು ಸಹ ಕಷ್ಟಕರವಾಗಿತ್ತು

### ಟಿ20 ವಿಶ್ವಕಪ್‌ನಿಂದ ಔಟ್

**ತಂಡದ ಪರ ನಾಯಕ ಬಾಬರ್ 34 ಎಸೆತಗಳಲ್ಲಿ ಎರಡು ಬೌಂಡರಿಗಳ ನೆರವಿನಿಂದ 32 ರನ್ ಗಳಿಸಿ ಅಜೇಯರಾಗಿ ಉಳಿದರು. ಅದೇ ಸಮಯದಲ್ಲಿ, ಶಾಹೀನ್ ಅಫ್ರಿದಿ ಐದು ಎಸೆತಗಳಲ್ಲಿ ಎರಡು ಸಿಕ್ಸರ್‌ಗಳ ಸಹಾಯದಿಂದ 13 ರನ್‌ಗಳ ಅಜೇಯ ಇನ್ನಿಂಗ್ಸ್ ಆಡಿದರು. ಅಬ್ಬಾಸ್ 21 ಎಸೆತಗಳಲ್ಲಿ 17 ರನ್ ಬಾರಿಸಿದರು. ಈ ಗೆಲುವಿನೊಂದಿಗೆ ಪಾಕಿಸ್ತಾನ ತಂಡ ಎ ಗುಂಪಿನಲ್ಲಿ ಮೂರನೇ ಸ್ಥಾನ ಪಡೆದುಕೊಂಡಿದೆ. ಹೀಗಾಗಿ ಭಾರತ ಮತ್ತು ಅಮೆರಿಕ ತಂಡಗಳು ಎ ಗುಂಪಿನಿಂದ ಸೂಪರ್ 8 ಸುತ್ತಿಗೆ ಅರ್ಹತೆ ಪಡೆದಿವೆ.**

19ನೇ ಓವರ್‌ನಲ್ಲಿ ಮಾಜಿ ನಾಯಕ ಶಾಹೀನ್ ಶಾ ಅಫ್ರಿದಿ 2 ಸಿಕ್ಸರ್ ಸಿಡಿಸಿ ತಂಡವನ್ನು ಗೆಲುವಿನ ದಡ ಮುಟ್ಟಿಸಿದರು.

ಒಂದು ಹಂತದಲ್ಲಿ ಪಾಕಿಸ್ತಾನ 62 ರನ್‌ಗಳಿಗೆ ಆರು ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿತ್ತು. ಆದಾಗ್ಯೂ, ನಾಯಕ ಬಾಬರ್ ಆಝಂ ಮತ್ತು ಅಬ್ಬಾಸ್ ಆಫ್ರಿದಿ ನಡುವೆ ಏಳನೇ ವಿಕೆಟ್‌ಗೆ 33 ರನ್‌ಗಳ ಜೊತೆಯಾಟ ಮತ್ತು ನಂತರ ಶಾಹೀನ್ ಆಫ್ರಿದಿ ಅವರ ಎರಡು ಸಿಕ್ಸರ್‌ಗಳು ಪಾಕಿಸ್ತಾನ ತಂಡವನ್ನು ಗೆಲುವಿನತ್ತ ಮುನ್ನಡೆಸಿದವು.

**ಆರಂಭದಲ್ಲೇ ಮುಗ್ಗರಿಸಿದ ಐರ್ಲೆಂಡ್**

ಇದಕ್ಕೂ ಮೊದಲು ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಐರ್ಲೆಂಡ್ 20 ಓವರ್‌ಗಳಲ್ಲಿ 9 ವಿಕೆಟ್ ಕಳೆದುಕೊಂಡು 106 ರನ್ ಗಳಿಸಿತ್ತು. ತಂಡದ ಪರ ಡೆಲಾನಿ 19 ಎಸೆತಗಳಲ್ಲಿ ಒಂದು ಬೌಂಡರಿ ಹಾಗೂ ಮೂರು ಸಿಕ್ಸರ್‌ಗಳ ನೆರವಿನಿಂದ 31 ರನ್ ಗಳಿಸಿದರು. ಒಂದು ಹಂತದಲ್ಲಿ ಐರ್ಲೆಂಡ್ 32 ರನ್‌ಗಳಿಗೆ ಆರು ವಿಕೆಟ್ ಕಳೆದುಕೊಂಡಿತ್ತು. ಆದಾಗ್ಯೂ, ಡೆಲಾನಿ ಮತ್ತು ನಂತರ ಮಾರ್ಕ್ ಅಡೇರ್ ಅವರ 15 ರನ್ ಮತ್ತು ಜೋಶುವಾ ಲಿಟಲ್ ಅವರ ಔಟಾಗದೆ 22 ಐರ್ಲೆಂಡ್ ತಂಡವನ್ನು 100 ರನ್‌ಗಳ ದಾಟಿಸಿತು.

# ಸದ್ಯಕ್ಕಿನ್ನು ಆರೋಪಿ ಅಪರಾಧಿಯಾಗಿಲ್ಲ

ಸ್ಯಾಂಡಲ್‌ವುಡ್ ನಟ ದರ್ಶನ್ ಇದೀಗ ರೇಣುಕಾಸ್ವಾಮಿ ಕೊಲೆ ಪ್ರಕರಣ ಅರೆಸ್ಟ್ ಆಗಿದ್ದಾರೆ. ಕಾನೂನಿನ ಮುಂದೆ ನಾವೆಲ್ಲರೂ ಚಿಕ್ಕವರೆ. ಸದ್ಯಕ್ಕಿನ್ನು ಆರೋಪಿಯಷ್ಟೆ, ಅಪರಾಧಿಯಾಗಿಲ್ಲ ಎಂದು ದರ್ಶನ್ ಪ್ರಕರಣದ ವಿಚಾರವಾಗಿ ನಟಿ ಅನುಷಾ ರೈ ಪ್ರತಿಕ್ರಿಯೆ ನೀಡಿದ್ದಾರೆ.

ದರ್ಶನ್ ಪ್ರಕರಣದ ವಿಚಾರವಾಗಿ ಅನುಷಾ ರೈ ಇನ್ಸ್ಟಾಗ್ರಾಂ ಸುಧೀರ್ಘವಾಗಿ ಬರೆದುಕೊಂಡಿದ್ದಾರೆ. ಅಭಿಮಾನಿಗಳು ನನಗೆ ವರ್ಷದ 365 ದಿನವೂ ಊಟ ಹಾಕ್ತಾರೆ. ಆದರೆ ನಾನು ಹುಟ್ಟುಹಬ್ಬದ ಒಂದು ದಿನ ಮಾತ್ರ ಅವರಿಗೆ ಊಟ ಹಾಕ್ತೀನಿ ಎಂದವರು ದರ್ಶನ್. ಮೈಮೇಲೆ ಆತರ ನನ್ನ ಹೆಸರನ್ನು ಹಚ್ಚೆ ಹಾಕಿಸಿಕೊಳ್ಳಬೇಡಿ ಸಿನಿಮಾ ನೋಡಿ ಸಾಕು, ನಿಮ್ಮ ಅಪ್ಪ ಅಮ್ಮನ ಹೆಸರು ಹಾಕಿಸಿಕೊಳ್ಳಿ ಎನ್ನುತ್ತಾ ತಾವೇ ಎದೆಯ ಮೇಲೆ ನನ್ನ ಸೆಲೆಬ್ರಿಟೀಸ್ ಎಂದು ಹಚ್ಚೆ ಹಾಕಿಸಿಕೊಂಡ ಅಭಿಮಾನಿಗಳ ದಾಸ. ನಾನು ಕಾರಲ್ಲಿ ಸ್ಪೀಡಾಗಿ ಹೋಗೋವಾಗ ಹಿಂದೆ ಬರಬೇಡಿ, ಅಕಸ್ಮಾತ್ ಆಕ್ಸಿಡೆಂಟ್ ಆಗಿ ಹೆಚ್ಚು ಕಮ್ಮಿ ಆದ್ರೆ ನಿಮ್ಮ ಕುಟುಂಬದ ಗತಿ ಏನು ಎಂದು ಅಭಿಮಾನಿಗಳಿಗೆ ಪ್ರೀತಿಯಿಂದ ಕಾಳಜಿಯಿಂದ ಬುದ್ಧಿವಾದ ಹೇಳಿದ್ದ ಈ ಮೈಸೂರಿನ ಆರಡಿಯ ತೂಗುದೀಪ ಎಂದು ಹೇಳಿದ್ದಾರೆ. ಇಂತಹ ವ್ಯಕ್ತಿಯಿಂದ ಇಂತಹ ತಪ್ಪಾಯಿತೆಂದರೆ ನಂಬಲಸಾಧ್ಯ. ಅದೇನೆ ಆದರೂ ಕಾನೂನು ಇದೆ ನೋಡಿಕೊಳ್ಳುತ್ತೆ. ತಪ್ಪು ಮಾಡಿಲ್ಲವಾದರೆ ಅವರ ದಾನಧರ್ಮಗಳೇ ಅವರನ್ನ ಕಾಪಾಡುತ್ತೆ. ಕಾನೂನಿನ ಮುಂದೆ ನಾವೆಲ್ಲರೂ ಚಿಕ್ಕವರೆ. ಸದ್ಯಕ್ಕಿನ್ನು ಆರೋಪಿಯಷ್ಟೆ ಅಪರಾಧಿಯಾಗಿಲ್ಲ. ಮುಂದೆ ಕಾದು ನೋಡೋಣ.

ಕಾನೂನಿನ ಮುಂದೆ ಚಿಕ್ಕವರೆ

ಇನ್ನು ಈ ಅನಾಹುತಕ್ಕೆ ಬಲಿಯಾದ ರೇಣುಕಾಸ್ವಾಮಿಗೂ ಅವರ ಕುಟುಂಬಕ್ಕೂ ಆ ದೇವರು ದುಃಖವನ್ನು ಭರಿಸೋ ಶಕ್ತಿ ನೀಡಲಿ. ಅವರು ಮಾಡಿದ್ದು ಸಹ ತಪ್ಪೇ ಆದರೂ ಈರೀತಿಯ ಶಿಕ್ಷೆ ಸರಿಯಲ್ಲ. ಕಾನೂನಿನ ಪ್ರಕಾರವೇ ರೇಣುಕಾಸ್ವಾಮಿಗೆ ಶಿಕ್ಷೆ ಕೊಡಿಸೊ ಬದಲು ಯಾರೋ ಜೀವ ತೆಗೆದಿದ್ದು ಅಕ್ಷಮ್ಯ ಅಪರಾಧ. ತಂದೆಯಾಗುವ ಮೊದಲೇ ಕಣ್ ಮುಚ್ಚಿದ ರೇಣುಕಾಸ್ವಾಮಿ ಮತ್ತೆ ಮಗುವಾಗಿ ಹೆಂಡತಿಯ ಹೊಟ್ಟೆಯಲ್ಲಿ ಹುಟ್ಟಲಿ ಅನ್ನೋದೇ ನಮ್ಮ ಹಾರೈಕೆ. ಕ್ಷಮಿಸಿ ಎಂದು ನಟಿ ಬರೆದುಕೊಂಡಿದ್ದಾರೆ. ಈ ಪ್ರಕರಣದಲ್ಲಿ ದರ್ಶನ್ ಕುಟುಂಬಕ್ಕೆ ಶಾಪ ಹಾಕಿದರೆ ಪ್ರಯೋಜನವೇನು.

ನನ್ನ ತಂದೆ ಒಬ್ಬ ದೊಡ್ಡ ಸ್ಟಾರ್ ಅನ್ನೋದು ಸಹ ಗೊತ್ತಿಲ್ಲದ ಆ ಹಾಲುಗಲ್ಲದ ಮುದ್ದು ಹುಡುಗ ವಿನೀಶ್ ನೋಡಿದರೆ ಸಂಕಟವಾಗದಿರುವುದೆ ಫಾದರ್ಸ್ ಡೇ ದಿನ ತಂದೆಯನ್ನು ನೆನೆದು ವಿನೀಶ್ ಹಾಕಿದ ಪೋಸ್ಟ್‌ಗೆ ಮನಕಲಕದೆ ಇರುವುದೇ ಎಂದು ನಟಿ ಹೇಳಿದ್ದಾರೆ.



# ಪುಷ್ಪ 2 ಸಿನಿಮಾ ರಿಲೀಸ್ ಮತ್ಯಾವಾಗ?

ಐಕಾನ್ ಸ್ಟಾರ್ ಅಲ್ಲು ಅರ್ಜುನ್ ರಶ್ಮಿಕಾ ಮಂದಣ್ಣ ನಟನೆಯ 'ಪುಷ್ಪ 2' ಸಿನಿಮಾ ಬಗ್ಗೆ ಕೆಲದಿನಗಳಿಂದ ರಿಲೀಸ್ ಬಗ್ಗೆ ಗೊಂದಲ ಶುರುವಾಗಿದೆ. ಆಗಸ್ಟ್ 15ಕ್ಕೆ ರಿಲೀಸ್ ಆಗಬೇಕಿದ್ದ ಸಿನಿಮಾ ಮುಂದಕ್ಕೆ ಹೋಗಿದೆ. ಜೊತೆಗೆ ರಿಲೀಸ್ ಬಗ್ಗೆ ಬಿಗ್ ಅಪ್‌ಡೇಟ್ ಸಿಕ್ಕಿದೆ.

ಇಡೀ ಚಿತ್ರತಂಡ ಶೂಟಿಂಗ್ ಮತ್ತು ಪೋಸ್ಟ್ ಪ್ರೊಡಕ್ಷನ್ ಕೆಲಸದಲ್ಲಿ ಬ್ಯುಸಿಯಾಗಿರುವುದರಿಂದ ಆಗಸ್ಟ್ 15ಕ್ಕೆ ಬಿಡುಗಡೆಯಾಗೋದು ಕಷ್ಟ ಎನ್ನಲಾಗ್ತಿದೆ. ಸ್ಟಾರ್ ನಟನ ಬಿಗ್ ಬಜೆಟ್ ಸಿನಿಮಾ ಆಗಿರೋದ್ರಿಂದ ಎಚ್ಚರಿಕೆಯಿಂದ ಕೆಲಸದಲ್ಲಿ ಲೋಪ ಬರದಂತೆ ಸಿನಿಮಾ ಪೂರ್ಣಗೊಳಿಸಬೇಕಿದೆ.

ಇದು ಪ್ಯಾನ್ ಇಂಡಿಯಾ ಸಿನಿಮಾ ಆಗಿರೋದ್ರಿಂದ ಪ್ರಚಾರಕ್ಕೂ ಸಮಯ ಮೀಸಲಿಡಬೇಕಿದೆ. ಹಾಗಾಗಿ ಆಗಸ್ಟ್ 15ಕ್ಕೆ ರಿಲೀಸ್ ಆಗಬೇಕಿದ್ದ 'ಪುಷ್ಪ 2' ಸಿನಿಮಾವನ್ನು ಡಿಸೆಂಬರ್‌ನಲ್ಲಿ ರಿಲೀಸ್ ಮಾಡಲು ಚಿತ್ರತಂಡ ಪ್ಲ್ಯಾನ್ ಮಾಡಿದ್ದಾರೆ ಎನ್ನಲಾಗಿದೆ. 'ಪುಷ್ಪ ಪಾರ್ಟ್ 1' ಸಿನಿಮಾ ಡಿಸೆಂಬರ್ 17ರಂದು ರಿಲೀಸ್ ಆಗಿತ್ತು. ಹಾಗಾಗಿ ಇದೇ ಸಂದರ್ಭದಲ್ಲಿ ಬಿಡುಗಡೆ ಮಾಡಿದ್ದಾರೆ.

ಅಂದಹಾಗೆ, ಈ ಹಿಂದೆ ತೆರೆಕಂಡ 'ಪುಷ್ಪ ಪುಷ್ಪ' ಟೈಟಲ್ ಸಾಂಗ್, ಅಲ್ಲು ಅರ್ಜುನ್ ಮತ್ತು ರಶ್ಮಿಕಾ ಮಂದಣ್ಣ ಹೆಜ್ಜೆ ಹಾಕಿದ ಕಪಲ್ ಸಾಂಗ್ ಮಿಲಿಯನ್ ಗಟ್ಟಲೇ ವಿವ್ಸ್ ಪಡೆದು ಉತ್ತಮ ರೆಸ್ಪಾನ್ಸ್ ಗಿಟ್ಟಿಸಿಕೊಂಡಿತ್ತು. ಆದರಿಂದಲೇ ಸಿನಿಮಾ ಬಗ್ಗೆ ಫ್ಯಾನ್ಸ್‌ಗೆ ನಿರೀಕ್ಷೆ ಕೂಡ ದುಪ್ಪಟ್ಟಾಗಿತ್ತು. ಆದರೆ ಈಗ ರಿಲೀಸ್ ಡೇಟ್ ಮುಂದಕ್ಕೆ ಹೋಗುವ ಸಾಧ್ಯತೆ ಇದೆ ಎಂಬ ವಿಚಾರ ಕೇಳಿ ಫ್ಯಾನ್ಸ್ ನಿರಾಶರಾಗಿದ್ದಾರೆ. ಯಾವದಕ್ಕೂ ಚಿತ್ರತಂಡದ ಕಡೆಯಿಂದ ಅಧಿಕೃತ ಘೋಷಣೆ ಆಗುವವರೆಗೂ ಕಾದುನೋಡಬೇಕಿದೆ.

ಇನ್ನೂ ಸುಕುಮಾರ್ ನಿರ್ದೇಶನದ ಈ ಚಿತ್ರದಲ್ಲಿ ಹೀರೋ, ಸಾಮಾನ್ಯ ವ್ಯಕ್ತಿ ಆಗಿರುವ ಪುಷ್ಪರಾಜ್ ರಕ್ತ ಚಂದನದ ದಂಧೆಯಲ್ಲಿ ಸೇರಿಕೊಳ್ಳುತ್ತಾನೆ. ಆ ಬಳಿಕ ಆತ ದೊಡ್ಡ ವ್ಯಕ್ತಿಯಾಗಿ ಬೆಳೆಯುತ್ತಾನೆ. ಎರಡನೇ ಭಾಗದಲ್ಲಿ ಇದೇ ಕಥೆ ಹೈಲೈಟ್ ಆಗಲಿದೆ. ರಕ್ತ ಚಂದನದ ದಂಧೆಯಲ್ಲಿ ಬೆಳೆದು ನಿಂತ ಮೇಲೆ ಸಿನಿಮಾದಲ್ಲಿ ಏನೆಲ್ಲಾ ತಿರುವು ಇರಲಿದೆ ಎಂಬುದನ್ನ ಪಾರ್ಟ್ 2ನಲ್ಲಿ ತೋರಿಸಲಾಗುತ್ತದೆ.

ಸಿನಿಮಾದಲ್ಲಿ ಅಲ್ಲು ಅರ್ಜುನ್, ರಶ್ಮಿಕಾ ಮಂದಣ್ಣ, ಫಹಾದ್ ಫಾಸಿಲ್, ಅನಸೂಯ ಭಾರದ್ವಾಜ್, ಡಾಲಿ ಧನಂಜಯ್ ಸೇರಿದಂತೆ ಅನೇಕರು ನಟಿಸಿದ್ದಾರೆ.



# ಅನಿಮೇಷನ್ ಲುಕ್‌ನಲ್ಲಿ ರಶ್ಮಿಕಾ

ಕೊಡಗಿನ ಬೆಡಗಿ ಮಂದಣ್ಣಗೆ ಕೊರಿಯನ್ ಡ್ರಾಮಾ ಅಂದರೆ ಇಷ್ಟ. ಅನಿಮೇಷನ್ ಸಿನಿಮಾಗಳಿಗೂ ಅವರು ಫ್ಯಾನ್ ಆಗಿದ್ದಾರೆ. ಸದ್ಯ ಆನಿಮೇಷನ್ ಪಾತ್ರದ ಲುಕ್‌ನಲ್ಲಿ ರಶ್ಮಿಕಾ ಮಂದಣ್ಣ ಕಾಣಿಸಿಕೊಂಡಿದ್ದಾರೆ. ಈ ಲುಕ್‌ನ ಸುಂದರ ಫೋಟೋವೊಂದನ್ನು ಹಂಚಿಕೊಂಡಿದ್ದಾರೆ. ಆನಿಮೇಷನ್ ಸಿನಿಮಾ 'ಕೈಜು ನಂ.8'ರ ಪಾತ್ರದಲ್ಲಿ ಲುಕ್‌ನಲ್ಲಿ ರಶ್ಮಿಕಾ ಕಾಣಿಸಿಕೊಂಡಿದ್ದಾರೆ.

ಈ ಆನಿಮೆ ಪ್ರಚಾರದಲ್ಲೂ ನಟಿ ತೊಡಗಿಸಿಕೊಂಡಿದ್ದಾರೆ. 'ಕೈಜು ನಂ.8' ಸ್ಟೋರಿ ತೆಲುಗು ಮತ್ತು ತಮಿಳಿನಲ್ಲಿಯೂ ಡಬ್ ಆಗಿ ಬರುತ್ತಿದೆ ಎಂದು ಕೂಡ ನಟಿ ಸೋಷಿಯಲ್ ಮೀಡಿಯಾದಲ್ಲಿ ಮಾಹಿತಿ ನೀಡಿದ್ದಾರೆ. ಅಂದಹಾಗೆ, ಇತ್ತೀಚೆಗೆ ಟೋಕಿಯೋದಲ್ಲಿ ನಡೆದ ಆನಿಮೆ ಅವಾರ್ಡ್ ಕಾರ್ಯಕ್ರಮದಲ್ಲಿ ಭಾಗಿಯಾಗಿ ಆನಿಮೇಷನ್ ಮೇಲಿನ ಪ್ರೀತಿಯನ್ನು 'ಪುಷ್ಪ 2' ನಟಿ ಹಂಚಿಕೊಂಡಿದ್ದರು.

ಇನ್ನೂ ರಶ್ಮಿಕಾ ನಯಾ ಲುಕ್‌ಗೆ ಆನಿಮೆ ಪ್ರಿಯರು ಫಿದಾ ಆಗಿದ್ದಾರೆ. ನಟಿಯ ಲುಕ್‌ಗೆ ಬಗೆ ಬಗೆಯ ಕಾಮೆಂಟ್‌ಗಳು ಹರಿದು ಬರುತ್ತಿವೆ.

ಇನ್ನೂ ಪುಷ್ಪ 2, ಅನಿಮಲ್ ಪಾರ್ಕ್, ರೈನ್‌ಬೋ, ದಿ ಗರ್ಲ್‌ಫ್ರೆಂಡ್, ಚಾವಾ, ಸಿಖಂದರ್ ಸಿನಿಮಾ ಸೇರಿದಂತೆ ಹಲವು ಚಿತ್ರಗಳು ನಟಿಯ ಕೈಯಲ್ಲಿವೆ.



# ಹಾಸನದಲ್ಲಿ ಕಾಣಿಸಿಕೊಂಡ ನೀಲಿ ತಾರೆ

ಬಾಲಿವುಡ್ ಬೆಡಗಿ ಸನ್ನಿ ಲಿಯೋನ್‌ಗೆ ಕರ್ನಾಟಕವೇನು ಹೊಸದಲ್ಲ. ಈಗಾಗಲೇ ಕನ್ನಡದ ಸಿನಿಮಾಗಳಲ್ಲಿ ಕಾಣಿಸಿಕೊಂಡು ಸೈ ಎನಿಸಿಕೊಂಡಿದ್ದಾರೆ. ಆಗಾಗ ಬೆಂಗಳೂರಿಗೆ ಬಂದು ಸಿನಿಮಾ ಪ್ರಚಾರ ಕಾರ್ಯಕ್ಕೂ ಚಿತ್ರತಂಡಕ್ಕೆ ಸಾಥ್ ನೀಡಿದ್ದು ಇದೆ. ಆದರೆ ಈಗ ತಮಿಳು ಸಿನಿಮಾವೊಂದರ ಚಿತ್ರೀಕರಣಕ್ಕಾಗಿ ಹಾಸನ ಜಿಲ್ಲೆಯ ಚೆನ್ನರಾಯಪಟ್ಟಣದ ಕಬ್ಬಳಿ ಗ್ರಾಮದಲ್ಲಿ ಸನ್ನಿ ಲಿಯೋನ್ ಭಾಗಿಯಾಗಿದ್ದಾರೆ. ಕಬ್ಬಳಿ ಗ್ರಾಮಕ್ಕೆ ಆಗಮಿಸಿದ ಸನ್ನಿ, ಶಾಲೆಯಲ್ಲಿ ಶೂಟಿಂಗ್ ನಡೆಸಿದ್ದಾರೆ. ಬಳಿಕ ತರಗತಿಗೂ ಭೇಟಿ ನೀಡಿ ಅಲ್ಲಿನ ಮಕ್ಕಳ ಜೊತೆ ನಟಿ ಕಾಲ ಕಳೆದಿದ್ದಾರೆ. ಇದೇ ವೇಳೆ, ಮಕ್ಕಳ ಜೊತೆ ಫೋಟೋ ಕ್ಲಿಕ್ಕಿಸಿಕೊಂಡಿದ್ದಾರೆ. ಕಪ್ಪು ಬಣ್ಣ ಟೀ ಶರ್ಟ್ ಮತ್ತು ಪ್ಯಾಂಟ್‌ಗೆ ಬಿಳಿ ಬಣ್ಣದ ಶರ್ಟ್ ಧರಿಸಿದ್ದಾರೆ. ಅಂದಹಾಗೆ, 'ಕೊಟೇಶನ್ ಗ್ಯಾಂಗ್' ಚಿತ್ರದ ಬಹುತೇಕ ಚಿತ್ರೀಕರಣ ಕರ್ನಾಟಕದಲ್ಲಿ ಪೂರ್ಣಗೊಂಡಿದೆ. ಈ ವೇಳೆ, ಸಾಕಷ್ಟು ಅಭಿಮಾನಿಗಳು ಸನ್ನಿ ಲಿಯೋನ್ ಅವರನ್ನು ಭೇಟಿಯಾಗಿ ಫೋಟೋ ಕ್ಲಿಕ್ಕಿಸಿಕೊಂಡಿದ್ದಾರೆ. 'ಕೊಟೇಶನ್ ಗ್ಯಾಂಗ್' ಸಿನಿಮಾದಲ್ಲಿ ಸನ್ನಿ ಜೊತೆ ಜಾಕಿ ಶ್ರಾಫ್, ಪ್ರಿಯಾ ಮಣಿ ಸೇರಿದಂತೆ ಅನೇಕರು ನಟಿಸಿದ್ದಾರೆ. ಸದ್ಯದಲ್ಲೇ ಈ ಸಿನಿಮಾ ರಿಲೀಸ್ ಆಗಲಿದೆ.



# ಲಂಡನ್‌ನತ್ತ 'ಟಾಕ್ಸಿಕ್' ಟೀಮ್

ನ್ಯಾಷನಲ್ ಸ್ಟಾರ್ ಯಶ್ ಸದ್ಯ 'ಟಾಕ್ಸಿಕ್' ಸಿನಿಮಾ ಕೆಲಸದಲ್ಲಿ ಬ್ಯುಸಿಯಾಗಿದ್ದಾರೆ. 'ಟಾಕ್ಸಿಕ್' ಚಿತ್ರದ ಕೆಲಸ ಎಲ್ಲಿಯವರೆಗೆ ಬಂತು ಎಂದು ಕೇಳುವವರಿಗೆ ಇಲ್ಲಿದೆ ಲೇಟೆಸ್ಟ್ ಸುದ್ದಿ. ಸದ್ಯ ಚಿತ್ರೀಕರಣಕ್ಕಾಗಿ ಯಶ್ ಟೀಮ್ ಲಂಡನ್‌ಗೆ ಹಾರಲಿದೆ. ಅದಕ್ಕಾಗಿ ತೆರೆಮರೆಯಲ್ಲಿ ಭರ್ಜರಿ ತಯಾರಿ ಕೂಡ ನಡೆಯುತ್ತಿದೆ. ಮಲಯಾಳಂ ನಿರ್ದೇಶಕಿ ಗೀತು ಮೋಹನ್ ದಾಸ್ ಜೊತೆ ಯಶ್ ಕೈಜೋಡಿಸಿದ್ದಾರೆ. ಯಶ್ ಜೊತೆ ನಯನತಾರಾ, ಕಿಯಾರಾ ಅಡ್ವಾಣಿ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಳ್ತಿದ್ದಾರೆ. 150ಕ್ಕೂ ಹೆಚ್ಚು ದಿನ ಶೂಟಿಂಗ್ ಮಾಡಲು ಯಶ್ ಪ್ಲ್ಯಾನ್ ಮಾಡಿದ್ದಾರೆ. ಸಿನಿಮಾದ ಬಹುಪಾಲು ಚಿತ್ರೀಕರಣ ಲಂಡನ್‌ನಲ್ಲಿಯೇ ಆಗಲಿದೆ. ಈ ಚಿತ್ರದಲ್ಲಿ ಯಶ್ ಸ್ಟೈಲೀಶ್ ಡಾನ್ ಪಾತ್ರವನ್ನು ನಿರ್ವಹಿಸುತ್ತಿದ್ದಾರೆ. ಇದು ಕೆಜಿಎಫ್ ಸರಣಿ ಪಾತ್ರಕ್ಕಿಂತಲೂ ತುಂಬಾ ವಿಭಿನ್ನವಾಗಿದೆ. ಅಂಡರ್‌ವರ್ಲ್ಡ್ ಡಾನ್ ಪಾತ್ರಕ್ಕೆ ರಾಕಿ ಭಾಯ್ ಜೀವ ತುಂಬಲಿದ್ದಾರೆ. ಕಿಯಾರಾ ನಾಯಕಿ ಪಾತ್ರಕ್ಕೆ ಬಣ್ಣ ಹಚ್ಚಿದ್ದಾರೆ.

ಸಖತ್ ಹಾಟ್ ಮಗ

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**